# ಜನತಾ ವಾಣಿ

ಮಧ್ಯ ಕರ್ನಾಟಕದ ಆಪ್ತ ಒಡನಾಡಿ

ಸಂಪಾದಕರು : ಎಂ.ಎಸ್. ವಿಕಾಸ್

ದಾವಣಗೆರೆ
ಸೋಮವಾರ, ಜುಲೈ 08, 2024

ಸಂಪುಟ : 51 ಸಂಚಿಕೆ : 55 ☎ 08192-254736 91642 99999 RNI No: 27369 ಪುಟ : 6 ರೂ : 5.00 www.janathavani.com janathavani@mac.com





ಯಕ್ಷಗಾನ

*ಹಿಮ್ಮೇಳ, ಮುಮ್ಮೇಳ ಮೇಳೈಸಿ ಕನ್ನಡ ನಾಡಿನ ಮೂಲ ಸಂಸ್ಕೃತಿಯೇ ಪಾತ್ರಗಳ ರೂಪದಲ್ಲಿ ಪ್ರತ್ಯಕ್ಷವಾಗಿ ಸಾಂಸ್ಕೃತಿಕ ವೈಭವವನ್ನು ಮೆರೆದ ಯಕ್ಷಗಾನ ಕಥಾ ಪ್ರಸಂಗ.*

ದಾವಣಗೆರೆ ದೃಶ್ಯಕಲಾ ಮಹಾವಿದ್ಯಾಲಯದ ಬಯಲು ರಂಗಮಂದಿರದಲ್ಲಿ ಭಾನುವಾರ ಸಂಜೆ ಏರ್ಪಾಡಾಗಿದ್ದ 'ಮಹಾಶಕ್ತಿ ವೀರಭದ್ರ' ಪ್ರಸಂಗವನ್ನು ಉಡುಪಿ ಮಂದಾರ್ತಿಯ ಶ್ರೀ ಮಹಾಗಣಪತಿ ಯಕ್ಷಗಾನ ಮಂಡಳಿಯ ಕಲಾವಿದರು ನಡೆಸಿಕೊಟ್ಟರು. ಸವಿಡೈನ್ ಮಹೇಶ್ ಶೆಟ್ಟಿ ಗೆಳೆಯರ ಬಳಗ - ಕರಾವಳಿ ಮಿತ್ರಮಂಡಳಿ ಆಶ್ರಯದಲ್ಲಿ ಕಾರ್ಯಕ್ರಮ ಆಯೋಜನೆಗೊಂಡಿತ್ತು.

## ಆಯುಷ್ಮಾನ್ ಭಾರತ್ ವಿಮೆ ಎರಡು ಪಟ್ಟು ಹೆಚ್ಚಿಸಲು ಪರಿಶೀಲನೆ

ನವದೆಹಲಿ, ಜು. 7 - ಕೇಂದ್ರ ಸರ್ಕಾರದ ಆಯುಷ್ಮಾನ್ ಭಾರತ್ ಆರೋಗ್ಯ ವಿಮೆಯ ಮೊತ್ತವನ್ನು ಮುಂದಿನ ಮೂರು ವರ್ಷಗಳಲ್ಲಿ ಎರಡು ಪಟ್ಟು ಹೆಚ್ಚಿಸಲು ಕೇಂದ್ರ ಸರ್ಕಾರ ಪರಿಶೀಲಿಸುತ್ತಿದೆ.

ಈ ಯೋಜನೆಯಲ್ಲಿ 70 ವರ್ಷ ಮೀರಿದ ಎಲ್ಲರನ್ನೂ ಸೇರ್ಪಡೆ ಮಾಡುವ ಜೊತೆಗೆ ವಿಮೆ ಮೊತ್ತವನ್ನು 10 ಲಕ್ಷ ರೂಗಳಿಗೆ ಹೆಚ್ಚಿಸಲು ಪರಿಶೀಲಿಸಲಾಗುತ್ತಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ. ಈ ಪ್ರಸ್ತಾವನೆಗೆ ಒಪ್ಪಿಗೆ ನೀಡಿದಲ್ಲಿ ವರ್ಷಕ್ಕೆ 12,076 ಕೋಟಿ ರೂ.ಗಳ ಹೆಚ್ಚುವರಿ ವೆಚ್ಚವಾಗಲಿದೆ.

ಈ ಪ್ರಸ್ತಾವನೆಗಳು ಜಾರಿಗೆ ಬಂದಲ್ಲಿ ದೇಶದ ಮೂರನೇ ಎರಡರಷ್ಟು ಜನರು ವಿಮೆ ವ್ಯಾಪ್ತಿಗೆ ಒಳಪಡಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಪ್ರಸಕ್ತ 5 ಲಕ್ಷ ವಿಮೆ ನೀಡಲಾಗುತ್ತಿದೆ. ಇದನ್ನು 10 ಲಕ್ಷ ರೂಗಳಿಗೆ ಏರಿಸಲು ಚರ್ಚೆಗಳು ನಡೆಯುತ್ತಿವೆ. ಮುಂಬರುವ ಲೋಕಸಭಾ ಬಜೆಟ್‌ನಲ್ಲಿ ಈ ಪ್ರಸ್ತಾವನೆಗಳು ಇಲ್ಲವೇ ಪ್ರಸ್ತಾವನೆಯ ಕೆಲ ಅಂಶಗಳು (2ನೇ ಪುಟಕ್ಕೆ)

# ಏರಿದ ತಾಪ, ಕುಸಿದ ಮಳೆ

## 20 ವರ್ಷಗಳಲ್ಲಿ ವೇಗವಾಗಿ ಖಾಲಿಯಾದ ಅಂತರ್ಜಲ

ನವದೆಹಲಿ, ಜು. 7 - 2002 ರಿಂದ 2021ರ ನಡುವೆ ಉತ್ತರ ಭಾರತದಲ್ಲಿ ಸುಮಾರು 450 ಕ್ಯೂಬಿಕ್ ಕಿಲೋ ಮೀಟರ್ ಪ್ರಮಾಣದ ಅಂತರ್ಜಲ ಖಾಲಿ ಯಾಗಿದೆ. ಮುಂಬರುವ ದಿನಗಳಲ್ಲಿ ಅಂತರ್ಜಲ ಇನ್ನಷ್ಟು ವೇಗವಾಗಿ ಖಾಲಿಯಾಗಲಿದೆ ಎಂದು ಹೊಸ ಅಧ್ಯಯನ ಒಂದು ತಿಳಿಸಿದೆ.

ಅಂತರ್ಜಾಲದ ಬಳಕೆ ಪ್ರಮಾಣ ದೇಶದ ಅತಿ ದೊಡ್ಡ ಅಣೆಕಟ್ಟೆಯಾದ ಇಂದಿರಾ ಸಾಗರ್‌ಗಿಂತ 37 ಪಟ್ಟು ಹೆಚ್ಚಾಗಿದೆ ಎಂದು ಗಾಂಧಿನಗರ ಐಐಟಿಯ ಸಿವಿಲ್ ಇಂಜಿನಿಯರಿಂಗ್ ವಿಭಾಗದ ವಿಕ್ರಂ ಸಾರಾಭಾಯಿ ಪೀಠದ ಪ್ರೊ. ವಿಮಲ್ ಮಿಶ್ರ ಹೇಳಿದ್ದಾರೆ.

ಉಪಗ್ರಹದ ಮೂಲಕ ದೊರೆತ ಮಾಹಿತಿ ಆಧರಿಸಿ ಈ ವರದಿ ರೂಪಿಸಲಾಗಿದೆ.

1951 ರಿಂದ 2021ರ ನಡುವೆ ಉತ್ತರ ಭಾರತದಲ್ಲಿ ಮುಂಗಾರು ಮಳೆ ಪ್ರಮಾಣ ಶೇಕಡ 8.5ರಷ್ಟು ಕಡಿಮೆಯಾಗಿದೆ. ಚಳಿಗಾಲದ ತಾಪಮಾನ 0.3 ಡಿಗ್ರಿ ಸೆಲ್ಸಿಯಸ್‌ನಷ್ಟು ಹೆಚ್ಚು ಬಿಸಿಯಾಗಿದೆ ಎಂದು ವರದಿ ತಿಳಿಸಿದೆ.

ಹೈದರಾಬಾದ್ ನ್ಯಾಷನಲ್ ಜಿಯೋ ಫಿಸಿಕಲ್ ರಿಸರ್ಚ್ ಇನ್‌ಸ್ಟಿಟ್ಯೂಟ್ ಸಂಶೋಧಕರು ಈ ಅಧ್ಯಯನದಲ್ಲಿ ಭಾಗಿಯಾಗಿದ್ದಾರೆ.

ಮುಂಗಾರಿನಲ್ಲಿ ಮಳೆ ಕಡಿಮೆ ಆಗಿರುವುದು ಹಾಗೂ ಚಳಿಗಾಲದಲ್ಲಿ ಬಿಸಿ ಹೆಚ್ಚಾಗಿರುವ ಕಾರಣದಿಂದ ಬೆಳೆಗಳಿಗೆ ನೀರಿನ ಬೇಡಿಕೆ ಹೆಚ್ಚಾಗಿದೆ.

ಅಂತರ್ಜಲ ಬಳಕೆ ಹೆಚ್ಚಾಗುವ ಜೊತೆಗೆ ಅಂತರ್ಜಲ ಮರುಪೂರಣವೂ ಕಡಿಮೆಯಾಗಿದೆ ಎಂದು ವರದಿ ತಿಳಿಸಿದೆ.

ಭೂಮಿಯ ತಾಪಮಾನ ನಿರಂತರವಾಗಿ ಹೆಚ್ಚಾಗುತ್ತಿರುವ ಕಾರಣ ಅಂತರ್ಜಲದ ಅವಲಂಬನೆ ಇನ್ನಷ್ಟು ಏರಲಿದೆ. ಈ ಕೊರತೆಯನ್ನು ನೀಗಿಸಲು ಅಗತ್ಯವಾದಷ್ಟು ಅಂತರ್ಜಲ ಲಭ್ಯವಿಲ್ಲ ಎಂದು ಮಿಶ್ರ ಹೇಳಿದ್ದಾರೆ.

ಮಳೆಯ ಕೊರತೆ ಹಾಗೂ ಚಳಿಗಾಲದಲ್ಲಿ ತಾಪಮಾನ ಏರಿಕೆ ಯಿಂದಾಗಿ ಅಂತರ್ಜಲ ಮರುಪೂರಣದಲ್ಲಿ ಶೇಕಡ ಆರರಿಂದ 12ರಷ್ಟು ಇಳಿಕೆಯಾಗಿದೆ ಎಂದು ಅಧ್ಯಯನದಿಂದ ತಿಳಿದುಬಂದಿದೆ.

ಅಂತರ್ಜಲ ಮರುಪೂರಣ ಹೆಚ್ಚಾಗಬೇಕಾದರೆ ಕಡಿಮೆ ತೀವ್ರತೆಯ ಮಳೆ ಹೆಚ್ಚು ದಿನಗಳವರೆಗೆ ಸುರಿಯಬೇಕಿದೆ. ಹೆಚ್ಚು ಮಳೆಯಾದಲ್ಲಿ ಅಂತರ್ಜಲದ ಸಮಸ್ಯೆ ಬಗೆಹರಿಯಲಿದೆ ಎಂಬ ವಾದವನ್ನು ಮಿಶ್ರ ತಳ್ಳಿ ಹಾಕಿದ್ದಾರೆ.

## ಪಶ್ಚಿಮ ಬಂಗಾಳದಲ್ಲಿ ಪ್ರವಾಹ

ನವದೆಹಲಿ, ಜು. 7 -ಪಶ್ಚಿಮ ಬಂಗಾಳದ ಹಲವೆಡೆ ಪ್ರಮುಖ ನದಿಗಳು ಉಕ್ಕಿ ಹರಿಯುತ್ತಿದ್ದು ಪ್ರವಾಹ ಪರಿಸ್ಥಿತಿ ಉಂಟಾಗಿದೆ. ಬಿಹಾರದಲ್ಲೂ ನದಿಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿವೆ. ಅಸ್ಸಾಂನಲ್ಲಿ 29 ಜಿಲ್ಲೆಗಳು ಪ್ರವಾಹ ಪೀಡಿತವಾಗಿವೆ. ಮುಖ್ಯಮಂತ್ರಿ ಹಿಮಂತ ಬಿಸ್ವ ಶರ್ಮ ಅವರು ಕಾಳಜಿ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ರಾಜ್ಯದ 24 ಲಕ್ಷ ಜನರು ಪ್ರವಾಹ ಪೀಡಿತರಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಬ್ರಹ್ಮಪುತ್ರ ಸೇರಿದಂತೆ ಹಲವಾರು ನದಿಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿವೆ. ಅಸ್ಸಾಂ ಪ್ರವಾಹದಲ್ಲಿ ಭಾನುವಾರ ಎಂಟು ಜನರು ಸಾವನ್ನಪ್ಪಿದ್ದಾರೆ. ಇದರಿಂದಾಗಿ ರಾಜ್ಯದಲ್ಲಿ ಪ್ರವಾಹ ಮತ್ತು ಭೂಕುಸಿತದಿಂದ ಸಾವನ್ನಪ್ಪಿದವರ ಸಂಖ್ಯೆ 78ಕ್ಕೆ ಏರಿಕೆಯಾಗಿದೆ.

ಪಶ್ಚಿಮ ಬಂಗಾಳದ ಡಾರ್ಜಿಲಿಂಗ್, ಜಲ್ಪೈ ಗುರಿ, ಕೂಚ್ ಬಿಹಾರ್ ಹಾಗೂ ಅಲಿಪುರ್ದೌರ್ ಜಿಲ್ಲೆಗಳಲ್ಲಿ ಪ್ರವಾಹ ಪರಿಸ್ಥಿತಿ ಉಂಟಾಗಿದೆ.

## ಜಲಪಾತದಲ್ಲಿ ಸಿಲುಕಿದ್ದ 80 ಜನರ ರಕ್ಷಣೆ

ಪಣಜಿ, ಜು. 7 - ಗೋವಾದ ಸತ್ತಾರಿ ತಾಲೂಕಿನಲ್ಲಿರುವ ಪಾಲಿ ಜಲಪಾತದಲ್ಲಿ 80 ಜನರು ಸಿಲುಕಿದ್ದು ಅವರೆಲ್ಲರನ್ನು ಅಗ್ನಿಶಾಮಕ ದಳ ರಕ್ಷಿಸಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ನದಿಯ ನೀರಿನ ಹರಿವು ಹೆಚ್ಚಾದ ಕಾರಣ ಜನರು ಅತಂತ್ರರಾಗಿದ್ದರು. ಈ ಪ್ರದೇಶದಲ್ಲಿ ಕಳೆದ ಒಂದು ವಾರದಿಂದ ಬಾರಿ ಮಳೆ ಸುರಿಯುತ್ತಿದೆ. ಭಾನುವಾರದಂದು ಜಲಪಾತ ವೀಕ್ಷಿಸಲು ಹೆಚ್ಚಿನ ಸಂಖ್ಯೆಯಲ್ಲಿ ಜನರು ಆಗಮಿಸಿದ್ದರು. ಎಲ್ಲರನ್ನು ರಕ್ಷಿಸಲಾಗಿದೆ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ ಎಂದು ಪೊಲೀಸರು ಹೇಳಿದ್ದಾರೆ

# ಭದ್ರಾ ಡ್ಯಾಂ ರಿವರ್ ಗೇಟ್ ದುರಸ್ತಿ ಪೂರ್ಣ
## ಜಲಾಶಯದಿಂದ ಹೊರ ಹೋಗುತ್ತಿದ್ದ ನೀರು ಬಂದ್



ಭದ್ರಾ ಜಲಾಶಯದಲ್ಲಿನ ನದಿಮಟ್ಟದ ಸ್ಲೂಯೀಸ್ ಗೇಟ್ ದುರಸ್ತಿ ಕಾರ್ಯದಲ್ಲಿ ಸಿಬ್ಬಂದಿ

**ಭದ್ರಾ ಅಧೀಕ್ಷಕ ಇಂಜಿನಿಯರ್ ಸುಜಾತ**

ಶಿವಮೊಗ್ಗ, ಜು. 7 -ಭದ್ರಾ ಜಲಾಶಯದ ತಳಮಟ್ಟದ ಗೇಟ್‌ನಲ್ಲಿ ಉಂಟಾಗಿದ್ದ ತಾಂತ್ರಿಕ ದೋಷವನ್ನು ಸರಿಪಡಿಸುವ ಕೆಲಸ ಭಾನುವಾರ ಬೆಳಿಗ್ಗೆ ಪೂರ್ಣಗೊಂಡಿದ್ದು, ಜಲಾಶಯದಿಂದ ಹೊರ ಹೋಗುತ್ತಿದ್ದ ನೀರನ್ನು ಬಂದ್ ಮಾಡಲಾಗಿದೆ ಎಂದು ಭದ್ರಾ ಅಧೀಕ್ಷಕ ಇಂಜಿನಿಯರ್ ಸುಜಾತ ತಿಳಿಸಿದ್ದಾರೆ.

ಈ ಕುರಿತು ಅವರು ಭಾನುವಾರ ಸಂಜೆ ಪತ್ರಿಕಾ ಹೇಳಿಕೆ ನೀಡಿದ್ದು, ಜಲಾಶಯದ ಪವರ್ ಹೌಸ್ ಪಕ್ಕದಲ್ಲಿ ಇರುವ ಸ್ಲೂಯೀಸ್‌ಗೇಟ್‌ನಲ್ಲಿ ತಾಂತ್ರಿಕ ದೋಷ ಉಂಟಾಗಿ ಸುಮಾರು 5 ಇಂಚಿನಷ್ಟು ಗೇಟ್ ತೆರೆದುಕೊಂಡಿತ್ತು. ಇದರಿಂದ ಕಳೆದ 3-4 ದಿನಗಳಿಂದ ನಿತ್ಯ ಸುಮಾರು 1500 ಕ್ಯೂಸೆಕ್ಸ್ ನೀರು ನದಿಗೆ ಹರಿದು ಹೋಗುತ್ತಿತ್ತು. ತಕ್ಷಣ ಗಮನ ಹರಿಸಿ ಇಂಜಿನಿಯರ್‌ಗಳು ಜಲಾಶಯಗಳ ತಜ್ಞರ ತಂಡ ಹಾಗೂ ಗುತ್ತಿಗೆದಾರರು ಶ್ರಮ ವಹಿಸಿ ಸತತ ಕಾರ್ಯಾಚರಣೆ ಮೂಲಕ ನೀರು ಹೋಗುತ್ತಿರುವುದನ್ನು ಬಂದ್ ಮಾಡಿದ್ದೇವೆ. ನದಿಗೆ ನೀರು ಹರಿಸಬೇಕಾದ ಸ್ವಲ್ಪ ನೀರನ್ನು ಮಾತ್ರ ಬಿಡಲಾಗಿದೆ. ಹಾಗಾಗಿ ಅಚ್ಚುಕಟ್ಟಿನ ರೈತರು ಯಾವುದೇ ಆತಂಕ ಪಡಬೇಕಾಗಿಲ್ಲ ಮತ್ತು ಜಲಾಶಯಕ್ಕೆ ಬಂದು ಪ್ರತಿಭಟನೆ ನಡೆಸದಿರುವಂತೆ ಭದ್ರಾ ಎಸ್.ಇ.ಸುಜಾತ ಅವರು ಮನವಿ ಮಾಡಿದ್ದಾರೆ. (2ನೇ ಪುಟಕ್ಕೆ)

## ಶೀಘ್ರದಲ್ಲೇ ಉಪಗ್ರಹಗಳಿಂದ ಮನೆಯಂಗಳದ ಚಿತ್ರ

ನವದೆಹಲಿ, ಜು. 7 - ಬಾಹ್ಯಾಕಾಶದಿಂದ ಉಪಗ್ರಹಗಳ ಮೂಲಕ ನಿಮ್ಮ ಮನೆಯ ಅಂಗಳದ ಚಿತ್ರವನ್ನು ಪಡೆಯುವ ಸೇವೆಯನ್ನು ಒದಗಿಸುವುದಾಗಿ ಪಿಕ್ಸೆಲ್ ಸ್ಪೇಸ್ ಸಂಸ್ಥೆ ತಿಳಿಸಿದೆ. ಖಾಸಗಿ ಸುದ್ದಿ ಸಂಸ್ಥೆಯೊಂದಕ್ಕೆ ಸಂದರ್ಶನ ನೀಡಿರುವ ಪಿಕ್ಸೆಲ್ ಸ್ಪೇಸ್ ಸಹ ಸ್ಥಾಪಕ ಹಾಗೂ ಸಿಇಒ ಅವೈಸ್ ಅಹಮದ್, ಬಾಹ್ಯಾಕಾಶದ ಮಾಹಿತಿಯನ್ನು ಜನಸಾಮಾನ್ಯರಿಗೆ ಅತಿ ಕಡಿಮೆ ಶುಲ್ಕದಲ್ಲಿ ಒದಗಿಸುವುದು ತಮ್ಮ ಉದ್ದೇಶ ಎಂದು ಹೇಳಿದ್ದಾರೆ.

ಭೂ ಪರಿವೀಕ್ಷಣ ಸ್ಟುಡಿಯೋ ಈ ವರ್ಷದ ಅಂತ್ಯದಲ್ಲಿ ನೇರ ಕಾರ್ಯಾಚರಣೆಗೆ ಮುಂದಾಗುವ ನಿರೀಕ್ಷೆ ಇದೆ. ಇದು ಗೂಗಲ್ ಅರ್ತ್ ಬಳಸುವಷ್ಟೇ ಸುಲಭವಾಗಿರಲಿದೆ. ಆದರೆ, ಇದರ ಚಿತ್ರಗಳು ಹಾಗೂ ಉಪಗ್ರಹ ಚಿತ್ರಗಳು ಹೆಚ್ಚು ಆಧುನಿಕವಾಗಿರಲಿವೆ ಎಂದು ಅಹಮದ್ ಹೇಳಿದ್ದಾರೆ.

ನಾಲ್ಕು ವರ್ಷಗಳ ಹಿಂದೆ ಬಾಹ್ಯಾಕಾಶ ವಲಯವನ್ನು ಖಾಸಗಿಗೆ ಮುಕ್ತಗೊಳಿಸಲಾಗಿತ್ತು. ನಂತರದಿಂದ ಖಾಸಗಿ ಕಂಪನಿಗಳು ಹೆಚ್ಚು ಪ್ರವರ್ಧಮಾನಕ್ಕೆ ಬರುತ್ತಿವೆ. ಪಿಕ್ಸೆಲ್ ಕಂಪನಿಯು ಶಕುಂತಲಾ ಹಾಗೂ ಆನಂದ್ ಎಂಬ ಹೆಸರಿನ ಎರಡು ಉಪಗ್ರಹಗಳನ್ನು ಹೊಂದಿದೆ. ಈ ಉಪಗ್ರಹಗಳು ಚಿತ್ರಗಳನ್ನು ಸೆರೆ ಹಿಡಿಯುತ್ತಿವೆ. ಭೂಮಿಯಲ್ಲಿ ಆಗುವ ಅತಿ ಸಣ್ಣ ಬದಲಾವಣೆಗಳನ್ನು ಪತ್ತೆ ಮಾಡಲು ಉಪಗ್ರಹಗಳು ನೆರವಾಗುತ್ತಿವೆ.

ಪಿಕ್ಸೆಲ್ ಈ ವರ್ಷ ಇನ್ನೂ ಆರು ಉಪಗ್ರಹಗಳನ್ನು ಉಡಾವಣೆ ಮಾಡುವ ಗುರಿ ಹೊಂದಿದೆ. ಗಿಡಗಳಿಗೆ ಕೀಟಬಾಧೆ ಇದೆಯೇ ಅಥವಾ ಹೊಲಗಳಿಗೆ ನೀರು ಪೂರೈಕೆ ಸಮರ್ಪಕವಾಗಿದೆಯೇ ಎಂಬೆಲ್ಲ ಮಾಹಿತಿಗಳನ್ನು ಚಿತ್ರಗಳ ಮೂಲಕ ಪಡೆಯಬಹುದು ಎಂದು ಅಹಮದ್ ಹೇಳಿದ್ದಾರೆ.

# ಚೆಕ್ ಕ್ಲೋನ್ : ಕೋಟ್ಯಂತರ ವಂಚನೆ

**ಕಂಪನಿ ರೀತಿಯಲ್ಲಿ ವಂಚನೆಯ ಜಾಲ ನಡೆಸುತ್ತಿದ್ದವರ ಬಂಧನ**

ನೋಯ್ಡಾ, ಜು. 7 – ಚೆಕ್‌ಗಳನ್ನು ನಕಲಿ ಮಾಡಿ ಕೋಟ್ಯಂತರ ರೂ.ಗಳ ವಂಚನೆ ಮಾಡಿದ್ದ ಹತ್ತು ಜನರ ತಂಡವನ್ನು ಉತ್ತರ ಪ್ರದೇಶದ ಪೊಲೀಸರು ಬಂಧಿಸಿದ್ದಾರೆ. ಇವರು ಚೆಕ್‌ಗಳನ್ನು ಕ್ಲೋನ್ ಮಾಡುವ ಮೂಲಕ ದೇಶದ ಹಲವೆಡೆಯ ಜನರನ್ನು ವಂಚಿಸಿದ್ದರು ಎಂದು ಬುಲಂದ್ ಶಹರ್ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿ ಶ್ಲೋಕ್ ಕುಮಾರ್ ತಿಳಿಸಿದ್ದಾರೆ.

ಬಂಧಿತರಲ್ಲಿ ಬ್ಯಾಂಕ್ ಒಂದರ ಜನರೇಟರ್ ಆಪರೇಟರ್ ಸಹ ಸೇರಿದ್ದಾನೆ. ಪ್ರಮುಖ ಟೆಲಿಕಾಂ ಕಂಪನಿ ಒಂದರ ಗ್ರಾಹಕ ಏಜೆಂಟ್ ಸಹ ವಂಚನೆಯಲ್ಲಿ ಭಾಗಿಯಾಗಿದ್ದಾನೆ. ಇವರು ವಂಚನೆ ಮಾಡಿದ ಹಣವನ್ನು ವ್ಯಕ್ತಿಯೊಬ್ಬರ ಖಾತೆಗೆ ಜಮಾ ಮಾಡುತ್ತಿದ್ದು ಆತನನ್ನೂ ಬಂಧಿಸಲಾಗಿದೆ.

ಬ್ಯಾಂಕುಗಳ ಗ್ರಾಹಕರು ಆರ್ಡರ್ ಮಾಡಿದ್ದ ಚೆಕ್ ಬುಕ್‌ಗಳು ಅವರಿಗೆ ತಲುಪುವ ಮೊದಲೇ ಈ ತಂಡ ಕದಿಯುತ್ತಿತ್ತು. ಗ್ರಾಹಕರು ಬ್ಯಾಂಕಿಗೆ ದೂರು ನೀಡಿದ ನಂತರ ಕಳುವಾಗಿದ್ದ ಚೆಕ್‌ಗಳನ್ನು ರದ್ದುಗೊಳಿಸಿ ಹೊಸ ಚೆಕ್‌ಗಳನ್ನು ನೀಡಲಾಗುತ್ತಿತ್ತು. ಈ ತಂಡದ ಸದಸ್ಯರು ಹೊಸ ಚೆಕ್‌ಗಳ ವಿವರಗಳನ್ನು ಸಂಗ್ರಹಿಸುತ್ತಿದ್ದರು. ನಂತರ ರಸಾಯನಿಕ ಬಳಸಿ ರದ್ದುಗೊಳಿಸಲಾದ ಚೆಕ್ ಬುಕ್‌ಗಳಿಂದ ಹಳೆಯ ವಿವರ ಅಳಿಸಿ ಹೊಸ ವಿವರಗಳನ್ನು ದಾಖಲಿಸುತ್ತಿದ್ದರು.

ನಂತರ ಪೋರ್ಜರಿ ಸಹಿ ಹಾಕಿ ಚೆಕ್ ಮೂಲಕ ಹಣ ಪಡೆಯುತ್ತಿದ್ದರು. ತಾವು ಚೆಕ್ ನೀಡದಿದ್ದರೂ ಖಾತೆಯಿಂದ 15 ಲಕ್ಷ ರೂ ಬಿಡಿಸಿಕೊಂಡಿದ್ದು ಕಂಡು ಬಂದ ಗ್ರಾಹಕರು ಒಬ್ಬರು ಪೊಲೀಸರಿಗೆ ದೂರು ದಾಖಲಿಸಿದ್ದರು. ಹಣ ಬಿಡಿಸಿಕೊಂಡ ಬಗ್ಗೆ ನನಗೆ ಬ್ಯಾಂಕ್‌ನಿಂದ ಮೊಬೈಲ್‌ಗೆ ಯಾವುದೇ ಮಾಹಿತಿ ಬಂದಿಲ್ಲ. ಪಾಸ್‌ಬುಕ್ ಅಪ್ಡೇಟ್ ಮಾಡಿದಾಗ ಹಣ ಬಿಡಿಸಿಕೊಂಡಿರುವುದು ಗೊತ್ತಾಯಿತು ಎಂದು ಅವರು ದೂರಿನಲ್ಲಿ ಹೇಳಿದ್ದರು.

ಬಂಧಿತರು ಸಂಘಟಿತ ತಂಡದವರಾಗಿದ್ದಾರೆ ಹಾಗೂ ಅದರ ಸದಸ್ಯರು ಕಂಪನಿಯೊಂದರ ರೀತಿಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದರು ಎಂದು ಪೊಲೀಸ್ ವರಿಷ್ಠಾಧಿಕಾರಿ ಕುಮಾರ್ ಹೇಳಿದ್ದಾರೆ.

ಈ ತಂಡ ಮೊದಲು ಗ್ರಾಹಕರ ವಿವರಗಳನ್ನು ಬ್ಯಾಂಕುಗಳಿಂದ ಪಡೆಯುತ್ತಿತ್ತು. ನಂತರ ಖಾತೆದಾರ ವ್ಯಕ್ತಿ ಸಾವನ್ನಪ್ಪಿದ್ದಾನೆ ಎಂಬ ನಕಲಿ ದಾಖಲೆಗಳನ್ನು ಸೃಷ್ಟಿಸಲಾಗುತ್ತಿತ್ತು. ಸಿಮ್ ಕಂಪನಿಗೆ ನಕಲಿ ವಿವರ ಸಲ್ಲಿಸಿ ಸಿಮ್ ಗಳನ್ನು ರದ್ದುಗೊಳಿಸಲಾಗುತ್ತಿತ್ತು. (2ನೇ ಪುಟಕ್ಕೆ)

## ಬಜೆಟ್ ಮಾತುಕತೆ ಪೂರ್ಣಗೊಳಿಸಿದ ಸೀತಾರಾಮನ್

ನವದೆಹಲಿ, ಜು. 7 - ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಬಜೆಟ್ ಸಿದ್ಧತೆಗೆ ಸಂಬಂಧಿಸಿದಂತೆ ಕೈಗಾರಿಕಾ ಹಾಗೂ ಸಾಮಾಜಿಕ ವಲಯಗಳ ಪ್ರತಿನಿಧಿಗಳ ಜೊತೆ ಮಾತುಕತೆ ಪೂರೈಸಿದ್ದಾರೆ.

ಸೀತಾರಾಮನ್ ಅವರು ಜುಲೈ 23ರಂದು ತಮ್ಮ 7ನೇ ಬಜೆಟ್ ಮಂಡಿಸಲಿದ್ದಾರೆ. ಇದು ಮೋದಿ ಸರ್ಕಾರದ ಮೂರನೇ ಅವಧಿಯ ಮೊದಲ ಪೂರ್ಣ ಬಜೆಟ್ ಆಗಿರಲಿದೆ. ಈ ಬಜೆಟ್‌ನಲ್ಲಿ 2047ರ ವೇಳೆಗೆ ಭಾರತವನ್ನು ವಿಕಸಿತ ದೇಶವನ್ನಾಗಿ ಮಾಡುವ ಮಾರ್ಗಸೂಚಿ ಇರುವ ನಿರೀಕ್ಷೆ ಇದೆ.

ಕಳೆದ ಜೂನ್ 19 ರಿಂದ ಬಜೆಟ್ ಕುರಿತ ಸಮಾಲೋಚನೆಗಳು ಆರಂಭವಾಗಿದ್ದವು. ಜುಲೈ 5ರಂದು ಬಜೆಟ್ ಪೂರ್ವ ಸಮಾಲೋಚನೆಗಳು ಪೂರ್ಣಗೊಂಡಿವೆ ಎಂದು ತಿಳಿಸಲಾಗಿದೆ.

# ಡೆಂಗ್ಯೂ ಜ್ವರ ಹೆಚ್ಚಳವಾಗದಂತೆ ಕ್ರಮಕ್ಕೆ ಸಚಿವ ಎಸ್ಸೆಸ್ಸೆಂ ನಿರ್ದೇಶನ

ದಾವಣಗೆರೆ, ಜು. 7 - ಜಿಲ್ಲೆಯಲ್ಲಿ ಡೆಂಗ್ಯೂ ಜ್ವರ ಹೆಚ್ಚಳವಾಗದಂತೆ ಸೂಕ್ತ ಕ್ರಮ ವಹಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಇಂದು ತಮ್ಮ ಗೃಹ ಕಛೇರಿಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಸಚಿವರು, ಡೆಂಗ್ಯೂ ಜ್ವರವು ಸೊಳ್ಳೆಯಿಂದ ಹರಡುವ ಕಾಯಿಲೆಯಾಗಿದ್ದು, ಸ್ಥಳೀಯ ಸಂಸ್ಥೆಗಳೊಂದಿಗೆ ಆರೋಗ್ಯ ಇಲಾಖೆ ಸಹಭಾಗಿತ್ವ ವಹಿಸಿ ಸೊಳ್ಳೆಗಳನ್ನು ಹತೋಟಿಗೆ ತರಲು ಕಾರ್ಯಕ್ರಮ ರೂಪಿಸಿ ಎಂದು ತಿಳಿಸಿದರು.



ಡೆಂಗ್ಯೂ ಜ್ವರದ ತೀವ್ರ ಸ್ವರೂಪವನ್ನು ಡೆಂಗ್ಯೂ ಹೆಮರಾಜಿಕ್ ಜ್ವರ ಎಂದೂ ಕರೆಯುತ್ತಾರೆ, ಇದು ಗಂಭೀರ ರಕ್ತಸ್ರಾವ, ರಕ್ತದೊತ್ತಡದಲ್ಲಿ ಹಠಾತ್ ಕುಸಿತ (ಆಘಾತ) ಮತ್ತು ಸಾವಿಗೆ ಕಾರಣವಾಗ (2ನೇ ಪುಟಕ್ಕೆ)

# ನೇರ ಪಾವತಿ ಪೌರಕಾರ್ಮಿಕರಿಗೆ ಖಾಯಂ ಆದೇಶ ಪ್ರತಿ ವಿತರಣೆ

ದಾವಣಗೆರೆ, ಜು. 7 - ಕಳೆದ 20 ವರ್ಷಗಳಿಂದ ನೇರ ಪಾವತಿಗೆ ಒಳಗಾಗಿದ್ದ ಪೌರ ಕಾರ್ಮಿಕರನ್ನು ಖಾಯಂಗೊಳಿಸಿದ ಆದೇಶ ಪ್ರತಿ ಹಾಗೂ ಶೇ.5 ಯೋಜನೆಯಡಿ ವಿಕಲಚೇತನ ಫಲಾನುಭವಿಗಳಿಗೆ ತ್ರಿಚಕ್ರ ವಾಹನ ಮತ್ತು ಜೆರಾಕ್ಸ್ ಯಂತ್ರಗಳನ್ನು ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ ಮತ್ತು ಸಂಸದರಾದ ಡಾ|| ಪ್ರಭಾ ಮಲ್ಲಿಕಾರ್ಜುನ್ ವಿತರಿಸಿದರು.

ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರ ನಿವಾಸದಲ್ಲಿ ಇಂದು ನಡೆದ ಈ ಸರಳ ಕಾರ್ಯಕ್ರಮವನ್ನುದ್ದೇಶಿಸಿ ಪಾಲಿಕೆ ಆಯುಕ್ತರಾದ ಶ್ರೀಮತಿ ರೇಣುಕಾ ಮಾತನಾಡಿ, ಮಹಾನಗರಪಾಲಿಕೆ ವತಿಯಿಂದ ನೇರಪಾವತಿ ಪೌರ ಕಾರ್ಮಿಕರನ್ನು ಹಂತ ಹಂತವಾಗಿ ಒಟ್ಟು 250 ಪೌರ ಕಾರ್ಮಿಕರನ್ನು ಖಾಯಂಗೊಳಿಸಲಾಗಿರುತ್ತದೆ. ಇಂದು ಪೌರ ಕಾರ್ಮಿಕರಿಗೆ ನೇಮಕಾತಿ ಆದೇಶ ಪ್ರತಿ ಹಾಗೂ ಶೇ.5ರ ಯೋಜನೆಯಡಿ ಫಲಾನುಭವಿಗಳಿಗೆ ತ್ರಿಚಕ್ರ ವಾಹನ ಮತ್ತು ಜೆರಾಕ್ಸ್ ಯಂತ್ರ ವಿತರಿಸಲಾಗುತ್ತಿದೆ ಎಂದು ತಿಳಿಸಿದರು.

ಸಂಸದರಾದ ಡಾ|| ಪ್ರಭಾ ಮಲ್ಲಿಕಾರ್ಜುನ್ ಮಾತನಾಡಿ, ಪೌರ ಕಾರ್ಮಿಕರ ಶ್ರಮದಿಂದಾಗಿ



ರಾಜ್ಯದಲ್ಲಿ 4ನೇ ಸ್ಥಾನ ಪಡೆದಿರುವ ದಾವಣಗೆರೆ ಮಹಾನಗರ ಪಾಲಿಕೆ ಮುಂದಿನ ದಿನಗಳಲ್ಲಿ ನಂಬರ್ 1 ನೇ ಸ್ಥಾನ ಬರಲು ಶ್ರಮಿಸುವಂತೆ ಕರೆ ನೀಡಿದರು.

ಮಹಾನಗರ ಪಾಲಿಕೆಯಿಂದ ಪೌರ ಕಾರ್ಮಿಕರ ಪ್ರತಿಭಾವಂತ ಮಕ್ಕಳಿಗೆ ವಿದ್ಯಾರ್ಥಿ ವೇತನ ನೀಡುತ್ತಿದ್ದು, ಉನ್ನತ ಶಿಕ್ಷಣ ಪಡೆದವರಿಗೆ ಲ್ಯಾಪ್‌ಟ್ಯಾಪ್ ಒದಗಿಸುವ ಮೂಲಕ ಪ್ರೋತ್ಸಾಹಿಸಲಾಗುತ್ತಿದ್ದು, ಪೌರ ಕಾರ್ಮಿಕರಿಗೆ ವಿಶ್ರಾಂತಿ ಗೃಹಗಳನ್ನು ನಿರ್ಮಿಸಲಾಗಿದೆ ಎಂದು ತಿಳಿಸಿದರು.

ಇಂದು ಶೇ.5ರ ಯೋಜನೆಯಡಿ ಅರ್ಹ ವಿಕಲಚೇತನ ಫಲಾನುಭವಿಗಳಿಗೆ 29 ರೆಟ್ರೋಫಿಟ್‌ಮೆಂಟ್ ದ್ವಿಚಕ್ರ ವಾಹನ ಹಾಗೂ ಪಾಲಿಕೆಯಲ್ಲಿ ಕೆಲಸ ನಿರ್ವಹಿಸುವ ಅಂಗವಿಕಲ ಯು.ಆರ್.ಡಬ್ಲ್ಯೂಗಳಿಗೆ ಚೇರ್, ಟೇಬಲ್, ಕಂಪ್ಯೂಟರ್, ಜೆರಾಕ್ಸ್ ಮಿಷನ್, ಪ್ರಿಂಟರ್ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯ ಒದಗಿಸಲಾಗಿದೆ ಎಂದರು.

ಶಾಸಕ ಶಾಮನೂರು ಶಿವಶಂಕರಪ್ಪ ಮಾತನಾಡಿ, ನಗರ ಸ್ವಚ್ಛತೆಗಾಗಿ 2002ರಲ್ಲಿ ಈ ಹಿಂದೆ ನಮ್ಮ ಸರ್ಕಾರ ಇದ್ದಾಗ ಪಾಲಿಕೆಯಲ್ಲಿ ಹೊರ ಗುತ್ತಿಗೆ ಆಧಾರದ ಮೇಲೆ ಗುತ್ತಿಗೆದಾರರ ಮೂಲಕ 270 ಜನ ಪೌರ ಕಾರ್ಮಿಕರನ್ನು ಕೆಲಸಕ್ಕೆ ತೆಗೆದುಕೊಳ್ಳಲಾಗಿತ್ತು. ಗುತ್ತಿಗೆದಾರರು ಪೌರ ಕಾರ್ಮಿಕರುಗಳಿಗೆ ಸಮಯಕ್ಕೆ ಸರಿಯಾಗಿ ವೇತನ ಪಾವತಿಸದೇ ಇರುವುದರಿಂದ 2017ರ ನವಂಬರ್‌ನಲ್ಲಿ ಈ ಹಿಂದೆ ನಮ್ಮ ಸರ್ಕಾರ ಇದ್ದಾಗಲೇ ನೇರವಾಗಿ ಪೌರ ಕಾರ್ಮಿಕರ ಬ್ಯಾಂಕ್ ಖಾತೆಗೆ ವೇತನ ಪಾವತಿ ಮಾಡುವಂತೆ ಆದೇಶ ಹೊರಡಿಸಲಾಗಿತ್ತು ಎಂದು ತಿಳಿಸಿದರು.

2019 ರಲ್ಲಿ 34 ಜನ ಪೌರ ಕಾರ್ಮಿಕರನ್ನು ನೇರ ನೇಮಕಾತಿ ಮೂಲಕ ಖಾಯಂಗೊಳಿಸಲಾಗಿದ್ದು, 2023 ರಲ್ಲಿ 114 ಜನ ಪೌರಕಾರ್ಮಿಕರನ್ನು ನೇರ ನೇಮಕಾತಿ ಮಾಡಿಕೊಳ್ಳುವ ಸಲುವಾಗಿ ಅರ್ಜಿಯನ್ನು ಕರೆದು 106 ಜನ ಪೌರ ಕಾರ್ಮಿಕರನ್ನು ಖಾಯಂಗೊಳಿಸಲಾಗಿದೆ.

ಪ್ರಸ್ತುತ ಸಾಲಿನಲ್ಲಿ (2024) (2ನೇ ಪುಟಕ್ಕೆ)


|| ಶ್ರೀ ಹರಿಹರೇಶ್ವರ ಪ್ರಸನ್ನ ||

**ಕೈಲಾಸ ಶಿವಗಣಾರಾಧನೆ ಆಹ್ವಾನ**



ಜನನ : 03.10.1945, ನಿಧನ : 04.07.2024

ದಾವಣಗೆರೆ ಸಿಟಿ ವಾಸಿ
ಶ್ರೀಮತಿ ಕೆ.ಆರ್. ಇಂದಿರಾ ಮತ್ತು ಮಕ್ಕಳು
ಇವರು ಮಾಡುವ ವಿಜ್ಞಾಪನೆಗಳು.
ದಿನಾಂಕ : 4.07.2024ನೇ ಗುರುವಾರ ಬೆಳಿಗ್ಗೆ 5.02ಕ್ಕೆ ನನ್ನ ಪೂಜ್ಯ ಪತಿಯವರಾದ
**ಶ್ರೀ ಜಿ.ಎಸ್. ನಾಗರಾಜ್**
(ನಿವೃತ್ತ ಎಕ್ಸಿಕ್ಯೂಟಿವ್ ಇಂಜಿನಿಯರ್)
ಇವರು ಶಿವಾಧೀನರಾದ ಪ್ರಯುಕ್ತ ಮೃತರ ಆತ್ಮಶಾಂತಿಗಾಗಿ
'ಕೈಲಾಸ ಶಿವಗಣಾರಾಧನೆ'ಯನ್ನು
ದಿನಾಂಕ: 8.7.2024ನೇ ಸೋಮವಾರ ಬೆಳಿಗ್ಗೆ 10.30ರಿಂದ
ದಾವಣಗೆರೆ-ಹರಿಹರ ಅರ್ಬನ್ ಬ್ಯಾಂಕ್ ಸಮುದಾಯ ಭವನದಲ್ಲಿ
ನೆರವೇರಿಸಲು ಗುರು-ಹಿರಿಯರು ನಿಶ್ಚಯಿಸಿರುವುದರಿಂದ ತಾವುಗಳು ಆಗಮಿಸಿ, ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ.

ಇಂತಿ ದುಃಖತಪ್ತರು : ಶ್ರೀಮತಿ ಕೆ.ಆರ್. ಇಂದಿರಾ ಮತ್ತು ಮಕ್ಕಳು, ಮೊಮ್ಮಕ್ಕಳು, ಅಳಿಯಂದಿರು, ಸೊಸೆ, ಚಿತ್ರಹಳ್ಳಿ ಗೌಡ್ರು ವಂಶಸ್ಥರು, ಕರಿಯಪ್ಪ ವಂಶಸ್ಥರು ಹಾಗೂ ಬಂಧು ಮಿತ್ರರು. ಮೊ : 99454 95000

ವಿ.ಸೂ. : ಆತ್ಮೀಯರೇ, ಇದನ್ನೇ ವೈಯಕ್ತಿಕ ಆಹ್ವಾನವೆಂದು ಭಾವಿಸಿ ಆಗಮಿಸಬೇಕಾಗಿ ವಿನಂತಿ.

# ವಿದ್ಯಾರ್ಥಿಗಳು ಪೋಷಕರನ್ನು ವಂಚಿಸಿದೇ ಋಣ ತೀರಿಸಬೇಕು

ಹೊನ್ನಾಳಿ, ಜು. 7 - 2013ರಲ್ಲಿ ಶಾಸಕನಾಗಿದ್ದ ಅವಧಿಯಲ್ಲಿ ಪೋಷಕರ ಒತ್ತಾಯದ ಮೇರೆಗೆ ಸುಂಕದಕಟ್ಟೆ ಗ್ರಾಮದಲ್ಲಿ 6.5 ಕೋಟಿ ರೂ. ವೆಚ್ಚದಲ್ಲಿ ಡಿಪ್ಲೋಮಾ ಕಾಲೇಜ್ ಪ್ರಾರಂಭ ಮಾಡಲಾಗಿದೆ ಎಂದು ಶಾಸಕ ಡಿ.ಜಿ.ಶಾಂತನಗೌಡ ಹೇಳಿದರು.

ತಾಲ್ಲೂಕಿನ ಸುಂಕದಕಟ್ಟೆ ಗ್ರಾಮದ ಹತ್ತಿರವಿರುವ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗೆ ಇಂಡಕ್ಷನ್ ಕಾರ್ಯಕ್ರಮ, ತೃತೀಯ ವರ್ಷದ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಮತ್ತು ವಿದ್ಯಾರ್ಥಿ ಸಂಘ, ಎನ್.ಎಸ್.ಎಸ್. ಹಾಗೂ ರೆಡ್ ಕ್ರಾಸ್ ಘಟಕಗಳ ಉದ್ಘಾಟನಾ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

5 ಎಕರೆ ಜಾಗವನ್ನು ಕಾಯ್ದಿರಿಸಿದರೆ ಮಾತ್ರವೇ ಡಿಪ್ಲೋಮಾ ಕಾಲೇಜಿಗೆ ಅನುಮತಿ ನೀಡುವುದಾಗಿ ಸರ್ಕಾರ ಷರತ್ತು ವಿಧಿಸಿದ ಹಿನ್ನೆಲೆಯಲ್ಲಿ ಸುಂಕದಕಟ್ಟೆ ಗ್ರಾಮದವರು 5 ಎಕರೆ ಜಾಗ ನೀಡಲು ಸಮ್ಮತಿ ನೀಡಿದ್ದಕ್ಕಾಗಿ ಗ್ರಾಮಸ್ಥರಿಗೆ ಧನ್ಯವಾದಗಳನ್ನು ಅರ್ಪಿಸಿದರು.

ಪೋಷಕರು ಇತ್ತೀಚೆಗೆ ತಮಗೆ ಎಂತಹ ಕಷ್ಟ ಇದ್ದರೂ ಮಕ್ಕಳ ವಿದ್ಯಾಭ್ಯಾಸಕ್ಕೆ ವಿಶೇಷ ಒತ್ತು ನೀಡುತ್ತಿದ್ದು, ಪೋಷಕರಿಗೆ ವಂಚನೆ ಮಾಡದೇ ಕಲಿತು ಪೋಷಕರ ಋಣ ತೀರಿಸುವುದರ ಜೊತೆಗೆ ಕಾಲೇಜಿಗೆ ಕೀರ್ತಿ ತರುವಂತಾಗಬೇಕೆಂದು ಶಾಸಕರು ಸಲಹೆ ನೀಡಿದರು.



ಸುಂಕದಕಟ್ಟೆಯ ಕಾರ್ಯಕ್ರಮದಲ್ಲಿ ಶಾಸಕ ಡಿ.ಜಿ. ಶಾಂತನಗೌಡ ಕಳಕಳಿ

ಹೊನ್ನಾಳಿ-ನ್ಯಾಮತಿ ಅವಳಿ ತಾಲ್ಲೂಕುಗಳಿಂದ ಸುಮಾರು 25,000ಕ್ಕೂ ಹೆಚ್ಚು ಜನರು ಬೆಂಗಳೂರಿನಲ್ಲಿ ತಮ್ಮ ಬದುಕು ಕಟ್ಟಿಕೊಂಡಿದ್ದು, ಬಿಎ, ಬಿಕಾಂ, ಬಿಎಸ್ಸಿ ಕೋರ್ಸ್‌ಗಳಿಗಿಂತ ಐಟಿಐ, ಡಿಪ್ಲೋಮಾ ಕೋರ್ಸ್ ಮುಗಿಸಿದವರಿಗೆ ದೇಶ-ವಿದೇಶಗಳಲ್ಲಿ ಉದ್ಯೋಗಾವಕಾಶಗಳು ಹೆಚ್ಚಿದ್ದು ಇಂಗ್ಲಿಷ್ ಮಾತನಾಡುವ ಕೌಶಲ್ಯವನ್ನು ಕಲಿಯಲು ಮುಂದಾಗುವಂತೆ ಕರೆ ನೀಡಿದರು.

ಕಾಲೇಜಿನ ಪ್ರಾಂಶುಪಾಲ ಶಾಂತಕುಮಾರ್ ನಾಯ್ಕ್ ಮಾತನಾಡಿ, ಕಾಲೇಜಿನಲ್ಲಿ ಆಟೋಮೊಬೈಲ್ ಮತ್ತು ಆಲ್ಟರ್ನೇಟ್ ಎನರ್ಜಿ ಟೆಕ್ನಾಲಜಿ ವಿಭಾಗದಲ್ಲಿ ಡಿಪ್ಲೋಮಾ ಪೂರೈಸಿದ ವಿದ್ಯಾರ್ಥಿಗಳಿಗೆ ಕೆಲವು ಒಳ್ಳೆಯ ಕಂಪೆನಿಗಳು ನೌಕರಿ ಜೊತೆಗೆ ಉತ್ತಮ ಸಂಬಳ ನೀಡುತ್ತಿವೆ ಎಂದು ತಿಳಿಸಲು ಹರ್ಷವಾಗುತ್ತದೆ ಎಂದರು.

ಕನ್ನಡ ಮತ್ತು ಇಂಗ್ಲೀಷ್ 2 ಭಾಷೆಗಳಲ್ಲೂ ಪರೀಕ್ಷೆ ಬರೆಯಲು ಅವಕಾಶವಿದ್ದು, ಡಿಪ್ಲೋಮಾ ಮುಗಿಸಿದ ವಿದ್ಯಾರ್ಥಿಗಳಿಗೆ ಎಂಜಿನಿಯರಿಂಗ್ ಸೇರಲು 15% ಮೀಸಲಾತಿಯಿದ್ದು, ವಿದ್ಯಾರ್ಥಿಗಳು ಸದುಪಯೋಗಪಡಿಸಿಕೊಳ್ಳುವಂತೆ ವಿನಂತಿಸಿದರು.

ಅರಬಗಟ್ಟೆ ಗ್ರಾ.ಪಂ. ಅಧ್ಯಕ್ಷ ಡಿ.ಬಿ. ಶ್ರೀನಾಥ್ ಪಂಚಾಯ್ತಿ ವತಿಯಿಂದ ಕಾಲೇಜಿನ ಅಭಿವೃದ್ಧಿಗೆ ಅವಶ್ಯವಿರುವ ಬೇಡಿಕೆಗಳನ್ನು ಈಡೇರಿಸಲು ಬದ್ಧ ಎಂದು ಭರವಸೆ ನೀಡಿದರು.

ಸದಸ್ಯ ಮಂಜುನಾಥ್ ಸಿವಿಲ್ ಮತ್ತು ಎಲೆಕ್ಟ್ರಿಕಲ್ ಕೋರ್ಸ್‌ಗಳಿಗೆ ಬೇಡಿಕೆ ಹೆಚ್ಚಿದ್ದು ಈ ಕೋರ್ಸ್‌ಗಳನ್ನು ತೆರೆಯಲು ಅಗತ್ಯ ಕ್ರಮ ಜರುಗಿಸುವಂತೆ ಶಾಸಕರಿಗೆ ಮನವಿ ಮಾಡಿದರು.

ಸಮಾರಂಭದಲ್ಲಿ ಟಿ.ಎಲ್. ಮಹಾಲಿಂಗಪ್ಪ, ಟಾಕಪ್ಪ ಚವ್ಹಾಣ್ ಆಲ್ಟರ್ನೇಟ್ ಎನರ್ಜಿ ಟೆಕ್ನಾಲಜಿ ಮತ್ತು ಆಟೋಮೊಬೈಲ್ ಕೋರ್ಸ್‌ಗಳ ಬಗ್ಗೆ ವಿದ್ಯಾರ್ಥಿಗಳಿಗೆ ಪರಿಚಯ ಮಾಡಿಕೊಟ್ಟರು.

ಸಮಾರಂಭದಲ್ಲಿ ಸರ್ಕಾರಿ ಐಟಿಐ ಕಾಲೇಜಿನ ಪ್ರಾಂಶುಪಾಲ ಸುರೇಶ್ ಕುಮಾರ್, ಉಪನ್ಯಾಸಕ ಎಚ್. ದೊಡ್ಡಸ್ವಾಮಿ, ಪ್ರಕಾಶ್ ಕುಂಬಾರ್, ಜಿ.ಆರ್.ಮಾಲತಿ, ಡಾ. ಓಂಕಾರ್ ನಾಯ್ಕ್, ಅಧೀಕ್ಷಕ ಸಿ. ರವಿಕುಮಾರ್, ಎಫ್.ಡಿ.ಎ. ಚೇತನ್ ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ರಕ್ತದಾನದ ತಪ್ಪು ಕಲ್ಪನೆಯಿಂದ ಹೊರಬರಬೇಕು : ಡಾ. ನಾಗರಾಜ್



**ರಾಣೇಬೆನ್ನೂರು**

ರಾಣೇಬೆನ್ನೂರು, ಜು.7- ಯುವಕರು ರಕ್ತದಾನದ ತಪ್ಪು ಕಲ್ಪನೆಯಿಂದ ಹೊರಬಂದು ರಕ್ತದಾನಿಗಳಾಗಿ ಎಂದು ಫಿಜಿಷಿಯನ್ ಡಾ.ಎಸ್.ಕೆ. ನಾಗರಾಜ್ ಹೇಳಿದರು.

ಸಿದ್ದಗಂಗಾ ಟ್ರಸ್ಟ್ ವತಿಯಿಂದ ರಾಣೇಬೆನ್ನೂರು ರಕ್ತ ನಿಧಿ ಆಶ್ರಯದಲ್ಲಿ ಇಲ್ಲಿನ ಮೃತ್ಯುಂಜಯ ನಗರದ ಸಿದ್ದಗಂಗಾ ಆಸ್ಪತ್ರೆಯಲ್ಲಿ ಭಾನುವಾರ ನಡೆದ ರಕ್ತದಾನ ಶಿಬಿರ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

18 ವರ್ಷ ಮೇಲ್ಪಟ್ಟ ಆರೋಗ್ಯವಂತರು, ಅವಶ್ಯ ಇರುವ ರೋಗಿಗಳಿಗೆ ರಕ್ತದಾನ ಮಾಡಿದರೆ, ಜೀವ ಉಳಿಸಿದ ಪುಣ್ಯ ಲಭಿಸಲಿದೆ ಎಂದು ಹೇಳಿದರು.

ನಿಯಮಿತವಾಗಿ ರಕ್ತದಾನ ಮಾಡಿದರೆ ಹೃದಯದ ಆರೋಗ್ಯ ಕಾಪಾಡಿಕೊಳ್ಳಬಹುದು ಮತ್ತು ಉತ್ತಮ ಆರೋಗ್ಯ ಹೊಂದ ಬಹುದು ಎಂದು ತಿಳಿಸಿದರು. ಶಿಬಿರದಲ್ಲಿ 22 ಜನ ರಕ್ತದಾನ ಮಾಡಿದರು. ಟ್ರಸ್ಟಿನ ಅಧ್ಯಕ್ಷ ಡಿ.ಕೆ. ಸಿದ್ದಪ್ಪ, ಕಾರ್ಯದರ್ಶಿ ಶಿವಗಂಗಮ್ಮ, ಚಂದ್ರಶೇಖರ್, ಡಾ. ಶಿಲ್ಪಾ ನಾಗರಾಜ್, ಬಸವರಾಜ್, ಕೊಟ್ರೇಶ್, ಸುನೀಲ್, ಶಿಲ್ಪಾ, ನಾಜಿಮಾ, ನುಸರತ್ ಉಮೇಶ್, ಪ್ರಭಾವತಿ, ಶರ್ಮಿಳಾ, ಅಶ್ವಿನಿ ಮತ್ತು ಆಸ್ಪತ್ರೆಯ ಸಿಬ್ಬಂದಿ ಇದ್ದರು.

# ಎಸ್ಸಿ-ಎಸ್ಟಿ ಮಕ್ಕಳಿಗೆ ಹಾಸ್ಟೆಲ್ ವ್ಯವಸ್ಥೆ ಕಲ್ಪಿಸಲು ಶಾಸಕ ಬಸವಂತಪ್ಪ ಮನವಿ



ದಾವಣಗೆರೆ, ಜು. 7 - ರಾಜ್ಯದ ಖಾಸಗಿ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ವ್ಯವಸ್ಥೆ ಇಲ್ಲ. ಇದರಿಂದಾಗಿ ಭಾರೀ ತೊಂದರೆ ಅನುಭವಿಸುತ್ತಿದ್ದಾರೆ. ಕೂಡಲೇ ಸರ್ಕಾರ ಹಾಸ್ಟೆಲ್ ವ್ಯವಸ್ಥೆ ಕಲ್ಪಿಸಬೇಕೆಂದು ಮಾಯಕೊಂಡ ಶಾಸಕ ಕೆ. ಎಸ್.ಬಸವಂತಪ್ಪ ಮುಖ್ಯಮಂತ್ರಿಗಳನ್ನು ಒತ್ತಾಯಿಸಿದರು.

ಬೆಂಗಳೂರಿನಲ್ಲಿ ಶುಕ್ರವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರಾಜ್ಯ ಅಭಿವೃದ್ಧಿ ಪರಿಷತ್ ಸಭೆಯಲ್ಲಿ ಅವರು ಮಾತನಾಡಿದರು.

ರಾಜ್ಯದ ಖಾಸಗಿ ಕಾಲೇಜುಗಳಲ್ಲಿ ಬಿಇಡಿ, ಡಿಪ್ಲೋಮಾ, ಐಟಿಐ, ಪ್ಯಾರಾ ಮೆಡಿಕಲ್ ಸೇರಿದಂತೆ ವಿವಿಧ ಜಾಬ್ ಓರಿಯೆಂಟೆಡ್ ಕೋರ್ಸ್‌ಗಳಿಗೆ ಪ್ರವೇಶ ಪಡೆದ ಗ್ರಾಮೀಣ ಪ್ರದೇಶದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮಕ್ಕಳಿಗೆ ಹಾಸ್ಟೆಲ್ ವ್ಯವಸ್ಥೆ ಇಲ್ಲ. ಪ್ರತಿನಿತ್ಯ 25-30 ಕಿ.ಮೀ. ದೂರದ ಊರುಗಳಿಂದ ಕಾಲೇಜಿಗೆ ಬಂದು ಹೋಗುವುದು ಬಹಳ ಕಷ್ಟವಾಗುತ್ತಿದೆ. ಅಲ್ಲದೇ, ಆ ಮಕ್ಕಳು ಶಿಕ್ಷಣ ವಂಚಿತರಾಗುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಸರ್ಕಾರ ಅನುದಾನ ಒದಗಿಸಿ ಹಾಸ್ಟೆಲ್ ವ್ಯವಸ್ಥೆ ಕಲ್ಪಿಸಿದರೆ ಬಡ ಮಕ್ಕಳು ಶಿಕ್ಷಣ ಕಲಿತು ಉಜ್ವಲ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದರು.

ಕೆಎಸ್‌ಎಸ್‌ಐಡಿಸಿಯಲ್ಲಿ ಉದ್ದಿಮೆ ಸ್ಥಾಪಿಸಲು ನಿವೇಶನ ಪಡೆದ ಎಸ್ಸಿ-ಎಸ್ಟಿ ನಿರುದ್ಯೋಗಿ ಯುವಕರು ಆರ್ಥಿಕ ತೊಂದರೆಯಿಂದ ಕಂತು ಪಾವತಿ ಮಾಡಲು ವಿಳಂಬ ಆಗಿರುತ್ತದೆ. ಅದಕ್ಕೆ ಹೆಚ್ಚಿನ ಬಡ್ಡಿ ವಿಧಿಸುತ್ತಿದ್ದು, ಮೊದಲೇ ಆರ್ಥಿಕ ಸಂಕಷ್ಟದಿಂದ ಎದುರಿಸುತ್ತಿರುವ ಎಸ್ಸಿ-ಎಸ್ಟಿ ಫಲಾನುಭವಿಗಳಿಗೆ ಹೆಚ್ಚಿನ ಬಡ್ಡಿ ಹಾಕುವುದು ಸರಿಯಲ್ಲ. ಕೂಡಲೇ ಬಡ್ಡಿಯನ್ನು ಮನ್ನಾ ಮಾಡಬೇಕು. ಉದ್ಯಮ ಸ್ಥಾಪಿಸಿ ಆರ್ಥಿಕ ವೃದ್ಧಿ ಕಾಣುವ ಫಲಾನುಭವಿಗಳಿಗೆ ಅವಕಾಶ ಕಲ್ಪಿಸಬೇಕು ಎಂದು ಮನವಿ ಮಾಡಿದರು.

ದೇವದಾಸಿ ಮಕ್ಕಳಿಗೆ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ ನೇರ ಪ್ರವೇಶ ಕಲ್ಪಿಸಲು ಅವಕಾಶ ನೀಡಬೇಕು. ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ನಿವೇಶನ ಹೊಂದಿರುವ ಎಸ್ಸಿ ಮತ್ತು ಎಸ್ಟಿ ಫಲಾನುಭವಿಗಳಿಗೆ ಮನೆ ಕಟ್ಟಿಕೊಳ್ಳಲು 1 ಲಕ್ಷ ರೂ. ನಿಗದಿ ಮಾಡಲಾಗಿದೆ. ಅದನ್ನು 3 ರಿಂದ 5 ಲಕ್ಷ ರೂ.ಗೆ ನಿಗದಿ ಮಾಡಬೇಕು. ಇದರಿಂದ ಬಡ ಕುಟುಂಬಗಳಿಗೆ ಅನುಕೂಲವಾಗಲಿದೆ ಎಂದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಶಾಸಕರ ಅಧ್ಯಕ್ಷತೆಯಲ್ಲಿ ಸರ್ಕಾರದಿಂದ ಬೋರ್ ವೆಲ್, ವಸತಿ, ಸಾಲ, ಗುಂಪು ಸಾಲ, ವೈಯಕ್ತಿಕ ಸಾಲ ಸೇರಿದಂತೆ ವಿವಿಧ ಸೌಲಭ್ಯಗಳ ವಿತರಣೆಗೆ ಕಡಿಮೆ ಪ್ರಮಾಣದ ಗುರಿ ನೀಡಲಾಗುತ್ತದೆ. ಸೌಲಭ್ಯ ವಿತರಿಸುವ ಗುರಿಯನ್ನು ಹೆಚ್ಚಳ ಮಾಡಬೇಕು ಎಂದು ಮುಖ್ಯಮಂತ್ರಿಗಳಿಗೆ ಬಸವಂತಪ್ಪ ಮನವಿ ಮಾಡಿದರು.

# ರಿವರ್ ಗೇಟ್ ದುರಸ್ತಿ ಪೂರ್ಣ



**(1ನೇ ಪುಟದಿಂದ) ಭೇಟಿ :** ಭದ್ರಾವತಿ ಶಾಸಕ ಬಿ.ಕೆ. ಸಂಗಮೇಶ್ವರ್ ಮತ್ತು ಭದ್ರಾ ಕಾಡಾ ಅಧ್ಯಕ್ಷ ಕೆ.ಪಿ. ಅಂಶುಕುಮಾರ್ ಅವರು ಭಾನುವಾರ ಬೆಳಿಗ್ಗೆ ಜಲಾಶಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

**ಮನವಿ :** ಭದ್ರಾ ಜಲಾಶಯದಿಂದ ಸ್ಲೂಯಿಸ್ ಗೇಟ್ ಮೂಲಕ ಪೋಲಾಗುತ್ತಿದ್ದ ನೀರನ್ನು ತಡೆಗಟ್ಟುವ ಕೆಲಸ ಯಶಸ್ವಿಯಾಗಿದ್ದು, ಈ ವಿಚಾರದಲ್ಲಿ ಅಚ್ಚುಕಟ್ಟಿನ ರೈತರು ಯಾವುದೇ ವದಂತಿಗಳಿಗೆ ಕಿವಿಗೊಡಬಾರದೆಂದು ಹರಿಹರ ಕ್ಷೇತ್ರದ ಕಾಂಗ್ರೆಸ್ ಮುಖಂಡ ನಂದಿಗಾವಿ ಶ್ರೀನಿವಾಸ್ ಮನವಿ ಮಾಡಿದ್ದಾರೆ. ಈ ಬಾರಿ ಮುಂಗಾರು ಮಳೆ ಭರವಸೆ ಮೂಡಿಸಿದ್ದು, ಭದ್ರಾ ಜಲಾಶಯ ಭರ್ತಿ ಆಗುವುದರಲ್ಲಿ ಯಾವುದೇ ಅನುಮಾನವಿಲ್ಲ ರೈತರು ಆಶಾದಾಯಕವಾಗಿ ಇರುವಂತೆ ಶ್ರೀನಿವಾಸ್ ವಿಶ್ವಾಸ ವ್ಯಕ್ತಪಡಿಸಿದರು.

## ವಿಮೆ ಎರಡು ಪಟ್ಟು ಹೆಚ್ಚಿಸಲು ಪರಿಶೀಲನೆ

**(1ನೇ ಪುಟದಿಂದ)** ಘೋಷಣೆಯಾಗುವ ಸಾಧ್ಯತೆಯೂ ಇದೆ.

ದೇಶದಲ್ಲಿ 70 ವರ್ಷ ಮೀರಿದ ನಾಲ್ಕರಿಂದ ಐದು ಕೋಟಿ ಜನರಿದ್ದು ಅವರೆಲ್ಲರೂ ಆಯುಷ್ಮಾನ್ ಭಾರತ್ ಯೋಜನೆ ವ್ಯಾಪ್ತಿಗೆ ಬರಲಿದ್ದಾರೆ ಎಂದು ಮೂಲಗಳು ತಿಳಿಸಿವೆ. 2018ರಲ್ಲಿ ಆಯುಷ್ಮಾನ್ ಭಾರತ್ ವಿಮೆ ಮೊತ್ತವನ್ನು 5 ಲಕ್ಷ ರೂ.ಗಳಿಗೆ ನಿಗದಿಪಡಿಸಲಾಗಿತ್ತು

# ಕೊಲ್ಕೊತ್ತಾ ಪೊಲೀಸ್ ಆಯುಕ್ತ, ಡಿ.ಸಿ.ಪಿ. ವಿರುದ್ಧ ಕೇಂದ್ರದ ಕ್ರಮ

ಕೊಲ್ಕತ್ತಾ, ಜು. 7 - ಪಶ್ಚಿಮ ಬಂಗಾಳದ ರಾಜ್ಯಪಾಲರ ಕಚೇರಿ ವಿರುದ್ಧ ಆಧಾರ ರಹಿತ ಸುದ್ದಿಗಳನ್ನು ಹರಡಿದ ಹಾಗೂ ಇಂತಹ ಸುದ್ದಿಗಳಿಗೆ ಪ್ರಚೋದನೆ ನೀಡುವ ಮೂಲಕ ಕಳಂಕ ತಂದ ಆರೋಪದ ಮೇಲೆ ಕೊಲ್ಕತ್ತಾ ಪೊಲೀಸ್ ಆಯುಕ್ತ ವಿನೀತ್ ಗೋಯಲ್ ಹಾಗೂ ಡಿಸಿಪಿ ಒಬ್ಬರ ವಿರುದ್ಧ ಕ್ರಮಕ್ಕೆ ಕೇಂದ್ರ ಗೃಹ ಸಚಿವಾಲಯ ಮುಂದಾಗಿದೆ.

ರಾಜ್ಯಪಾಲ ಸಿ.ವಿ. ಆನಂದ ಬೋಸ್ ಅವರು ಗೋಯಲ್ ಹಾಗೂ ಕೋಲ್ಕತ್ತಾ ಡಿಸಿಪಿ ಇಂದಿರಾ ಮುಖರ್ಜಿ ಅವರಿಗೆ ಸಂಬಂಧಿಸಿದ ವರದಿ ಸಲ್ಲಿಸಿದ ನಂತರ ಕೇಂದ್ರ ಗೃಹ ಸಚಿವಾಲಯ ಕ್ರಮಕ್ಕೆ ಮುಂದಾಗಿದೆ ಎಂದು ಕೇಂದ್ರದ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ರಾಜ್ಯ ಪೊಲೀಸ್ ಅಧಿಕಾರಿಗಳು ಸಾರ್ವಜನಿಕ ಉದ್ಯೋಗಿಗಳಿಗೆ ಸೂಕ್ತವಲ್ಲದ ರೀತಿಯಲ್ಲಿ ನಡೆದುಕೊಂಡಿದ್ದಾರೆ ಎಂದು ವರದಿಯಲ್ಲಿ ತಿಳಿಸಲಾಗಿದೆ.

ಹಿಂಸಾಚಾರದ ಸಂತ್ರಸ್ತರು ರಾಜ್ಯಪಾಲರನ್ನು ಭೇಟಿ ಮಾಡಲು ಅವಕಾಶ ನೀಡದೇ ತಡೆದ ಬಗ್ಗೆಯೂ ಉಲ್ಲೇಖಿಸಲಾಗಿದೆ. ಬೋಸ್ ಸಲ್ಲಿಸಿದ ವಿವರವಾದ ವರದಿಯನ್ನು ಆಧರಿಸಿ ಐಪಿಎಸ್ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮಕ್ಕೆ ಮುಂದಾಗಲಾಗಿದೆ ಎಂದು ಅಧಿಕಾರಿಯೊಬ್ಬರು ಹೇಳಿದ್ದಾರೆ.

ಈ ಸಂಬಂಧದ ಪತ್ರದ ಪ್ರತಿಗಳನ್ನು ರಾಜ್ಯ ಸರ್ಕಾರಕ್ಕೆ ಜುಲೈ 4ರಂದು ಕಳಿಸಲಾಗಿದೆ.

ರಾಜ್ಯಪಾಲರ ವಿರುದ್ಧ ಮಹಿಳಾ ಉದ್ಯೋಗಿಯೊಬ್ಬರು ಲೈಂಗಿಕ ಪೀಡನೆಯ ಆರೋಪ ಮಾಡಿದ್ದರು. ರಾಜಭವನದಲ್ಲಿ ನಿಯೋಜಿಸಲಾಗಿದ್ದ ಪೊಲೀಸ್ ಅಧಿಕಾರಿಗಳು ಕಳೆದ ಏಪ್ರಿಲ್ ಹಾಗೂ ಮೇ ತಿಂಗಳಲ್ಲಿ ಮಾಡಿದ ಕಪೋಲ ಕಲ್ಪಿತ ಆರೋಪಗಳ ಪ್ರಚಾರದಲ್ಲಿ ತೊಡಗಿದ್ದರು ಎಂದು ವರದಿಯಲ್ಲಿ ಹೇಳಲಾಗಿದೆ.

ಅವರ ಈ ಕೃತ್ಯಗಳಿಂದ ರಾಜ್ಯಪಾಲರ ಕಚೇರಿಗೆ ಕಳಂಕ ಬಂದಿರುವ ಜೊತೆಗೆ ಅವರ ಕಾರ್ಯನಿರ್ವಹಣೆಯು ಸಾರ್ವಜನಿಕ ಸೇವಕರ ಹುದ್ದೆಗೆ ಸಂಪೂರ್ಣ ವ್ಯತಿರಿಕ್ತವಾಗಿದೆ ಎಂದು ವರದಿಯಲ್ಲಿ ಹೇಳಲಾಗಿದೆ.

ರಾಜ್ಯಪಾಲರ ಕಚೇರಿಯ ಆಕ್ಷೇಪಣೆಯ ಹೊರತಾಗಿಯೂ ರಾಜಭವನದ ಸಿಬ್ಬಂದಿಗೆ ಗುರುತಿನ ಚೀಟಿ ನೀಡುವ ಹಾಗೂ ಅವರು ರಾಜಭವನಕ್ಕೆ ಬರುವಾಗ ಮತ್ತು ನಿರ್ಗಮಿಸುವಾಗ ತಪಾಸಣೆಗೆ ಒಳಪಡಿಸುವ ಹೊಸ ಪದ್ಧತಿಗೆ ಚಾಲನೆ ನೀಡಲಾಗಿತ್ತು ಎಂದು ವರದಿಯಲ್ಲಿ ಹೇಳಲಾಗಿದೆ.

ರಾಜಭವನದಲ್ಲಿದ್ದ ಪೊಲೀಸ್ ತುಕಡಿಯನ್ನು ತೆರವುಗೊಳಿಸುವಂತೆ ಜೂನ್ 13ರಂದು ರಾಜಭವನದಿಂದ ನೀಡಲಾಗಿದ್ದ ಆದೇಶದ ಬಗ್ಗೆ ಕೊಲ್ಕತ್ತಾ ಪೊಲೀಸರು ಸಂಪೂರ್ಣ ಮೌನವಾಗಿದ್ದರು. ಇದು ಆದೇಶಗಳ ಉಲ್ಲಂಘನೆಯಾಗಿದೆ. ಜೂನ್ ಮಧ್ಯಾವಧಿಯಲ್ಲಿ ರಾಜ್ಯಪಾಲರ ಗಮನಕ್ಕೆ ತಾರದೇ ಹಾಗೂ ಅವರ ಅನುಮತಿಯನ್ನು ಪಡೆಯದೆ ಏಕ ಪಕ್ಷೀಯವಾಗಿ ರಾಜಭವನದಲ್ಲಿ ಕೊಲ್ಕತ್ತಾ ಪೊಲೀಸರನ್ನು ನಿಯೋಜಿಸುವ ಹೊಸ ವ್ಯವಸ್ಥೆ ಮಾಡಲಾಗಿತ್ತು.

# ಕಂಚಿಕೆರೆಯ ಶ್ರೀ ಕೋಡಿ ವೀರಭದ್ರೇಶ್ವರ ಸ್ವಾಮಿಯ ಮಹಾಮಂಡಲ ಪೂಜೆ



ಹರಪನಹಳ್ಳಿ, ಜು. 7 - ಕಂಚಿಕೆರೆ ಗ್ರಾಮದ ಶ್ರೀ ಕೋಡಿ ವೀರಭದ್ರೇಶ್ವರ ಸ್ವಾಮಿ ದೇವಸ್ಥಾನದಲ್ಲಿ ನಾಡಿದ್ದು ದಿನಾಂಕ 9 ರಂದು ಆವರಗೊಳ್ಳ ಪುರವರ್ಗ ಹಿರೇಮಠದ ಶ್ರೀ ಓಂಕಾರ ಶಿವಾಚಾರ್ಯ ಸ್ವಾಮೀಜಿ ಸಾನ್ನಿಧ್ಯದಲ್ಲಿ ಮಹಾಮಂಡಲ ಪೂಜೆ ನಡೆಯಲಿದೆ. ಶ್ರೀ ಕೋಡಿ ವೀರಭದ್ರೇಶ್ವರ ಸ್ವಾಮಿ ಸ್ಥಾಪಿತಗೊಂಡು 48 ದಿನಗಳು ಕಳೆದ ಹಿನ್ನೆಲೆಯಲ್ಲಿ ಈ ಮಹಾಮಂಡಲ ಪೂಜೆಯನ್ನು ಹಮ್ಮಿಕೊಳ್ಳಲಾಗಿದೆ, ಅಂದು ಬೆಳಗ್ಗೆ ಪ್ರಾತ ಕಾಲದಲ್ಲಿ ಲೋಕ ಕಲ್ಯಾಣಕ್ಕಾಗಿ ಮಳೆ-ಬೆಳೆ ಸಿದ್ಧಿಗಾಗಿ ವೀರಭದ್ರೇಶ್ವರ ಸ್ವಾಮಿಗೆ ಏಕಾದಶಿ ರುದ್ರಾಭಿಷೇಕ, 108 ಕುಂಭೋತ್ಸವದೊಂದಿಗೆ ಕುಂಭಾಭಿಷೇಕ ನಡೆಯಲಿದೆ.

## ಉಪನ್ಯಾಸಕ ಹೆಚ್.ಆರ್. ಬಸವರಾಜ್ ನಿಧನ



ದಾವಣಗೆರೆ ಸಿಟಿ ವಾಜಪೇಯಿ ಬಡಾವಣೆ ವಾಸಿ ಹೆಬ್ಬಾಳು ಗ್ರಾಮದ ನಿವೃತ್ತ ಶಿಕ್ಷಕ **ಹೆಚ್.ಎ. ರುದ್ರಪ್ಪ** ಇವರ ಪುತ್ರ, ದಾವಣಗೆರೆ ರಾಘವೇಂದ್ರ ಪಿಯು ಕಾಲೇಜ್ ಉಪನ್ಯಾಸಕರಾಗಿದ್ದ

**ಹೆಚ್.ಆರ್. ಬಸವರಾಜ್**

ಅವರು ದಿನಾಂಕ : 7.7.2024 ರ ಭಾನುವಾರ ಮಧ್ಯಾಹ್ನ 2.40ಕ್ಕೆ ನಿಧನರಾಗಿದ್ದಾರೆ.

ಮೃತರಿಗೆ 33 ವರ್ಷ ವಯಸ್ಸಾಗಿತ್ತು. ಪತ್ನಿ, ತಂದೆ-ತಾಯಿ, ಸಹೋದರ ಹಾಗೂ ಅಪಾರ ಬಂಧುಗಳನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ 8.7.2024 ರ ಸೋಮವಾರ ಬೆಳಿಗ್ಗೆ 11 ಗಂಟೆಗೆ ಹೆಬ್ಬಾಳು ಗ್ರಾಮದಲ್ಲಿ ನೆರವೇರಲಿದೆ.

ಇಂತಿ ದುಃಖತಪ್ತ ಕುಟುಂಬ ವರ್ಗ :

**97414 43746, 80508 57244**

## ಗುರು ಲಿಂಗ ಜಂಗಮರಾಧನೆ ಆಹ್ವಾನ

ದಾವಣಗೆರೆ ಸಿಟಿ ಕೆ.ಬಿ ಬಡಾವಣೆ ವಾಸಿಗಳಾದ

**ಗದುಗಿನ ಮಠದ ಶ್ರೀಮತಿ ಲಲಿತಮ್ಮ**

ಇವರು ಮಾಡುವ ವಿಜ್ಞಾಪನೆಗಳು.



ದಿನಾಂಕ 27.06.2024ನೇ ಗುರುವಾರ ಬೆಳಿಗ್ಗೆ 11.05ಕ್ಕೆ ನನ್ನ ಪೂಜ್ಯ ಪತಿಯವರಾದ

**ಶ್ರೀ ಶಶಿಶೇಖರಸ್ವಾಮಿ ಜಿ.ಎಂ.**

(ದಿ. ಗದುಗಿನ ಮಠದ ಶ್ರೀ ಅನ್ನದಾನಯ್ಯನವರ ಚತುರ್ಥ ಪುತ್ರ) ಇವರು ಲಿಂಗೈಕ್ಯರಾದ ಪ್ರಯುಕ್ತ ತತ್ಸಂಬಂಧವಾದ

**'ಗುರು ಲಿಂಗ ಜಂಗಮಾರಾಧನೆ'ಯನ್ನು**

**ದಿನಾಂಕ: 9.7.2024ನೇ ಮಂಗಳವಾರ ಬೆಳಿಗ್ಗೆ 11ಕ್ಕೆ 1ನೇ ಮೇನ್, 8ನೇ ಕ್ರಾಸ್, ಕೆ.ಬಿ. ಬಡಾವಣೆ ದಾವಣಗೆರೆಯಲ್ಲಿರುವ ಮೃತರ ಸ್ವಗೃಹದಲ್ಲಿ** ನೆರವೇರಿಸಲು ಗುರು-ಹಿರಿಯರು ನಿಶ್ಚಯಿಸಿರುವುದರಿಂದ ತಾವುಗಳು ಆಗಮಿಸಿ, ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ.

**ಇಂತಿ ದುಃಖತಪ್ತರು :**

**ಶ್ರೀಮತಿ ಗದುಗಿನ ಮಠದ ಲಲಿತಮ್ಮನವರು ಮತ್ತು ಮಕ್ಕಳು, ಸೊಸೆ, ಅಳಿಯಂದಿರು, ಮೊಮ್ಮಕ್ಕಳು, ಗದುಗಿನ ಮಠದ ವಂಶಸ್ಥರು ಹಾಗೂ ಬಂಧು-ಮಿತ್ರರು.**

ವಿ.ಸೂ. : ಆತ್ಮೀಯರೇ, ಇದನ್ನೇ ವೈಯಕ್ತಿಕ ಆಹ್ವಾನವೆಂದು ಭಾವಿಸಿ ಆಗಮಿಸಬೇಕಾಗಿ ವಿನಂತಿ.

# ಮಲೇಬೆನ್ನೂರಿನಲ್ಲಿ ಕನ್ನಡದ ರಥಯಾತ್ರೆಗೆ ಸ್ವಾಗತ



ಮಲೇಬೆನ್ನೂರು, ಜು. 7 - ಮೈಸೂರು ರಾಜ್ಯವು ಕರ್ನಾಟಕವೆಂದು ನಾಮಕರಣವಾಗಿ 50 ವರ್ಷಗಳನ್ನು ಪೂರೈಸಿರುವ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರವು 'ಹೆಸರಾಯಿತು ಕರ್ನಾಟಕ, ಉಸಿರಾಗಲಿ ಕನ್ನಡ' ಎಂಬ ಘೋಷವಾಕ್ಯವನ್ನೊಳಗೊಂಡ ಕನ್ನಡ ರಥಯಾತ್ರೆಯನ್ನು ರಾಜ್ಯಾದ್ಯಂತ ಸಂಚರಿಸಲು ಚಾಲನೆ ನೀಡಿದೆ.

ರಥಯಾತ್ರೆಯು ಭಾನುವಾರ ಬೆಳಿಗ್ಗೆ ಮಲೇಬೆನ್ನೂರು ಪಟ್ಟಣಕ್ಕೆ ಆಗಮಿಸಿದಾಗ ಪುರಸಭೆ ಮತ್ತು ಕನ್ನಡ ಸಾಹಿತ್ಯ ಪರಿಷತ್ ಹಾಗೂ ಕನ್ನಡಾಭಿಮಾನಿಗಳು ಹಾಜರಿದ್ದು, ರಥಕ್ಕೆ ಪುಷ್ಪಾರ್ಚನೆ ಮತ್ತು ಭುವನೇಶ್ವರಿ ತಾಯಿಗೆ ಮಾಲಾರ್ಪಣೆ ಮಾಡಿ ಸ್ವಾಗತಿಸಿ, ನಂತರ ಹೊನ್ನಾಳಿಗೆ ಬಿಳ್ಕೊಟ್ಟರು.

ಜಿ.ಪಂ. ಮಾಜಿ ಸದಸ್ಯರಾದ ಬೆಣ್ಣೆಹಳ್ಳಿ ಹಾಲೇಶಪ್ಪ, ಬಿ.ಎಂ. ವಾಗೀಶ್‌ಸ್ವಾಮಿ, ಎಪಿಎಂಸಿ ಮಾಜಿ ಅಧ್ಯಕ್ಷ ಜಿ.ಮಂಜುನಾಥ್ ಪಟೇಲ್, ಡಿಸಿಸಿ ಬ್ಯಾಂಕ್ ಮಾಜಿ ಉಪಾಧ್ಯಕ್ಷ ಜಿಗಳಿ ಆನಂದಪ್ಪ, ಪಿಎಸ್‌ಐ ಪ್ರಭು ಕೆಳಗಿನಮನಿ, ಪುರಸಭೆ ಸದಸ್ಯರಾದ ನಯಾಜ್, ಸಾಬೀರ್‌ಅಲಿ, ಷಾ ಅಬ್ರಾರ್, ಎ.ಆರೀಫ್ ಅಲಿ, ಎಕ್ಕೆಗೊಂದಿ ಕರಿಯಪ್ಪ, ಕೆ.ಪಿ. ಗಂಗಾಧರ್, ಭೋವಿ ಕುಮಾರ್, ಎ.ಕೆ. ಲೋಕೇಶ್, ಕನ್ನಡ ಸಾಹಿತ್ಯ ಪರಿಷತ್ತಿನ ಹೋಬಳಿ ಘಟಕದ ಅಧ್ಯಕ್ಷ ದಂಡಿ ತಿಪ್ಪೇಸ್ವಾಮಿ, ಜಿಲ್ಲಾ ಕಸಾಪ ಸಂಘಟನಾ ಕಾರ್ಯದರ್ಶಿ ಜಿಗಳಿ ಪ್ರಕಾಶ್, ತಾ. ಕಸಾಪ ಸಂಘಟನಾ ಕಾರ್ಯದರ್ಶಿ ಹೆಚ್.ಎಂ. ಸದಾನಂದ್, ಹೋಬಳಿ ಕಾರ್ಯದರ್ಶಿ ಚಂದ್ರಶೇಖರ್, ಖಜಾಂಚಿ ಕುಂಬಳೂರು ವಾಸು, ಪ್ರಗತಿಪರ ಚಿಂತಕ ಸಿರಿಗೆರೆಯ ಕುಂದೂರು ಮಂಜಪ್ಪ, ಕರವೇ ಕಾರ್ಯಕರ್ತ ಬಟ್ಟೆ ಅಂಗಡಿ ವಿಶ್ವ, ವಾಸವಿ ರಮೇಶ್, ಮಲ್ಲಿಕಾರ್ಜುನ್ ಕಲಾಲ್ ಮತ್ತಿತರರು ಈ ವೇಳೆ ಹಾಜರಿದ್ದರು.

# ನಿತ್ಯ ಯೋಗ ಮಾಡುವುದು ಸಂತೋಷಕ್ಕೆ ಸಹಕಾರಿ

## ಬಾಪೂಜಿ ಶಾಲೆಯ ಯೋಗ ದಿನದಲ್ಲಿ ಯೋಗ ತಜ್ಞ ಶ್ರೀರಾಮಚಂದ್ರ ನಾಡಿಗ್



ದಾವಣಗೆರೆ, ಜು.7- ಪ್ರತಿನಿತ್ಯ ನಾವು ಯೋಗ ಮಾಡುವುದರಿಂದ ಇಡೀ ದಿನ ಉಲ್ಲಾಸಭರಿತ ಹಾಗೂ ಸಂತೋಷವಾಗಿರಲು ಸಹಕಾರಿಯಾಗುತ್ತದೆ ಎಂದು ಹೆಸರಾಂತ ಯೋಗ ತಜ್ಞರು ಹಾಗೂ ದಂತ ವೈದ್ಯರಾದ ಶ್ರೀರಾಮಚಂದ್ರ ನಾಡಿಗ್ ಹೇಳಿದರು.

ನಗರದ ಬಾಪೂಜಿ ಹಿರಿಯ ಪ್ರಾಥಮಿಕ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಆಚರಿಸಲಾದ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾವಹಿಸಿ ಅವರು ಮಾತನಾಡಿದರು.

ಹಿಂದಿನ ಕಾಲದ ಋಷಿಮುನಿಗಳಿಂದ ಹಿಡಿದು ಇಲ್ಲಿಯವರೆಗೂ ಯೋಗವನ್ನು ಅತ್ಯಂತ ಶ್ರದ್ಧೆಯಿಂದ ರೂಡಿಸಿಕೊಂಡು ಬರಲಾಗಿದೆ. ಆದ್ದರಿಂದ ಪ್ರತಿಯೊಬ್ಬರೂ ಯೋಗವನ್ನು ತಮ್ಮ ಜೀವನದಲ್ಲಿ ರೂಢಿಸಿಕೊಂಡು ಆರೋಗ್ಯವನ್ನು ವೃದ್ಧಿ ಮಾಡಿಕೊಂಡು ಸುಖೀ ಜೀವನವನ್ನು ನಡೆಸಬೇಕು ಎಂದು ಅವರು ಕರೆ ನೀಡಿದರು.

ಶಾಲೆಯ ಮುಖ್ಯಸ್ಥ ಮಂಜುನಾಥ ರಂಗರಾಜು ಮಾತನಾಡುತ್ತಾ, ಪ್ರತಿಯೊಬ್ಬ ವ್ಯಕ್ತಿಯು ಅತ್ಯಂತ ಕ್ರಿಯಾಶೀಲವಾಗಿರುವುದಕ್ಕೆ ಯೋಗವೇ ಕಾರಣ ಎಂದು ತಿಳಿಸಿದರು.

ಶಾಲೆಯ ಪ್ರಾಂಶುಪಾಲರಾದ ಜೆ.ಎಸ್ ವನಿತಾ ಮಾತನಾಡಿ, ಯೋಗವು ದೇಹ, ಮನಸ್ಸು ಮತ್ತು ಆತ್ಮವನ್ನು ಸಂಯೋಜಿಸುತ್ತದೆ, ಆರೋಗ್ಯ ಮತ್ತು ಯೋಗಕ್ಷೇಮಕ್ಕೆ ಸಮಗ್ರ ವಿಧಾನವನ್ನು ನೀಡುತ್ತದೆ ಎಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಶಿಕ್ಷಕಿ ಮಾಧುರಿ, ಪ್ರಾಥಮಿಕ ವಿಭಾಗದ ಮುಖ್ಯಸ್ಥರಾದ ಶೋಭಾರಾಣಿ, ಪ್ರಭು ಪಿ.ವಿ, ಸವಿತಾ ಆರ್., ಶೈಕ್ಷಣಿಕ ಪರಿಶೋಧಕ ವಾಸೀಮ್ ಪಾಷಾ ಎಂ ಉಪಸ್ಥಿತರಿದ್ದರು.

ಕಾರ್ಯಕ್ರಮದ ನಿರೂಪಣೆಯನ್ನು ಹತ್ತನೇ ತರಗತಿ ಸುದೀಕ್ಷಾ ಆರ್.ಜಿ. ಎಂ ನಡೆಸಿಕೊಟ್ಟರು. ಇದೇ ಸಂದರ್ಭದಲ್ಲಿ ವಿಶ್ವ ಸಂಗೀತ ದಿನವನ್ನು ಸಹ ಆಚರಿಸಲಾಯಿತು. ಶಾಲೆಯ ಸಾಕಷ್ಟು ವಿದ್ಯಾರ್ಥಿಗಳು ಸಂಗೀತವನ್ನು ನುಡಿಸುವ ಮೂಲಕ ಎಲ್ಲರನ್ನು ಮನರಂಜಿಸಿದರು.

# ಖಾಯಂ ಆದೇಶ ಪ್ರತಿ ವಿತರಣೆ

**(1ನೇ ಪುಟದಿಂದ)** 119 ಪೌರ ಕಾರ್ಮಿಕರನ್ನು ನೇರ ನೇಮಕಾತಿ ಮಾಡಿಕೊಳ್ಳುವ ಸಲುವಾಗಿ ಅರ್ಜಿಯನ್ನು ಕರೆದು 100 ಜನ ಪೌರ ಕಾರ್ಮಿಕರುಗಳಿಗೆ ನೇಮಕಾತಿ ಆದೇಶವನ್ನು ಇಂದು ನೀಡುತ್ತಿದ್ದೇವೆ ಎಂದರು.

ಪೌರ ಕಾರ್ಮಿಕ ಗೃಹಭಾಗ್ಯ ಯೋಜನೆಯಡಿ 381 ಪೌರ ಕಾರ್ಮಿಕರಿಗೆ ಹಾಗೂ ಇತರೆ ಸ್ವಚ್ಛತಾ ಸಿಬ್ಬಂದಿಗಳಿಗೆ ರೂ. 40 ಕೋಟಿ ವೆಚ್ಚದಲ್ಲಿ ವಸತಿ ಕಟ್ಟಡ ನಿರ್ಮಿಸಿ ಸ್ವಾಧೀನ ಪತ್ರಗಳನ್ನು ಹಂಚಿಕೆ ಮಾಡಲಾಗಿದ್ದು, ಪೌರ ಕಾರ್ಮಿಕರಿಗೆ ಸುರಕ್ಷತೆ ಹಾಗೂ ಆರೋಗ್ಯಕ್ಕೆ ಆದ್ಯತೆ ನೀಡುವ ಉದ್ದೇಶದಿಂದ ಸಮವಸ್ತ್ರ, ಶೂ, ರಿಫ್ಲೆಕ್ಟಿಂಗ್ ಜಾಕೆಟ್, ಸ್ವೆಟರ್, ರೈನ್‌ಕೋಟ್‌ಗಳನ್ನು, ಹ್ಯಾಂಡ್‌ಗ್ಲೌಸ್, ಮಾಸ್ಕ್ ಗಂಬೂಟ್ ಹಾಗೂ ಇತರೆ ಸುರಕ್ಷಾ ಸಾಮಗ್ರಿಗಳನ್ನು ವಿತರಿಸಲಾಗಿದೆ ಎಂದರು.

ಶೇ.5ರ ಯೋಜನೆಯಡಿ 94 ಅವಲಂಬಿತ ವಿಕಲಚೇತನ ಮಕ್ಕಳಿಗೆ ಅಂದಾಜು ರೂ. 5300/- ರಂತೆ ಪೋಷಣಾ ಭತ್ಯೆ ಹಾಗೂ 27 ವಿಕಲಚೇತನ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ, ಮೌನೇಶ್ವರಿ ಶ್ರವಣ ನ್ಯೂನತಾ ವಸತಿ ಶಾಲೆಗೆ ಮೂಲಭೂತ ಸೌಕರ್ಯ ಕೈಗೊಳ್ಳಲು ಅನುದಾನ ನೀಡಲಾಗಿದೆ ಎಂದು ತಿಳಿಸಿದರು.

ಮಹಾಪೌರರಾದ ವಿನಾಯಕ ಪೈಲ್ವಾನ್, ಸ್ಥಾಯಿ ಸಮಿತಿ ಅಧ್ಯಕ್ಷೆ ಮೀನಾಕ್ಷಿ ಜಗದೀಶ್, ಮಹಾನಗರ ಪಾಲಿಕೆ ಸದಸ್ಯರುಗಳಾದ ಎಲ್.ಡಿ.ಗೋಣೆಪ್ಪ, ಜಿ. ಎಸ್.ಮಂಜುನಾಥ್ (ಗಡಿಗುಡಾಳ್), ಜಾಕೀರ್ ಅಲಿ, ಸೋಗಿ ಶಾಂತಕುಮಾರ್, ಜಯಮ್ಮ ಗೋಪಿನಾಯ್ಕ, ರಹೀಂಸಾಬ್, ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ದಿನೇಶ್ ಕೆ. ಶೆಟ್ಟಿ, ಹುಲ್ಮನಿ ಗಣೇಶ್, ಎಲ್.ಎಮ್.ಹನುಮಂತಪ್ಪ, ಎಲ್.ಹೆಚ್. ಸಾಗರ್, ಪಾಲಿಕೆ ಕಾರ್ಯಪಾಲಕ ಅಭಿಯಂತರ ಉದಯಕುಮಾರ್, ವ್ಯವಸ್ಥಾಪಕ ನಾಗರಾಜ್ ಮತ್ತಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಚೆಕ್ ಕ್ಲೋನ್ : ಕೋಟ್ಯಂತರ ವಂಚನೆ

**(1ನೇ ಪುಟದಿಂದ)** ನಂತರ ಅದೇ ಸಂಖ್ಯೆಯನ್ನು ಹೊಸ ವ್ಯಕ್ತಿಯ ಹೆಸರಿನಲ್ಲಿ ಖರೀದಿಸಲಾಗುತ್ತಿತ್ತು. ಹೀಗಾಗಿ ಬ್ಯಾಂಕು ವಹಿವಾಟಿನ ವಿವರಗಳನ್ನು ಕಳಿಸಿದಾಗ ವಂಚಕರ ಬಳಿ ಇದ್ದ ಸಿಮ್‌ಗೆ ತಲುಪುತ್ತಿತ್ತು. ಈ ತಂಡ ವಂಚನೆಯಿಂದ ಪಡೆದ ಹಣವನ್ನು ಬೇರೆಯವರ ಖಾತೆಗೆ ಜಮಾ ಮಾಡುತ್ತಿತ್ತು. ಹೀಗಾಗಿ ಹಣದ ವರ್ಗಾವಣೆಯ ಸುಳಿವು ಪಡೆಯುವುದು ಕಠಿಣವಾಗುತ್ತಿತ್ತು. ಈ ರೀತಿ ಅಕ್ರಮವಾಗಿ ಪಡೆದ ಹಣವನ್ನು ಜಮೀನು ಖರೀದಿ ಇಲ್ಲವೇ ಆಸ್ತಿ ಖರೀದಿಗೆ ಬಳಸಿಕೊಳ್ಳಲಾಗುತ್ತಿತ್ತು ಎಂದು ಪೊಲೀಸರು ಹೇಳಿದ್ದಾರೆ.

ವಂಚಕರಿಂದ 42 ಮೊಬೈಲ್ ಫೋನ್, 33 ಸಿಮ್ ಕಾರ್ಡ್, 12 ಚೆಕ್ ಬುಕ್ ಪಾಸ್ ಬುಕ್ ಹಾಗೂ 14 ಬಿಡಿ ಚೆಕ್‌ಗಳನು ವಶಪಡಿಸಿಕೊಳ್ಳಲಾಗಿದೆ. ಬಂಧಿತರಿಂದ ಕಾರು ಒಂದನ್ನು ವಶಪಡಿಸಿಕೊಳ್ಳಲಾಗಿದೆ. ಅವರು ದೆಹಲಿ ಪೊಲೀಸರ ಟೋಪಿಯನ್ನೂ ಇಟ್ಟುಕೊಂಡಿರುತ್ತಿದ್ದರು. ಅಗತ್ಯವಾದಲ್ಲಿ ತಾವು ಪೊಲೀಸ್ ಸಿಬ್ಬಂದಿ ಎಂದು ಹೇಳಿ ನುಣುಚಿಕೊಳ್ಳುತ್ತಿದ್ದರು.

ಇವರು ಬೇರೆ ಬೇರೆ ಫೋನ್‌ಗಳನ್ನು ಬಳಸುತ್ತಾ ಸುಳಿವು ಸಿಗದಂತೆ ನೋಡಿಕೊಳ್ಳುತ್ತಿದ್ದರು. ತಮ್ಮ ನಡುವಿನ ಸಂಪರ್ಕಕ್ಕಾಗಿ ಅವರು ವಾಕಿಟಾಕಿಗಳನ್ನು ಬಳಸುತ್ತಿದ್ದರು. ಈ ತಂಡ ದೆಹಲಿ, ಮಧ್ಯಪ್ರದೇಶ, ಹರಿಯಾಣ, ಛತ್ತೀಸ್‌ಘಡ ಹಾಗೂ ಉತ್ತರ ಪ್ರದೇಶ ಸೇರಿದಂತೆ ಹಲವು ಕಡೆಗಳಲ್ಲಿ ಸಕ್ರಿಯವಾಗಿತ್ತು.

## ಡೆಂಗ್ಯೂ : ಕ್ರಮಕ್ಕೆ ಸಚಿವ ಎಸ್ಸೆಸ್ಸೆಂ ನಿರ್ದೇಶನ

**(1ನೇ ಪುಟದಿಂದ)** ಲಿದ್ದು, ಇದಕ್ಕೆ ಸಂಬಂಧಪಟ್ಟಂತೆ ಮುಂಜಾಗ್ರತೆ ಕ್ರಮ ಕೈಗೊಳ್ಳಬೇಕೆಂದು ಸೂಚಿಸಿದರು. ಸಂಶೋಧಕರು ಡೆಂಗ್ಯೂ ಜ್ವರ ಲಸಿಕೆಗಳ ಮೇಲೆ ಕೆಲಸ ಮಾಡುತ್ತಿದ್ದು, ಲಸಿಕೆ ಬರುವವರೆಗೂ ಸದ್ಯಕ್ಕೆ, ಡೆಂಗ್ಯೂ ಜ್ವರ ಸಾಮಾನ್ಯವಾಗಿರುವ ಪ್ರದೇಶಗಳಲ್ಲಿ, ಸೊಳ್ಳೆಗಳು ಕಚ್ಚುವುದನ್ನು ತಪ್ಪಿಸುವುದು ಮತ್ತು ಸೊಳ್ಳೆಗಳ ಸಂಖ್ಯೆಯನ್ನು ಕಡಿಮೆ ಮಾಡಲು ಕ್ರಮಗಳನ್ನು ತೆಗೆದುಕೊಳ್ಳುವುದು. ಸೋಂಕನ್ನು ತಡೆಗಟ್ಟಲು ಉತ್ತಮ ಮಾರ್ಗವಾಗಿದ್ದು ಈ ಬಗ್ಗೆ ಆರೋಗ್ಯ ಅಧಿಕಾರಿಗಳು ಗಮನ ಹರಿಸಬೇಕೆಂದರು.

ತೀವ್ರವಾದ ಡೆಂಗ್ಯೂ ಜ್ವರವು ಜೀವಕ್ಕೆ ಅಪಾಯಕಾರಿ ವೈದ್ಯಕೀಯ ತುರ್ತುಸ್ಥಿತಿಯಾಗಿದ್ದು ಈ ಬಗ್ಗೆ ಆರೋಗ್ಯ ಅಧಿಕಾರಿಗಳು ಹೆಚ್ಚಿನ ಗಮನ ಹರಿಸಬೇಕೆಂದು ತಿಳಿಸಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಷಣ್ಮುಖಪ್ಪ ಹಾಗೂ ಆರೋಗ್ಯ ಅಧಿಕಾರಿಗಳು ಭಾಗವಹಿಸಿದ್ದರು.

# ರೈತರ ಸಹಾಯ ಧನಕ್ಕೂ ಕಾಂಗ್ರೆಸ್ ಕಣ್ಣು

ದಾವಣಗೆರೆ, ಜು.7- ಹನಿ ನಿರಾವರಿ ಯೋಜನೆಗೆ ನೀಡುತ್ತಿದ್ದ ಸಹಾಯ ಧನದ ಮೊತ್ತವನ್ನು ಶೇ.75ರಿಂದ 45ಕ್ಕೆ ಇಳಿಸಿದ ಕಾಂಗ್ರೆಸ್ ಸರ್ಕಾರ, ರೈತ ವಿರೋಧಿ ಎಂದು ಬಿಜೆಪಿ ಜಿಲ್ಲಾ ವಕ್ತಾರ ಬಿ.ಎಂ. ಸತೀಶ್ ಕೊಳೇನಹಳ್ಳಿ ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಈ ಯೋಜನೆಗೆ ಕೇಂದ್ರ ಸರ್ಕಾರ ನೀಡುವ ಶೇ.27ರಷ್ಟು ಸಬ್ಸಿಡಿ ಹಣಕ್ಕೆ ರಾಜ್ಯ ಸರ್ಕಾರ ಶೇ.48ರಷ್ಟು ಸೇರಿಸಿ ಒಟ್ಟು ಶೇ.75ರಷ್ಟು ಸಹಾಯ ಧನ ರೈತರ ಪಾಲಾಗುತ್ತಿತ್ತು, ಆದರೆ ರಾಜ್ಯ ಸರ್ಕಾರ ಗ್ಯಾರಂಟಿ ಹಣದ ಕ್ರೋಢೀಕರಣಕ್ಕಾಗಿ ತನ್ನ ಪಾಲಿನಲ್ಲಿ ಶೇ.18ರಷ್ಟು ಕಡಿತಗೊಳಿಸಿ ಒಟ್ಟು ಸಹಾಯ ಧನವನ್ನು ಶೇ.45ಕ್ಕೆ ಇಳಿಸಿರುವುದು ಖಂಡನೀಯ ಎಂದರು.

ಜಿಲ್ಲೆಯಲ್ಲಿ 5466 ರೈತರು ಈ ಯೋಜನೆಯ ಫಲಾನುಭವಿಗಳಾಗಿದ್ದು, ರಾಜ್ಯ ಸರ್ಕಾರದ ಈ ಆದೇಶ ಜಿಲ್ಲೆಯ ರೈತರಿಗೆ ಆರ್ಥಿಕ ಹೊರೆ ಹೆಚ್ಚಿಸುವ ಜತೆಗೆ ರೈತರನ್ನು ಸಂಕಷ್ಟಕ್ಕೆ ಸಿಲುಕಿಸಲಿದೆ ಎಂದು ಹೇಳಿದರು.

ಹಾಲು ಉತ್ಪಾದನೆ ಹೆಚ್ಚಾಗಿದ್ದರಿಂದ, ರೈತರ ಹಾಲು ಉತ್ಪಾದನಾ ಸಾಮರ್ಥ್ಯ ಕುಗ್ಗಿಸುವ ಕುತಂತ್ರದಿಂದ ಕೋಲಾರ ಮತ್ತು ಚಿಕ್ಕಬಳ್ಳಾಪುರ ಹಾಲು ಒಕ್ಕೂಟ ಖರೀದಿಸುವ ಹಾಲಿನ ದರವನ್ನು 2ರೂ.ಗೆ ಕಡಿತ ಮಾಡಲು ಆದೇಶಿಸಿರುವುದು ಸರಿಯಲ್ಲ ಎಂದು ದೂರಿದರು.

ಬಿತ್ತನೆ ಬೀಜ, ಪೆಟ್ರೋಲ್-ಡೀಸೆಲ್, ಹಾಲು ಮತ್ತು ಮದ್ಯದ ಬೆಲೆ ಸೇರಿದಂತೆ ಇತರೆ ವಸ್ತುಗಳ ಬೆಲೆ ಏರಿಕೆ ಮಾಡಿ ಈಗ ರೈತರ ಸಹಾಯ ಧನಕ್ಕೂ ಕಣ್ಣು ಹಾಕಿದ ಸರ್ಕಾರ, ರೈತರ ಸಾಮರ್ಥ್ಯ ಕುಗ್ಗಿಸುವ ಕಾರ್ಯ ಮಾಡುತ್ತಿದೆ ಎಂದು ಟೀಕಿಸಿದರು.

ಮಳಲಕೆರೆ ಸದಾನಂದ, ಮಲ್ಲೂರು ಬಸವರಾಜ್, ಕಬ್ಬೂರ್ ಬಸವರಾಜ್, ಮಲ್ಲಿಕಾರ್ಜುನ್, ಆನೆಕಲ್ ವಿಜಯ್‌ಕುಮಾರ್, ಅಣಜಿ ಗುಡ್ಡೇಶ್, ಬಾತಿ ಬಿ.ಕೆ. ಸುರೇಶ್ ಮತ್ತು ಶಿವಕುಮಾರ್ ಸುದ್ದಿಗೋಷ್ಠಿಯಲ್ಲಿದ್ದರು.

# ಸರ್ವೇ ಚೈನಿಗೆ ಮುದ್ರೆ ಹಾಕಿಸದ ಕಾರಣ ರೈತರಿಗೆ ಅನ್ಯಾಯ

ದಾವಣಗೆರೆ, ಜು.7- ಸರ್ವೇ ಚೈನಿಗೆ ಪ್ರತಿ ವರ್ಷ ಮುದ್ರೆ ಹಾಕಿಸಬೇಕೆಂಬ ನಿಯಮವಿದ್ದರೂ, ಭೂಮಾಪನ ಇಲಾಖೆಯವರು ಕಳೆದ ಹಲವು ವರ್ಷಗಳಿಂದ ತೂಕ ಮತ್ತು ಅಳತೆ ಇಲಾಖೆಯಲ್ಲಿ ಚೈನು ಅಳತೆ ಮಾಡಿಸದ ಕಾರಣ ಜಮೀನು ಅಳೆದ ನಂತರ ರೈತರಿಗೆ ತೊಂದರೆಯಾಗುತ್ತಿದೆ ಎಂದು ಕರ್ನಾಟಕ ರಾಜ್ಯ ಮಾಹಿತಿ ಹಕ್ಕು ವೇದಿಕೆಯ ನಾಗರಾಜ್ ಸುರ್ವೇ ಆರೋಪಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಐದಾರು ವರ್ಷಗಳಿಂದ ಭೂಮಾಪನ ಇಲಾಖೆಯವರು ಜಮೀನು ಅಳೆಯುವ ಚೈನಿನ ಅಳತೆ ಮಾಡಿಸಿ, ಮುದ್ರೆಯೇ ಹಾಕಿಸಿಲ್ಲ ಎಂದರು.

ಹಲವು ವರ್ಷಗಳಿಂದ ಈ ಚೈನುಗಳಲ್ಲಿಯೇ ಅಳತೆ ಮಾಡಿಕೊಂಡು ಬರುತ್ತಿರುವ ಕಾರಣ ಪ್ರತಿ ಲಿಂಕ್‌ಗಳ ಮಧ್ಯೆ ಸವಕಳಿಯಾಗಿ, ಅಳತೆಯಲ್ಲಿ ವ್ಯತ್ಯಾಸವಾಗಿ ರೈತರ ಮಧ್ಯೆ ಜಗಳಗಳಾಗುತ್ತಿವೆ. ಅಲ್ಲದೇ, ಪೋಡ್ ಮಾಡುವಾಗ ಸರ್ವೇ ನಂಬರ್ ಅದಲು ಬದಲಾದ ಪರಿಣಾಮ ಎಷ್ಟೋ ಕೇಸ್‌ಗಳು ಸಿವಿಲ್ ಕೋರ್ಟ್ ಮೆಟ್ಟಿಲು ಏರಿವೆ. ಆದ್ದರಿಂದ ಭೂಮಾಪನ ಇಲಾಖೆಯು ತಕ್ಷಣವೇ ಹಲವು ವರ್ಷಗಳಿಂದ ಬಳಕೆ ಮಾಡಿಕೊಂಡು ಬಂದಿರುವ ಚೈನು ಬದಲಿಸಿ, ರೈತರಿಗೆ ಆಗುತ್ತಿರುವ ಅನ್ಯಾಯವನ್ನು ತಡೆಯಬೇಕು ಎಂದು ಆಗ್ರಹಿಸಿದರು.

ಪತ್ರಿಕಾಗೋಷ್ಠಿಯಲ್ಲಿ ವೇದಿಕೆಯ ಗೌರವಾಧ್ಯಕ್ಷ ಪಿ.ಜಿ. ಮುನಿಯಪ್ಪ, ಜಿಲ್ಲಾಧ್ಯಕ್ಷ ಯು.ಶ್ರೀನಿವಾಸ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಸ್. ಶ್ರೇಯಸ್ ಇದ್ದರು.

# ಕಳಪೆ ಗುಣಮಟ್ಟದ ಕಾಮಗಾರಿ ನಡೆಸಿದರೆ ಕ್ರಮ

## ಅಧಿಕಾರಿಗಳು ಮತ್ತು ಗುತ್ತಿಗೆದಾರರಿಗೆ ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ ಎಚ್ಚರಿಕೆ



ದಾವಣಗೆರೆ, ಜು.7- ಕಟ್ಟಡ ನಿರ್ಮಿಸಿದರೆ ಕನಿಷ್ಠ 50 ವರ್ಷ ಬಾಳಿಕೆ ಬರಬೇಕು. ಇಲ್ಲದಿದ್ದರೆ ಸರ್ಕಾರದ ಹಣ ಪೋಲಾಗುತ್ತದೆ. ಈ ನಿಟ್ಟಿನಲ್ಲಿ ಗುಣಮಟ್ಟದ ಕಟ್ಟಡ ನಿರ್ಮಿಸಬೇಕು. ಕಳಪೆ ಕಾಮಗಾರಿ ನಡೆಸಿದರೆ, ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಗುತ್ತಿಗೆದಾರರ ವಿರುದ್ಧ ಶಿಸ್ತು ಕ್ರಮ ತೆಗೆದುಕೊಳ್ಳುವುದಾಗಿ ಶಾಸಕ ಕೆ.ಎಸ್.ಬಸವಂತಪ್ಪ ಅಧಿಕಾರಿಗಳು ಮತ್ತು ಗುತ್ತಿಗೆದಾರರಿಗೆ ಎಚ್ಚರಿಕೆ ನೀಡಿದರು.

ಮಾಯಕೊಂಡ ಕ್ಷೇತ್ರದ ವ್ಯಾಪ್ತಿಯ ತ್ಯಾವಣಿಗೆ ಗ್ರಾಮದಲ್ಲಿ ಶನಿವಾರ 80 ಲಕ್ಷ ರೂ. ವೆಚ್ಚದ ಪದವಿ ಪೂರ್ವ ಕಾಲೇಜಿನ ಹೆಚ್ಚುವರಿ ಕೊಠಡಿ ನಿರ್ಮಾಣ ಹಾಗೂ 1.25 ಕೋಟಿ ರೂ. ವೆಚ್ಚದಲ್ಲಿ ಕರ್ನಾಟಕ ಪಬ್ಲಿಕ್ ಶಾಲೆಯ ಕಟ್ಟಡ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ಅವರು, ಕ್ಷೇತ್ರದ ವ್ಯಾಪ್ತಿಯ ಸರ್ಕಾರಿ ಶಾಲೆಗಳಿಗೆ ಭೇಟಿ ನೀಡಿ, ಕಟ್ಟಡ ಕಾಮಗಾರಿ ಪರಿಶೀಲನೆ ನಡೆಸಿದ ಸಂದರ್ಭದಲ್ಲಿ ಕೆಲವು ಶಾಲಾ ಕಟ್ಟಡಗಳಲ್ಲಿ ಕಳಪೆ ಕಾಮಗಾರಿ ನಡೆಸಿರುವುದು ಕಂಡು ಬಂದಿವೆ. ಇಲ್ಲಿ 2 ಕೋಟಿ ರೂ. ವೆಚ್ಚದಲ್ಲಿ ಕಟ್ಟಡ ನಿರ್ಮಾಣ ಮಾಡುತ್ತಿರುದರಿಂದ ಯಾವುದೇ ಕಾರಣಕ್ಕೂ ಕಾಮಗಾರಿ ಕಳಪೆ ಆಗದಂತೆ ಎಚ್ಚರಿಕೆ ವಹಿಸಬೇಕು. 50 ವರ್ಷ ಬಾಳಿಕೆ ಬರುವಂತೆ ಗುಣಮಟ್ಟದ ಕಟ್ಟಡ ನಿರ್ಮಿಸಬೇಕೆಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

ನಿಮ್ಮ ಊರಿನ ಶಾಲೆಯ ಕೊಠಡಿಗಳನ್ನು ನಿರ್ಮಿಸುತ್ತಿರುವುದರಿಂದ ಗ್ರಾಮಸ್ಥರು, ಎಸ್‌ಡಿಎಂಸಿ ಪದಾಧಿಕಾರಿಗಳು ಉಸ್ತುವಾರಿ ವಹಿಸಿಕೊಂಡು ಕಳಪೆ ಗುಣಮಟ್ಟದ ಕಟ್ಟಡ ಕಾಮಗಾರಿ ನಡೆಸದಂತೆ ನಿಗಾ ವಹಿಸಬೇಕು. ಒಂದು ವೇಳೆ ಕಳಪೆ ಕಾಮಗಾರಿ ನಡೆಯುವುದು ಕಂಡು ಬಂದರೆ ಕೂಡಲೇ ಕೆಲಸ ಸ್ಥಗಿತಗೊಳಿಸಿ, ನನ್ನ ಗಮನಕ್ಕೆ ತನ್ನಿ. ಗುತ್ತಿಗೆದಾರರ ವಿರುದ್ಧ ಕ್ರಮ ತೆಗೆದುಕೊಂಡು ಪುನಃ

**ಶಾಲೆಯಲ್ಲಿ ಮಕ್ಕಳ ಸಂಖ್ಯೆ ಕಡಿಮೆ ಇದೆ. ಪ್ರಾಥಮಿಕ ಶಾಲೆಯಿಂದ ಹಿಡಿದು ಪಿಯುಸಿಯವರೆಗೆ ದಾಖಲಾತಿ ಪ್ರಮಾಣ ಹೆಚ್ಚಿಸಿಕೊಳ್ಳಬೇಕೆಂದು ಶಿಕ್ಷಕರು ಮತ್ತು ಎಸ್‌ಡಿಎಂಸಿ ಸಮಿತಿಯವರಿಗೆ ಕ್ರಮ ವಹಿಸಲು ಸೂಚಿಸಿದ ಶಾಸಕ ಬಸವಂತಪ್ಪ**

ಗುಣಮಟ್ಟದ ಕಾಮಗಾರಿ ಕೈಗೊಳ್ಳುವಂತೆ ಸೂಚಿಸುತ್ತೇನೆ. ದಾನಿ ನೀಡಿದ ಜಾಗವನ್ನು ಕೂಡಲೇ ಖಾತೆ ಮಾಡಿಸಿಕೊಳ್ಳುವಂತೆ ಸ್ಥಳಕ್ಕೆ ತಹಶೀಲ್ದಾರ್ ಅವರನ್ನು ಕರೆಸಿ ಸೂಚನೆ ನೀಡಿದರು.

ಎಸ್‌ಡಿಎಂಸಿ ಸಮಿತಿ ಮತ್ತು ಶಾಲಾ ಶಿಕ್ಷಕರು ದಾನಿಗಳಿದ್ದರೆ ಅವರನ್ನು ಸಂಪರ್ಕಿಸಿ ದೇಣಿಗೆ ಸಂಗ್ರಹಿಸಿದರೆ ಶಾಲೆಗೆ ಇನ್ನೂ ಹೆಚ್ಚಿನ ಮೂಲಭೂತ ಸೌಲಭ್ಯ ಕಲ್ಪಿಸಲು ಸಹಾಯವಾಗುತ್ತದೆ.

ಮಾಯಕೊಂಡ ಗ್ರಾಮದ ಪ್ರಾಥಮಿಕ ಶಾಲಾ ಶಿಕ್ಷಕರು ಮತ್ತು ಎಸ್‌ಡಿಎಂಸಿ ಸಮಿತಿಯವರು ಸರ್ಕಾರದ ಅನುದಾನ ಕಾಯದೆ ತಾವೇ ದಾನಿಗಳ ಬಳಿ ದೇಣಿಗೆ ಸಂಗ್ರಹಿಸಿ, ಶಾಲೆಗೆ ಬೇಕಾದ ಮೂಲಭೂತ ಸೌಲಭ್ಯ ಕಲ್ಪಿಸಿಕೊಂಡಿದ್ದಾರೆ. ನೀವು ಕೂಡ ಇದೇ ರೀತಿ ದಾನಿಗಳಿಂದ ದೇಣಿಗೆ ಸಂಗ್ರಹಿಸುವಂತೆ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಜಿ.ಪಂ ಮಾಜಿ ಸದಸ್ಯರಾದ ಗೋವಿಂದ್ ಸಾಮಿಣ್ಣ, ಲೋಹಿತ್ ಅಣ್ಣ, ಗ್ರಾ.ಪಂ ಅಧ್ಯಕ್ಷ ಕರಬಸಣ್ಣ, ಕಾಂಗ್ರೆಸ್ ಮುಖಂಡ ದೊಡ್ಡಘಟ್ಟ ಬಾಳಣ್ಣ, ಗ್ರಾ.ಪಂ ಮಾಜಿ ಸದಸ್ಯರಾದ ಜಿ.ಪಿ.ಆಂಜನೇಯ, ರವಿಕುಮಾರ್ ನವಿಲಾಳ್, ಹಜರತ್ ಅಲಿ, ಗುತ್ತಿಗೆದಾರ ದೊಡ್ಡಘಟ್ಟ ಶಿವರಾಜ್, ಇಂಜಿನಿಯರ್ ಅಶೋಕ್, ಶಾಲಾ ಪ್ರಾಂಶುಪಾಲರಾದ ಮಲ್ಲಿಕಾರ್ಜುನ ಹಾಗೂ ಆಡಳಿತ ಸಿಬ್ಬಂದಿ, ಗ್ರಾಮಸ್ಥರು, ಮುಖಂಡರು ಭಾಗವಹಿಸಿದ್ದರು.

# ದ್ವಿಚಕ್ರ ವಾಹನ ರಿಪೇರಿ ಉಚಿತ ತರಬೇತಿಗೆ ಅರ್ಜಿ

ದಾವಣಗೆರೆ, ಜು. 7 - ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್ ಹಾಗೂ ರುಡ್‌ಸೆಟ್ ಸಂಸ್ಥೆಯ ವತಿಯಿಂದ ದ್ವಿಚಕ್ರ ವಾಹನ ರಿಪೇರಿ ಮತ್ತು ಸೇವೆ ಕುರಿತ 30 ದಿನಗಳ ಉಚಿತ ತರಬೇತಿಗಾಗಿ ಆಗಸ್ಟ್ 21 ರಿಂದ ಗ್ರಾಮೀಣ ನಿರುದ್ಯೋಗಿ ಯುವಕರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಜುಲೈ 31 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಅಥವಾ ಮೊಬೈಲ್ ಸಂಖ್ಯೆ: 9740982585, 9380162042 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ್ ತಿಳಿಸಿದ್ದಾರೆ.

# ರೇಡಿಯೋ ಸಂದರ್ಶನಕ್ಕೆ ಪ್ರಶ್ನೆ 'ಫಿಕ್ಸ್' ಮಾಡಿಕೊಂಡ ಬಿಡೆನ್



ವಾಷಿಂಗ್ಟನ್, ಜು. 7 - ಅಮೆರಿಕದ ಅಧ್ಯಕ್ಷ ಜೋ ಬಿಡೆನ್ ಅವರು ಪ್ರಶ್ನೆಗಳನ್ನು 'ಫಿಕ್ಸ್' ಮಾಡಿಕೊಂಡು ರೇಡಿಯೋ ಸಂದರ್ಶನ ನೀಡಿರುವುದು ಈಗ ಸಾಕಷ್ಟು ಚರ್ಚೆಗೆ ಕಾರಣವಾಗಿದೆ.

ರೇಡಿಯೋ ಸಂದರ್ಶನಕಾರರು ಕೇಳಬೇಕಾದ ಪ್ರಶ್ನೆಗಳನ್ನು ಮೊದಲೇ ನಿರ್ಧರಿಸಲಾಗಿತ್ತು ಎಂಬುದು ಬೆಳಕಿಗೆ ಬಂದಿದೆ. ಬಿಡೆನ್ ಅವರು ಈ ಹಿಂದೆ ಮುಕ್ತ ಚರ್ಚೆ ನಡೆಸಿದಾಗ ಸಮರ್ಪಕ ಉತ್ತರಗಳನ್ನು ನೀಡಲಾಗದೇ ಮುಖಭಂಗಕ್ಕೆ ಗುರಿಯಾಗಿದ್ದರು.

ನಂತರದಲ್ಲಿ, ಗುರುವಾರ ಜೋ ಬಿಡೆನ್ ಅವರು ವಿಸ್ಕಿನ್ಸನ್ ಹಾಗೂ ಪೆನ್ಸಿಲ್ವೇನಿಯ ರಾಜ್ಯಗಳ ರೇಡಿಯೋಗಳಿಗೆ ಸಂದರ್ಶನ ನೀಡಿದ್ದರು.

ಸಂದರ್ಶನಕಾರ ಅರ್ಲ್ ಇನ್‌ಗ್ರಾಂ ಅವರು ಶನಿವಾರ ಹೇಳಿಕೆ ನೀಡಿದ್ದು, ಬಿಡೆನ್ ಸಹಾಯಕರು ತಮಗೆ ಮೊದಲೇ ಪ್ರಶ್ನೆಗಳನ್ನು ನೀಡಿದ್ದರು. ನಾಲ್ಕು ಪ್ರಶ್ನೆಗಳನ್ನು ಮುಂಚಿತವಾಗಿ ತಿಳಿಸಲಾಗಿತ್ತು ಹಾಗೂ ಈ ವಿಷಯದಲ್ಲಿ ಮತ್ತೇನೂ ಚರ್ಚೆಗೆ ಅವಕಾಶವಿಲ್ಲ ಎಂದು ತಿಳಿಸಲಾಗಿತ್ತು ಎಂದಿದ್ದಾರೆ.

ಅವರು ಕಳಿಸಿದ್ದ ಪ್ರಶ್ನೆಗಳಷ್ಟನ್ನೆ ಕೇಳಬೇಕು ಎಂದು ತಿಳಿಸಲಾಗಿತ್ತು. ಇದರಲ್ಲಿ ಮರುವಿಚಾರಕ್ಕೆ ಯಾವುದೇ ಅವಕಾಶ ಇರಲಿಲ್ಲ ಎಂದು ಇನ್‌ಗ್ರಾಂ ಹೇಳಿದ್ದಾರೆ.

ಬಿಡೆನ್ ಮುಂದಿನ ನಾಲ್ಕು ವರ್ಷಗಳ ಆಡಳಿತ ನಡೆಸುವುದಷ್ಟೇ ಅಲ್ಲದೆ ಚುನಾವಣಾ ಪ್ರಚಾರ ಯಶಸ್ವಿಯಾಗಿ ನಡೆಸುವುದರ ಬಗ್ಗೆಯೂ ಸಾಕಷ್ಟು ಪ್ರಶ್ನೆಗಳಿದ್ದವು. ಈ ಹಿನ್ನೆಲೆಯಲ್ಲಿ ಸಂದರ್ಶನಗಳು ಪ್ರಾಮುಖ್ಯತೆ ಪಡೆದಿದ್ದವು.

ಆದರೆ, ಪ್ರಶ್ನೆಗಳನ್ನು ಮೊದಲೇ ನಿಗದಿಪಡಿಸಲಾಗಿತ್ತು ಎಂದು ಹೇಳಿರುವುದು ಬಿಡೆನ್ ಅವರಿಗೆ ಮತ್ತಷ್ಟು ಸಮಸ್ಯೆ ತಂದಿದೆ. ಪೂರ್ವ ನಿಯೋಜಿತವಲ್ಲದ ಯಾವುದೇ ಸಂದರ್ಶನ ಎದುರಿಸಲು ಬಿಡೆನ್ ಸಮರ್ಥರಿದ್ದಾರೆಯೇ ? ಎಂಬ ಪ್ರಶ್ನೆಗಳನ್ನು ಈಗ ಕೇಳಲಾಗುತ್ತಿದೆ.

ಇದಕ್ಕೂ ಮುಂಚೆ ರೇಡಿಯೋ ಸಂದರ್ಶನಗಾರ್ತಿ ಆಂಡ್ರಿಯಾ ಲಾಫುಲ್ ಸ್ಯಾಂಡರ್ಸ್ ಸಹ, ತಮಗೆ ಪೂರ್ವ ನಿಗದಿತ ಪ್ರಶ್ನೆ ಕೇಳಲು ತಿಳಿಸಲಾಗಿತ್ತು ಎಂದಿದ್ದಾರೆ. ನನಗೆ ಎಂಟು ಪ್ರಶ್ನೆಗಳನ್ನು ಒದಗಿಸಲಾಗಿತ್ತು ಅದರಲ್ಲಿ ನಾಲ್ಕು ಪ್ರಶ್ನೆಗಳನ್ನು ಆಯ್ದುಕೊಂಡಿದ್ದೆ ಎಂದು ಲಾಫುಲ್ ಹೇಳಿದ್ದಾರೆ.

ಈ ಬಗ್ಗೆ ಸಮರ್ಥನೆ ಮಾಡಿಕೊಂಡಿರುವ ಬಿಡನ್ ತಂಡ, ಮೊದಲೇ ಪ್ರಶ್ನೆಗಳನ್ನು ಒದಗಿಸುವುದು ಸಾಮಾನ್ಯ ಪದ್ಧತಿಯಾಗಿದೆ ಎಂದು ಹೇಳಿದೆ.

ಬಿಡೆನ್ ಅಭಿಯಾನದ ವಕ್ತಾರೆ ಲಾರಿನ್ ಹಿಟ್ ಮಾತನಾಡಿ, ಈಗಿನ ದಿನಮಾನಗಳಿಗೆ ಪ್ರಸ್ತುತವಾದ ಪ್ರಶ್ನೆಗಳನ್ನೇ ನಿಗದಿಪಡಿಸಲಾಗಿತ್ತು ಎಂದಿದ್ದಾರೆ.

ಪೂರ್ವ ನಿಗದಿತ ಪ್ರಶ್ನೆಗಳ ಷರತ್ತಿಗೆ ಒಪ್ಪದ ಕಾರಣದಿಂದ ರಿಪಬ್ಲಿಕ್ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಅವರು ಸಂದರ್ಶವೊಂದನ್ನು ರದ್ದುಗೊಳಿಸಿದ ಘಟನೆ ನಡೆದಿತ್ತು ಎಂದು ಲಾರೆನ್ ಹಿಟ್ ಹೇಳಿದ್ದಾರೆ.

ಈ ಬಗ್ಗೆ ಮಾತನಾಡಿರುವ ಇನ್‌ಗ್ರಾಂ ನಾನು 15 ವರ್ಷಗಳಿಂದ ರೇಡಿಯೋದಲ್ಲಿ ಕಾರ್ಯ ನಿರ್ವಹಿಸುತ್ತಿದ್ದೇನೆ. ನಾನು ನನ್ನನ್ನು ಪತ್ರಕರ್ತ ಎಂದು ಹೇಳಿಕೊಳ್ಳುವುದಿಲ್ಲ. ಅಮೆರಿಕದ ಅಧ್ಯಕ್ಷರ ಸಂದರ್ಶನ ಮಾಡುವ ಜೀವಮಾನದ ಅವಕಾಶ ಸಿಕ್ಕಿತ್ತು ಎಂದು ಹೇಳಿದ್ದಾರೆ.

### ಪೂರ್ವ ನಿಗದಿತ ಪ್ರಶ್ನೆಯಲ್ಲೂ ಎಡವಟ್ಟು

ರೇಡಿಯೋ ಸಂದರ್ಶನದ ಪ್ರಶ್ನೆಗಳು ಪೂರ್ವ ನಿಗದಿತವಾಗಿದ್ದರೂ, ಅವುಗಳಿಗೆ ಉತ್ತರಿಸುವಾಗ ಅಧ್ಯಕ್ಷ ಜೋ ಬಿಡೆನ್ ಎಡವಟ್ಟು ಮಾಡಿಕೊಂಡಿದ್ದಾರೆ.

ಫಿಲಿಡೆಲ್ಫಿಯಾದ ವುರ್ಡ್ ರೇಡಿಯೋಗೆ ಸಂದರ್ಶನ ನೀಡುವಾಗ ಬಿಡೆನ್ ನಾನು ಉಪಾಧ್ಯಕ್ಷ ಸ್ಥಾನದಲ್ಲಿ ಕಾರ್ಯನಿರ್ವಹಿಸಿದ 'ಮೊದಲ ಕಪ್ಪು ಮಹಿಳೆ' ಎಂದಿದ್ದಾರೆ. ರಿಪಬ್ಲಿಕನ್ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಜೊತೆ ಚರ್ಚೆಯಲ್ಲಿ ಬಿಡೆನ್‌ಗೆ ಆದ ಹಿನ್ನಡೆ ಕೇವಲ ಒಂದು ದಿನದ ಆಕಸ್ಮಿಕವಷ್ಟೇ ಎಂದು ಬಿಂಬಿಸಲು ಅವರ ತಂಡ ಪ್ರಯತ್ನ ನಡೆಸಿದೆ. ಇದಕ್ಕಾಗಿ ಸರಣಿ ರೇಡಿಯೋ ಸಂದರ್ಶನಗಳ ವ್ಯವಸ್ಥೆ ಮಾಡಲಾಗುತ್ತಿದೆ.

# ಹರಿಹರದಲ್ಲಿ ನಾಳೆಯಿಂದ ರಂಭಾಪುರಿ ಜಗದ್ಗುರುಗಳ ಇಷ್ಟಲಿಂಗ ಮಹಾಪೂಜೆ



ಹರಿಹರ, ಜು.7- ನಗರದ ಶ್ರೀ ಜಗದ್ಗುರು ರೇಣುಕಾಚಾರ್ಯ ಮಂದಿರದ ಸಭಾಂಗಣದಲ್ಲಿ ನಾಡಿದ್ದು ದಿನಾಂಕ 9 ರಿಂದ 11 ರವರಿಗೆ ಬಾಳೆಹೊನ್ನೂರಿನ ಶ್ರೀ ಮದ್‌ರಂಭಾಪುರಿ ಜಗದ್ಗುರು ವೀರಸೋಮೇಶ್ವರ ಮಹಾ ಸ್ವಾಮಿಗಳ ಆಷಾಢ ಮಾಸದ ಇಷ್ಟಲಿಂಗ ಮಹಾಪೂಜೆ ಹಾಗೂ ಧರ್ಮಜಾಗೃತಿ ಸಮಾರಂಭ ನಡೆಯಲಿದೆ ಎಂದು ಶ್ರೀ ಜಗದ್ಗುರು ರೇಣುಕಾಚಾರ್ಯ ಮಂದಿರದ ಸಮಿತಿಯ ಪದಾಧಿಕಾರಿಗಳು ತಿಳಿಸಿದ್ದಾರೆ. ದಿನಾಂಕ 9 ರ ಮಂಗಳವಾರ ಶ್ರೀ ಜಗದ್ಗುರು ರೇಣುಕಾಚಾರ್ಯ ಮೂರ್ತಿಗೆ ಹಾಗೂ ಬಸವೇಶ್ವರ ಮೂರ್ತಿಗೆ ಮಹಾರುದ್ರಾಭಿಷೇಕ, ಅಷ್ಟೋತ್ತರ ಸಹಸ್ರ ಬಿಲ್ವಾರ್ಚನೆ, ಅಲಂಕಾರಯುಕ್ತ ಪೂಜೆ, ಮಹಾಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ ನಡೆಯಲಿದೆ. ಸಂಜೆ 6 ಗಂಟೆಗೆ ಧರ್ಮ ಜಾಗೃತಿ ಸಮಾರಂಭದ ದಿವ್ಯ ಸಾನ್ನಿಧ್ಯವನ್ನು ರಂಭಾಪುರಿ ಪೀಠದ ಜಗದ್ಗುರು ಶ್ರೀ ಡಾ. ವೀರಸೋಮೇಶ್ವರ ಸ್ವಾಮೀಜಿ, ನೇತೃತ್ವವನ್ನು ಮಳಲಿ ಸಂಸ್ಥಾನಮಠದ ಶ್ರೀ ಡಾ. ಗುರುನಾಗಭೂಷಣ ಶಿವಾಚಾರ್ಯ ಸ್ವಾಮೀಜಿ ಭಾಗವಹಿಸುವರು.

# ಕಲಾವಿದರ ಮಾಸಾಶನಕ್ಕಾಗಿ ಅರ್ಜಿ

ದಾವಣಗೆರೆ, ಜು. 7 - ಆರ್ಥಿಕವಾಗಿ ಸಂಕಷ್ಟದಲ್ಲಿರುವ ಕಲಾವಿದರನ್ನು ಗುರುತಿಸಿ, ಮಾಸಾಶನ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ನಾಡು ನುಡಿಯ ಸೇವೆ, ಕಲೆ, ಸಂಸ್ಕೃತಿ ಮತ್ತು ಸಾಹಿತ್ಯ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿ ಆರ್ಥಿಕವಾಗಿ ಸಂಕಷ್ಟದಲ್ಲಿರುವ ಕಲಾವಿದರಿಗೆ ಇಲಾಖೆಯಿಂದ ಮಾಸಾಶನ ಸೌಲಭ್ಯವನ್ನು ನೀಡಲಾಗುವುದು. ಕಲಾವಿದರು ಹೆಚ್ಚಿನ ಮಾಹಿತಿಗಾಗಿ ಇಲಾಖೆಯನ್ನು ಸಂಪರ್ಕಿಸಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರವಿಚಂದ್ರ ತಿಳಿಸಿದ್ದಾರೆ.

# ನಗರದಿಂದ ಬೆಂಗಳೂರಿನ ವಿಮಾನ ನಿಲ್ದಾಣಕ್ಕೆ ನೇರ ಬಸ್ ವ್ಯವಸ್ಥೆ ಬೇಕು



**ಜಿಲ್ಲಾ ಉಸ್ತುವಾರಿ ಸಚಿವ ಎಸ್ಸೆಸ್ಸೆಂಗೆ ಡಾ. ಸ್ನೇಹ ರೂಪಾ ಪೂಜಾರ್ ಮನವಿ**

ದಾವಣಗೆರೆ, ಜೂ.7- ಬೆಂಗಳೂರಿನ ಕೆಂಪೇಗೌಡ ಅಂತರರಾಷ್ಟ್ರೀಯ ಮತ್ತು ದೇಶೀಯ ವಿಮಾನ ನಿಲ್ದಾಣಕ್ಕೆ ದಾವಣಗೆರೆಯಿಂದ ಹೋಗಿ ಬರಲು ನೇರ ಬಸ್ ವ್ಯವಸ್ಥೆ ಕಲ್ಪಿಸುವಂತೆ ಸಾರ್ವಜನಿಕರ ಪರವಾಗಿ ಮಕ್ಕಳ ತಜ್ಞ ವೈದ್ಯೆ ಡಾ. ಸ್ನೇಹ ರೂಪಾ ಪೂಜಾರ್ ಮನವಿ ಮಾಡಿದ್ದಾರೆ.

ತೋಟಗಾರಿಕೆ, ಗಣಿ ಮತ್ತು ಭೂ ವಿಜ್ಞಾನ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎಸ್. ಎಸ್. ಮಲ್ಲಿಕಾರ್ಜುನ್ ಅವರಿಗೆ ಸುದೀರ್ಘ ಮನವಿ ಪತ್ರ ಸಲ್ಲಿಸಿರುವ ಅವರು, ದಾವಣಗೆರೆ ವಿದ್ಯೆ, ಕ್ರೀಡೆ ಮತ್ತು ವಾಣಿಜ್ಯ ಕ್ಷೇತ್ರಗಳಲ್ಲಿ ಪ್ರಗತಿ ಸಾಧಿಸುತ್ತಿದೆ. ಈ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಯು ಸಂಪರ್ಕ ವ್ಯವಸ್ಥೆಯ ಮೇಲೆ ಅವಲಂಬಿತವಾಗಿದೆ ಎಂದು 10 ಅಂಶಗಳನ್ನು ಅವರು ಸಚಿವರ ಗಮನಕ್ಕೆ ತಂದಿರುತ್ತಾರೆ.

* ಬಹಳಷ್ಟು ಪ್ರಯಾಣಿಕರು ಬೆಂಗಳೂರಿಗೆ ಹೋಗಿ ಅಲ್ಲಿಂದ ವಿಮಾನ ನಿಲ್ದಾಣಕ್ಕೆ ತಲುಪಲು ಕನಿಷ್ಠ 7-8 ಗಂಟೆಗಳ ಸಮಯ ಬೇಕು. ಅಲ್ಲದೆ ವಿಮಾನದ ನಿರ್ಧರಿತ ಸಮಯ ಮಧ್ಯರಾತ್ರಿ ಅಥವಾ ನಸುಕಿನ ವೇಳೆಯಲ್ಲಿ ಇದ್ದಾಗ ಒಬ್ಬಂಟಿಗಳು, ಮಹಿಳೆಯರು ಮತ್ತು ಚಿಕ್ಕ ಮಕ್ಕಳ ಕುಟುಂಬಸ್ಥರಿಗೆ ಅನಾನುಕೂಲವಾಗುವುದು.

* ಅಂತರರಾಷ್ಟ್ರೀಯ ಪ್ರಯಾಣಿಕರಿಗೆ ವಿಮಾನದ ನಿರ್ಧರಿತ ಸಮಯಕ್ಕೆ ಎರಡು, ಮೂರು ಗಂಟೆ ಮೊದಲೇ ತಲುಪುವ ಅನಿವಾರ್ಯತೆ ಇರುವುದರಿಂದ ಸ್ವಂತ ವಾಹನಗಳಲ್ಲಿ ರಾತ್ರಿ ಪ್ರಯಾಣ ಸುರಕ್ಷಿತವಲ್ಲದ ಕಾರಣ ಇಲ್ಲಿಂದ ಒಂದು ದಿನ ಮೊದಲೇ ಹೋಗಿ ಹೋಟೆಲ್‌ಗಳಲ್ಲಿ ತಂಗಿ ಹೋಗುವಷ್ಟರಲ್ಲಿ ಸಾಕಷ್ಟು ಸಮಯ ಮತ್ತು ಹಣ ವ್ಯತ್ಯಯವಾಗುವುದು.

* ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಸಮಾವೇಶಗಳನ್ನು ನಮ್ಮ ನಗರದಲ್ಲಿ ನಡೆಸಬಹುದಾದ ವ್ಯವಸ್ಥೆ, ನಿಪುಣತೆ ಹಾಗೂ ಪ್ರತಿಭೆಗಳು ಇದ್ದರೂ ಸಹ ಸರಿಯಾದ ಸಂಪರ್ಕ ವ್ಯವಸ್ಥೆಯ ಕೊರತೆಯಿಂದ ನಗರ ಈ ತರಹದ ಸಮಾವೇಶಗಳಿಂದ ವಂಚಿತವಾಗುತ್ತಿದೆ.

* ಹುಬ್ಬಳ್ಳಿ ಮತ್ತು ಶಿವಮೊಗ್ಗದಲ್ಲಿರುವ ದೇಶಿಯ ವಿಮಾನ ನಿಲ್ದಾಣಗಳಲ್ಲಿ ಎಲ್ಲ ಸ್ಥಳಗಳಿಗೂ ನೇರ ವಿಮಾನ ಸಂಪರ್ಕ ಇಲ್ಲ ಮತ್ತು ಕಡಿಮೆ ವಿಮಾನಗಳಿವೆ. ಅಲ್ಲದೆ ಹಲವಾರು ಬಾರಿ ಕೊನೆಯ ಕ್ಷಣದಲ್ಲಿ ವಿಮಾನಗಳು ರದ್ದಾಗುವುದು ಪ್ರಯಾಣಿಕರಿಗೆ ಸಾಕಷ್ಟು ಅನಾನುಕೂಲತೆಯನ್ನು ಉಂಟುಮಾಡುತ್ತದೆ.

* ಒಂದು ನಗರದ ಅಭಿವೃದ್ಧಿ ಅದಕ್ಕಿರುವ ಸಂಪರ್ಕ ವ್ಯವಸ್ಥೆಯ ಮೇಲೆ ಅವಲಂಬಿತವಾಗಿರುತ್ತದೆ. ಪ್ರವಾಸೋದ್ಯಮವನ್ನು ಸಹ ಅಭಿವೃದ್ಧಿಪಡಿಸಲು ಅನುಕೂಲವಾಗುವ ಹಾಗೆ ಜಾಹೀರಾತುಗಳ ಮೂಲಕ ಈ ವ್ಯವಸ್ಥೆ ಕಲ್ಪಿಸಿದರೆ ಜಿಲ್ಲೆಯ ಪ್ರವಾಸಿ ತಾಣಗಳು ದೇಶದ ನಕ್ಷೆಯಲ್ಲಿ ಕಾಣಿಸಿಕೊಳ್ಳಲು ಅನುಕೂಲವಾಗುತ್ತದೆ.

* ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ರಾಜಹಂಸ, ಐರಾವತ ಮತ್ತು ವಿದ್ಯುತ್ ಚಾಲಿತ ಬಸ್ ಗಳು ಸುರಕ್ಷಿತವೂ ಅಲ್ಲದೆ ಸೇವೆಯಲ್ಲಿ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಗಿವೆ. ಕರಾರಸಾಸಂ, ರಾಜ್ಯ ಸರ್ಕಾರದ ಆಡಳಿತ ಸುಪರ್ದಿಗೆ ಬರುವುದರಿಂದ ವಿಮಾನ ನಿಲ್ದಾಣದ ಪ್ರವೇಶಕ್ಕೆ ಅನುಮತಿ ಪಡೆಯಬಹುದು

* ದಾವಣಗೆರೆ ಮಾತ್ರವಲ್ಲದೆ ಹಾವೇರಿ, ಹರಿಹರ ಹೊಸಪೇಟೆ ಕಡೆಯಿಂದ ವಿಮಾನ ನಿಲ್ದಾಣಕ್ಕೆ ಹೊರಡುವ ಬಸ್‌ಗಳು ದಾವಣಗೆರೆ - ಚಿತ್ರದುರ್ಗದ ಮೂಲಕ ಹೋದರೂ ಸಹ ಎಲ್ಲ ಕ್ಷೇತ್ರಗಳ ನಾಗರಿಕರಿಗೂ ಅನುಕೂಲವಾಗುತ್ತದೆ.

* ದಾಬಾಸ್ ಪೇಟೆ-ದೊಡ್ಡಬಳ್ಳಾಪುರ ದ್ವಿಪಥ ರಸ್ತೆ ಆಗಿರುವುದರಿಂದ ಬೆಂಗಳೂರು ಶಹರದ ಕ್ಲಿಷ್ಟಕರ ಟ್ರಾಫಿಕ್ ಅನ್ನು ತಪ್ಪಿಸಿ ನೇರವಾಗಿ ವಿಮಾನ ನಿಲ್ದಾಣ ತಲುಪುವ ಬಸ್ ವ್ಯವಸ್ಥೆ ಕಲ್ಪಿಸಿದರೆ ಬಹಳ ಅನುಕೂಲವಾಗುವುದು.

* ದಾವಣಗೆರೆಯಲ್ಲಿ ವಿಮಾನ ನಿಲ್ದಾಣ ನಿರ್ಮಾಣವಾಗುವವರೆಗೂ ಮತ್ತು ನಂತರವೂ ಈ ಸಂಪರ್ಕ ವ್ಯವಸ್ಥೆಯ ಅವಶ್ಯಕತೆ ಇದೆ.

* ಪ್ರಾಯೋಗಿಕವಾಗಿ ಮೊದಲು ಎರಡು ಮೂರು ಬಸ್‌ಗಳ ವ್ಯವಸ್ಥೆ ಮಾಡಿ ಅದರ ಸಫಲತೆಯ ನಂತರ ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಸಾರಿಗೆ ವ್ಯವಸ್ಥೆಯನ್ನು ವಿಸ್ತರಿಸಬಹುದು.

ವಿಭಿನ್ನ ವೃತ್ತಿ, ವ್ಯಾಪಾರಗಳಲ್ಲಿರುವ ನಾಗರಿಕರು ಈ ವ್ಯವಸ್ಥೆಯ ಅವಶ್ಯಕತೆಯನ್ನು ಮನಗಂಡಿರುವುದರಿಂದ ಹಲವಾರು ಪ್ರತಿನಿಧಿಗಳಿಂದ ಈ ಮನವಿಯ ಅಂಗೀಕಾರ ಪಡೆಯುವ ಪ್ರಯತ್ನ ಮಾಡಿದ್ದೇವೆ.

ಬರಿಯ ಮಾತು, ಆಶ್ವಾಸನೆಗಳಲ್ಲಿ ಜನರನ್ನು ನಂಬಿಸದೆ, ಕೆಲಸ ಮಾಡಿ ತೋರಿಸುವ ತಮ್ಮ ಕಾರ್ಯನಿಷ್ಠೆಯನ್ನು ಕ್ರೀಡಾ ಸಚಿವರಾಗಿ ಮತ್ತು ಕಾಂಗ್ರೆಸ್ ಮುಖಂಡರಾಗಿ ಜನ ಮನಗಂಡಿದ್ದಾರೆ. ಈ ಮನವಿಯನ್ನು ತಮ್ಮ ಆದ್ಯತೆಯ ಪಟ್ಟಿಯಲ್ಲಿ ಸೇರಿಸಿ ನೇರ ಬಸ್ ವ್ಯವಸ್ಥೆಯನ್ನು ಕಲ್ಪಿಸಿದರೆ ಬಹಳ ಅನುಕೂಲವಾಗುವುದು ಎಂದು ಡಾ. ಸ್ನೇಹರೂಪಾ ವಿವರಿಸಿದ್ದಾರೆ.

# ಸ್ವಾಮಿ ವಿವೇಕಾನಂದ ಶಾಲೆ ವಿದ್ಯಾರ್ಥಿ ಸಂಘಕ್ಕೆ ಆಯ್ಕೆ

ದಾವಣಗೆರೆ, ಜು.7- ಇಲ್ಲಿನ ಸ್ವಾಮಿ ವಿವೇಕಾನಂದ ಶಾಲೆಯಲ್ಲಿ ಈಚೆಗೆ ವಿದ್ಯಾರ್ಥಿ ಸಂಘದ ಚುನಾವಣೆ ಮಾಡುವ ಮೂಲಕ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ.

ಉಪಾಧ್ಯಕ್ಷರಾಗಿ ಎಸ್.ಎಂ. ಗಿರೀಶ್, ವಿದ್ಯಾರ್ಥಿ ಕಾರ್ಯದರ್ಶಿಯಾಗಿ ಪಿ. ಸತ್ಯಭಾಮ, ಸಾಂಸ್ಕೃತಿಕ ಕಾರ್ಯದರ್ಶಿಯಾಗಿ ಎಸ್.ಎಂ. ವಿಕಾಸ್, ಕ್ರೀಡಾ ಕಾರ್ಯದರ್ಶಿಯಾಗಿ ಎಸ್.ಬಿ. ಶಿವಕುಮಾರ್, ಪ್ರವಾಸ ಕಾರ್ಯದರ್ಶಿಯಾಗಿ ಕೆ.ಆರ್. ದರ್ಶನ್ ಹಾಗೂ ಕೆ.ವಿ. ಚೈತ್ರಾ ಆಯ್ಕೆಯಾಗಿದ್ದು, ಅಧ್ಯಕ್ಷರಾಗಿ ಶಾಲೆಯ ಮುಖ್ಯ ಶಿಕ್ಷಕ ಬಿ. ಪರಮೇಶ್ವರಪ್ಪ ಮತ್ತು ಶಿಕ್ಷಕ ಕಾರ್ಯದರ್ಶಿಯಾಗಿ ಪಿ.ಎಸ್. ತಾರಾ ಸಂಘದಲ್ಲಿದ್ದಾರೆ.

# 'ಲೂಸ್' ಬಿತ್ತನೆ ಬೀಜ : ಕೃಷಿ ಇಲಾಖೆ ಎಚ್ಚರಿಕೆ

ದಾವಣಗೆರೆ,ಜು.7- ಜಿಲ್ಲೆಯಲ್ಲಿ ಮುಂಗಾರು ಹಂಗಾಮು ಚುರುಕಾಗಿದ್ದು, ಭೂಮಿ ಸಿದ್ಧತೆ, ಸಮಗ್ರ ಬೆಳೆ ನಿರ್ವಹಣೆ ಜೊತೆಗೆ ಉತ್ತಮ ಇಳುವರಿ ಪಡೆಯುವಲ್ಲಿ ಗುಣಮಟ್ಟದ ಬಿತ್ತನೆ ಬೀಜಗಳು ಬಹು ಮುಖ್ಯವಾಗಿದ್ದು, ಅನಧಿಕೃತ 'ಲೂಸ್' ಬಿತ್ತನೆ ಬೀಜಗಳ ಬಗ್ಗೆ ರೈತರು ಎಚ್ಚರಿಕೆ ವಹಿಸುವಂತೆ ಕೃಷಿ ಇಲಾಖೆ ತಿಳಿಸಿದೆ.

ಜಿಲ್ಲೆಯಲ್ಲಿ ಕೃಷಿ ಇಲಾಖೆಯಿಂದ ರೈತ ಸಂಪರ್ಕ ಕೇಂದ್ರಗಳಲ್ಲಿ ಹಾಗೂ ನಿಗದಿಪಡಿಸಿದ ಸಹಕಾರಿ ಸಂಘಗಳ ಮೂಲಕ ರಿಯಾಯತಿ ದರದಲ್ಲಿ ವಿವಿಧ ಬಿತ್ತನೆ ಬೀಜಗಳನ್ನು ವಿತರಣೆ ಮಾಡಲಾಗುತ್ತಿದೆ. ಕೃಷಿ ಪರಿಕರ ಮಾರಾಟ ಮಳಿಗೆಗಳಲ್ಲಿ ಗುಣಮಟ್ಟದ ಬಿತ್ತನೆ ಬೀಜಗಳು ಲಭ್ಯವಿದ್ದು, ರೈತರಿಗೆಯಾವುದೇ ಬಿತ್ತನೆ ಬೀಜಗಳ ಕೊರತೆಯಾಗುವುದಿಲ್ಲ. ಆದರೆ ಇತ್ತೀಚಿನ ದಿನಗಳಲ್ಲಿ ಕಳಪೆ, ಬಿಡಿ ಬಿತ್ತನೆ ಬೀಜದ ಹಾವಳಿ ಹೆಚ್ಚಾಗುತ್ತಿದ್ದು, ಅಲ್ಲಲ್ಲಿ ರೈತರು ಅನಧಿಕೃತ ಲೂಸ್ ಬಿತ್ತನೆ ಬೀಜಗಳನ್ನು ಖರೀದಿಸುತ್ತಿರುವುದಾಗಿ ತಿಳಿದು ಬಂದಿದೆ.

ರೈತರು ಬಿಡಿ ಬೀಜಗಳನ್ನು ಖರೀದಿಸಿ ಬಿತ್ತನೆ ಮಾಡಿ ತೊಂದರೆ ಹಾಗೂ ಬೆಳೆ ನಷ್ಟ ಅನುಭವಿಸಿದಲ್ಲಿ ಯಾವುದೇ ದಾಖಲೆಗಳು ಇಲ್ಲದಿರುವುದರಿಂದ ಪರಿಹಾರ ಪಡೆಯಲು ಅರ್ಹರಾಗುವುದಿಲ್ಲ. ಆದ್ದರಿಂದ ರೈತರು ಲೂಸ್ ಬಿತ್ತನೆ ಬೀಜ ಮಾರಾಟ ಜಾಲಕ್ಕೆ ಸಿಲುಕದೇ ಉತ್ತಮ ಗುಣಮಟ್ಟದ ದೃಢೀಕೃತ ಬಿತ್ತನೆ ಬೀಜಗಳನ್ನು ರೈತ ಸಂಪರ್ಕ ಕೇಂದ್ರಗಳಿಂದ, ಅಧಿಕೃತ ಕೃಷಿ ಪರಿಕರ ಮಾರಾಟಗಾರರಿಂದ ಖರೀದಿಸಿ ಬಿತ್ತನೆ ಮಾಡಲು ರೈತರಲ್ಲಿ ಕೋರಲಾಗಿದೆ.

ಜಿಲ್ಲೆಯಲ್ಲಿ ಯಾವುದೇ ಅನಧಿಕೃತ ಲೂಸ್ ಬಿತ್ತನೆ ಬೀಜ ದಾಸ್ತಾನು ಹಾಗೂ ಮಾರಾಟ ಮಾಡುವವರು ಕಂಡು ಬಂದಲ್ಲಿ ತಕ್ಷಣ ಈ ಕುರಿತು ಸಹಾಯಕ ಕೃಷಿ ನಿರ್ದೇಶಕರು (ಜಾರಿ ದಳ) ಮೊ.ಸಂ. 8277931106 ಮತ್ತು 8277931207 ಇವರಿಗೆ ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರು, ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿಗಳನ್ನು ಸಂಪರ್ಕಿಸಲು ಕೋರಿದೆ.

# ಜೀವನ ಶೈಲಿಯೇ ಬೆನ್ನು ನೋವಿಗೆ ಮುಖ್ಯ ಕಾರಣ



ದಾವಣಗೆರೆ, ಜು.7- ನಿಯಮಿತ ವ್ಯಾಯಾಮ, ಸಮತೋಲಿತ ಆಹಾರ ಮತ್ತು ಜೀವನ ಶೈಲಿ ಬದಲಾವಣೆಯಿಂದ ಬೆನ್ನು ನೋವು ಬರದಂತೆ ನೋಡಿಕೊಳ್ಳಬಹುದು ಎಂದು ಜೆಜೆಎಂ ವೈದ್ಯಕೀಯ ಕಾಲೇಜಿನ ಕೀಲು, ಮೂಳೆ ವಿಭಾಗದ ಪ್ರಾಧ್ಯಾಪಕ ಡಾ.ಜೆ.ರಘುಕುಮಾರ್ ತಿಳಿಸಿದರು.

ನಗರದ ಬಾಪೂಜಿ ಮಕ್ಕಳ ಆಸ್ಪತ್ರೆ ಸಭಾಂಗಣದಲ್ಲಿ ವಿವೇಕ್ ಪೋಷಕರ ಆರೋಗ್ಯ ಕಾರ್ಯಾಗಾರದಲ್ಲಿ 'ವಯಸ್ಕರರನ್ನು ಕಾಡುವ ಬೆನ್ನು ನೋವು- ಕಾರಣ, ಚಿಕಿತ್ಸೆ ಮತ್ತು ಪರಿಹಾರ' ಎಂಬ ವಿಷಯವಾಗಿ ಅವರು ಮಾತನಾಡಿದರು.

ಬೆನ್ನು ನೋವು ಒಂದು ಅತಿ ಸಾಮಾನ್ಯವಾದ ಆರೋಗ್ಯ ಸ್ಥಿತಿ. ಅಬಾಲವೃದ್ಧರಾಗಿ ಎಲ್ಲರನ್ನೂ ಕಾಡುತ್ತದೆ. ಪ್ರತಿ ಒಬ್ಬ ಮನುಷ್ಯನು ತನ್ನ ಜೀವನದಲ್ಲಿ ಒಮ್ಮೆಯಾದರು ಬೆನ್ನು ನೋವನ್ನು ಅನುಭವಿಸಿರುತ್ತಾನೆ. ಈ ನೋವಿಗೆ ಚಿಕಿತ್ಸೆಗಿಂತ ರೋಗವನ್ನು ತಡೆಗಟ್ಟುವುದೇ ಒಳ್ಳೆಯದು.

ಬೆನ್ನಿನ ಸ್ಥಂಬವು ಬೆನ್ನೆಲುಬು ಮತ್ತು ಮಾಂಸ ಖಂಡಗಳಿಂದ ರಚನೆಯಾಗಿದೆ. ಬೆನ್ನು ತಲೆಯ ಭಾರವನ್ನು ಹೊತ್ತು ಹೊಟ್ಟೆಯ ತೂಕವನ್ನು ಕಾಲುಗಳಿಗೆ ರವಾನಿಸುತ್ತದೆ. ಬೆನ್ನು ನಮ್ಮ ಭಾವಭಂಗಿಯನ್ನು ಕಾಪಾಡಿ ಬಾಗಿಸುವಿಕೆಯನ್ನು ಒದಗಿಸುತ್ತದೆ.

ಬೆನ್ನು ನೋವಿಗೆ ನೂರಾರು ಕಾರಣಗಳಿವೆ. ಇವುಗಳಲ್ಲಿ ಮಾಂಸಖಂಡಗಳ ಮೇಲಿನ ಒತ್ತಡ ಅಥವಾ ಸೆಳೆತ ಸಾಮಾನ್ಯ ಕಾರಣವಾಗಿದೆ. ಇವುಗಳಲ್ಲದೆ ಬೆನ್ನಿನ ರಚನಾತ್ಮಕ ಅಥವಾ ಜನ್ಮಜಾತ ತೊಂದರೆಗಳು, ಅನುಚಿತ ಭಂಗಿ, ಮೂಳೆ ಸವೆತ, ಸಂಧಿವಾತ ಔದ್ಯೋಗಿಕ ಮತ್ತು ಸೋಂಕು ಕಾರಣಗಳು ಇರಬಹುದು. ಜಡ ಜೀವನ ಶೈಲಿ, ಮದ್ಯಪಾನ ಮತ್ತು ಧೂಮಪಾನ ಮತ್ತು ಹಿರಿಯ ವಯಸ್ಸು, ಶಾರೀರಿಕ ಬೊಜ್ಜು ಸಹ ಮುಖ್ಯವಾದ ಕಾರಣಗಳಾ ಗಿರುತ್ತವೆ.

**ಬಾಪೂಜಿ ಮಕ್ಕಳ ಆಸ್ಪತ್ರೆ ಆರೋಗ್ಯ ಕಾರ್ಯಾಗಾರದಲ್ಲಿ ಡಾ. ರಘುಕುಮಾರ್**

ರೋಗ ಲಕ್ಷಣದ ಇತಿಹಾಸ, ದೈಹಿಕ ಪರೀಕ್ಷೆ, ಎಕ್ಸ್-ರೇ ಮತ್ತು ಎಂಆರ್‌ಐ ಪರೀಕ್ಷೆಗಳಿಂದ ಬೆನ್ನು ನೋವಿನ ಕಾರಣಗಳನ್ನು ಪತ್ತೆಹಚ್ಚಿ ಸೂಕ್ತ ಚಿಕಿತ್ಸೆಯನ್ನು ಒದಗಿಸಬಹುದು. ಇಂದಿನ ಆಧುನಿಕ ವೈದ್ಯಕೀಯ ಯುಗದಲ್ಲಿ ಔಷಧಿಗಳು ಮತ್ತು ಶಸ್ತ್ರ ಚಿಕಿತ್ಸೆಗಳಿಂದ ಬೆನ್ನು ನೋವನ್ನು ನಿವಾರಿಸಬಹುದು. ಯಾವ ವಯಸ್ಸಿನವರಾದರೂ ಸರಿಯೇ ಬೆನ್ನು ನೋವನ್ನು ನಿರ್ಲಕ್ಷಿಸದೇ, ತಜ್ಞ ವೈದ್ಯರನ್ನು ಸಂಪರ್ಕಿಸಿ ಸಲಹೆ ಪಡೆಯುವುದು ಸೂಕ್ತ. ಆರಂಭಿಕ ಹಂತದಲ್ಲಿಯೇ ಚಿಕಿತ್ಸೆ ಪಡೆದರೆ ಸಂಕೀರ್ಣ ಶಸ್ತ್ರ ಚಿಕಿತ್ಸೆಯನ್ನು ತಡೆಯಬಹುದು ಎಂದು ಅವರು ಸಲಹೆ ನೀಡಿದರು.

ಬಾಪೂಜಿ ಮಕ್ಕಳ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ನಿರ್ದೇಶಕ ಡಾ. ಗುರುಪ್ರಸಾದ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ. ಕೌಜಲಗಿ, ಡಾ.ಎ.ಎಸ್.ಮೃತ್ಯುಂಜಯ, ವ್ಯವಸ್ಥಾಪಕ ಸಿದ್ದೇಶ್ವರ ಗುಬ್ಬಿ, ಸಂಯೋಜಕಿ ಐ.ಎಂ ಅಂಜಲಿ ಮತ್ತಿತರರು ಭಾಗವಹಿಸಿದ್ದರು.

## ನಗರದಲ್ಲಿ ಇಂದು ಸಿವಿಲ್ ಸನ್ಮಾನ

ವೃತ್ತಿಪರ ಸಿವಿಲ್ ಇಂಜಿನಿಯರ್ ಮಸೂದೆಯನ್ನು ಕರ್ನಾಟಕ ಸರ್ಕಾರ ಇತ್ತೀಚೆಗೆ ಜಾರಿ ಮಾಡಿದ ಹಿನ್ನೆಲೆಯಲ್ಲಿ ಅದಕ್ಕೆ ಶ್ರಮಿಸಿದ ಹಲವು ಪ್ರಮುಖ ಇಂಜಿನಿಯರ್ ಗಳಿಗೆ ಇಂದು ನಗರದಲ್ಲಿ ಸನ್ಮಾನ ಕಾರ್ಯ ನಡೆಯಲಿದೆ.

ಅಸೋಸಿಯೇಷನ್ ಆಫ್ ಕನ್ಸಲ್ಟಿಂಗ್ ಸಿವಿಲ್ ಇಂಜಿನಿಯರ್ಸ್ ಆಫ್ ಇಂಡಿಯಾ ಇದರ ದಾವಣಗೆರೆ ಘಟಕ, ವೃತ್ತಿ ನಿರತ ಸಿವಿಲ್ ಇಂಜಿನಿಯರ್‌ಗಳು ಮತ್ತು ಆರ್ಕಿಟೆಕ್ಟ್‌ಗಳ ಒಕ್ಕೂಟ, ಇನ್‌ಸ್ಟ್ರಕ್ಟ್, ಇಂಡಿಯನ್ ಕಾಂಕ್ರೀಟ್ ಇನ್‌ಸ್ಟಿಟ್ಯೂಟ್ ಹಾಗೂ ಜಿಲ್ಲೆಯ ಹಲವು ವೃತ್ತಿಪರ ಸಿವಿಲ್ ಇಂಜಿನಿಯರ್ ಗಳ ಒಕ್ಕೂಟಗಳು ಈ ಕಾರ್ಯಕ್ರಮವನ್ನು ಆಯೋಜಿಸಿವೆ.

ಈ ಮಸೂದೆಯ ಜಾರಿಗೆ ನಿರಂತರವಾಗಿ ಹೋರಾಟ ಮಾಡಿದ ಇಂಜಿನಿಯರ್‌ಗಳಾದ ಶ್ರೀಕಾಂತ್ ಚಾನಲ್, ಅಜಿತ್ ಕುಮಾರ್ ಮಗ್ದುಂ, ಮನಮೋಹನ್ ಕಲ್ಗಲ್, ರಂಗನಾಥ್ ಮುಂತಾದವರನ್ನು ಸನ್ಮಾನಿಸಲಾಗುವುದು. ಇದೇ ಸಂದರ್ಭದಲ್ಲಿ ಈ ಮಸೂದೆಯ ಕುರಿತು ತಜ್ಞರಿಂದ ಸಂವಾದ ಕಾರ್ಯಕ್ರಮ ನಡೆಯಲಿದೆ.

ಇಂದು ಬೆಳಿಗ್ಗೆ 10.30ರಿಂದ ಆರಂಭವಾಗುವ ಈ ಕಾರ್ಯಕ್ರಮವು ಕಾರ್ಯನಿರತ ಸಿವಿಲ್ ಇಂಜಿನಿಯರ್ಸ್ ಹಾಗೂ ಆರ್ಕಿಟೆಕ್ಟ್ (FPACE) ಭವನದಲ್ಲಿ ನಡೆಯಲಿದೆ ಎಂದು ಅಧ್ಯಕ್ಷ ಇಂಜಿನಿಯರ್ ವೆಂಕಟ್ ರೆಡ್ಡಿ ಮತ್ತು ಸಂಚಾಲಕರಾದ ಇಂಜಿನಿಯರ್ ಜಿ.ಬಿ. ಸುರೇಶ್ ಕುಮಾರ್ ತಿಳಿಸಿದ್ದಾರೆ.

## ನಗರದಲ್ಲಿ ಇಂದು ಈಶ್ವರಮ್ಮ ಶಾಲಾ ಮಂತ್ರಿ ಮಂಡಲ ಪ್ರತಿಜ್ಞಾ ಸ್ವೀಕಾರ

ಈಶ್ವರಮ್ಮ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆಯಲ್ಲಿ ಇಂದು ಮಧ್ಯಾಹ್ನ 2.30ಕ್ಕೆ ಶಾಲಾ ಮಂತ್ರಿ ಮಂಡಲ ಪ್ರತಿಜ್ಞಾ ಸ್ವೀಕಾರ ಮತ್ತು ವಿದ್ಯಾರ್ಥಿ ಸಂಘಗಳ ಉದ್ಘಾಟನಾ ಸಮಾರಂಭ ನಡೆಯಲಿದೆ ಎಂದು ಪ್ರಾಂಶುಪಾಲ ಕೆ.ಎಸ್. ಪ್ರಭುಕುಮಾರ್ ತಿಳಿಸಿದ್ದಾರೆ.

ಈಶ್ವರಮ್ಮ ಶಾಲಾಡಳಿತ ಮಂಡಳಿ ಅಧ್ಯಕ್ಷೆ ಕೆ.ಆರ್. ಸುಜಾತ ಕೃಷ್ಣ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಮಹಾನಗರಪಾಲಿಕೆ ಮಾಜಿ ವಿಪಕ್ಷ ನಾಯಕ ಗಡಿಗುಡಾಳ್ ಮಂಜುನಾಥಗೌಡ, ಭರತಾಂಜಲಿ ಅಕಾಡೆಮಿ ಫಾರ್ ಫರ್‌ಫಾರ್ಮಿಂಗ್ ಆರ್ಟ್ಸ್ ನೃತ್ಯ ನಿರ್ದೇಶಕ ಡಾ.ಬಿ. ಮಂಗಳಾ ಶೇಖರ್, ಈಶ್ವರಮ್ಮ ಟ್ರಸ್ಟ್ ಅಧ್ಯಕ್ಷ ಎ.ಎ.ಆರ್. ಉಷಾ ರಂಗನಾಥ್, ಕಾರ್ಯದರ್ಶಿ ಜಿ.ಆರ್. ವಿಜಯಾನಂದ್, ಖಜಾಂಚಿ ಎ.ಪಿ. ಸುಜಾತ, ಸದಸ್ಯ ಕೆ.ವಿ. ಸುಜಾತ, ಉಪಪ್ರಾಂಶುಪಾಲ ಜಿ.ಎಸ್.ಶಶಿರೇಖಾ ಭಾಗವಹಿಸಲಿದ್ದಾರೆ.

## ಮಾದಿಗ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಚಿತ್ರದುರ್ಗ, ಜು. 7 - ಎಚ್. ಆಂಜನೇಯ ಚಾರಿಟಬಲ್ ಟ್ರಸ್ಟ್ ವತಿಯಿಂದ ಮಾದಿಗ ಸಮುದಾಯದ ಎಸ್.ಎಸ್.ಎಲ್.ಸಿ ಮತ್ತು ಪಿಯುಸಿ ಪ್ರತಿಭಾವಂತರಿಗೆ ಪ್ರತಿಭಾ ಪುರಸ್ಕಾರ ನೀಡಲು ಅರ್ಜಿ ಆಹ್ವಾನಿಸಲಾಗಿದ್ದು. ಇದೇ ದಿನಾಂಕ 10 ಕೊನೆ ದಿನಾಂಕ ಆಗಿದೆ.

ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿಯಲ್ಲಿ ಶೇ. 85 ಕ್ಕಿಂತ ಹೆಚ್ಚು ಅಂಕ ಗಳಿಸಿದ ಮಾದಿಗ ಸಮುದಾಯದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಚಿತ್ರದುರ್ಗ ಜಿಲ್ಲೆಯ ನಿವಾಸಿ ಆಗಿರಬೇಕು, ಚಿತ್ರದುರ್ಗ ಜಿಲ್ಲೆಯ ಶಾಲಾ-ಕಾಲೇಜ್‌ಗಳಲ್ಲಿ ಓದಿರಬೇಕು. ಪ್ರತಿಭಾ ಪುರಸ್ಕಾರಕ್ಕೆ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಆಕರ್ಷಕ ಫಲಕ, ಶಾಲು, ಹಾರ, ಸನ್ಮಾನ ಪತ್ರದ ಜೊತೆಗೆ ಪ್ರೋತ್ಸಾಹ ಧನ ನೀಡಿ ಗೌರವಿಸಲಾಗುವುದು.

ಅರ್ಜಿ ಸಲ್ಲಿಸಲು ಬಯಸುವವರು ಆನ್‌ಲೈನ್ ಮೂಲಕ hanjaney-acharitabletrust.in ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ 97430 48006 ಅಥವಾ 80730 50019 ಗೆ ಸಂಪರ್ಕಿಸಬಹುದು ಎಂದು ಕಾರ್ಯಕ್ರಮ ಸಂಘಟಕರಾದ ಸಿ.ಎನ್. ಕುಮಾರ್, ಎ. ನಂದೀಶ್ ತಿಳಿಸಿದ್ದಾರೆ.

# ಕಡುಬಡವರಿಗೆ ನೆರವು ನೀಡುವುದು ಇಂದಿನ ತುರ್ತು ಅಗತ್ಯ

### ಬ್ಯಾಂಕ್ ನಿವೃತ್ತರ ಒಕ್ಕೂಟ, ಸ್ಟೇಟ್ ಬ್ಯಾಂಕ್ ಆಫ್ ಮೈಸೂರು ಪೆನ್ಷನರ್ ಕಮ್ಯೂನ್ ಕಾರ್ಯಕ್ರಮದಲ್ಲಿ ಜಿ. ರಂಗಸ್ವಾಮಿ ಕಳಕಳಿ



ದಾವಣಗೆರೆ, ಜು. 7- ಬಡ ವಿದ್ಯಾರ್ಥಿಗಳನ್ನು ಗುರುತಿಸಿ ಅವರಿಗೆ ಆರ್ಥಿಕ ನೆರವು ನೀಡುತ್ತಿರುವ ಕಾರ್ಯ ಶ್ಲಾಘನೀಯ. ಹಸಿದವರಿಗೆ ಮತ್ತು ಕಡುಬಡವರಿಗೆ ನೆರವು ನೀಡುವುದು ಇಂದಿನ ತುರ್ತು ಅಗತ್ಯವಾಗಿದೆ ಎಂದು ದಾವಣಗೆರೆ - ಚಿತ್ರದುರ್ಗ ಜಿಲ್ಲಾ ಬ್ಯಾಂಕ್ ನಿವೃತ್ತರ ಒಕ್ಕೂಟದ ಗೌರವಾಧ್ಯಕ್ಷ ಜಿ. ರಂಗಸ್ವಾಮಿ ಹೇಳಿದರು.

ನಗರದ ತರಳಬಾಳು ಬಡಾವಣೆಯಲ್ಲಿರುವ ಶರಣ ಮಾಗನೂರು ಬಸಪ್ಪ ಪಿಯು ಕಾಲೇಜಿನ ಸಭಾಂಗಣದಲ್ಲಿ ದಾವಣಗೆರೆ-ಚಿತ್ರದುರ್ಗ ಜಿಲ್ಲಾ ಬ್ಯಾಂಕ್ ನಿವೃತ್ತರ ಒಕ್ಕೂಟ ಹಾಗೂ ಸ್ಟೇಟ್ ಬ್ಯಾಂಕ್ ಆಫ್ ಮೈಸೂರು ಪೆನ್ಷನರ್ ಕಮ್ಯೂನ್ ವತಿಯಿಂದ ಇಂದು ಹಮ್ಮಿಕೊಂಡಿದ್ದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ 75 ವರ್ಷಕ್ಕೂ ಮೇಲ್ಪಟ್ಟ ನಿವೃತ್ತ ಬ್ಯಾಂಕ್ ಅಧಿಕಾರಿಗಳ ಸನ್ಮಾನ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.

ನಾನೂ ಕೂಡ ಹಳ್ಳಿಯಿಂದಲೇ ಬಂದವನಾಗಿದ್ದು, ಗ್ರಾಮೀಣ ವಿದ್ಯಾರ್ಥಿಗಳ ಸಮಸ್ಯೆಗಳ ಅರಿವಿದೆ. ಒಕ್ಕೂಟದಿಂದ ಇನ್ನೂ ಹೆಚ್ಚಿನ ಮಟ್ಟದಲ್ಲಿ ವಿದ್ಯಾರ್ಥಿಗಳಿಗೆ ಆರ್ಥಿಕ ನೆರವು, ಪ್ರೋತ್ಸಾಹದ ಅಗತ್ಯವಿದೆ. ಪ್ರಸ್ತುತ ಬ್ಯಾಂಕ್ ನಿವೃತ್ತರ ಸಾಮಾಜಿಕ ಕಾಳಜಿ, ಸಹಕಾರ ಮನೋಭಾವ ಮೆಚ್ಚುವಂತಹದ್ದು, ಎಸ್‌ಬಿಎಂ ಪೆನ್ಷನರ್ ಕಮ್ಯೂನ್ ಸದಸ್ಯರು ಮತ್ತಷ್ಟು ಸಮಾಜ ಮುಖಿ ಕಾರ್ಯಕ್ರಮಗಳನ್ನು ಕೈಗೊಳ್ಳಲು ಒಕ್ಕೂಟದೊಂದಿಗೆ ಕೈಜೋಡಿಸುವಂತೆ ಮನವಿ ಮಾಡಿದರು.

ಗ್ರಾಮೀಣ ಬಡ ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆಯನ್ನು ಪೋಷಕರಷ್ಟೇ ಅಲ್ಲದೇ ಇಡೀ ಸಮಾಜವೇ ಪ್ರೋತ್ಸಾಹಿಸುವ ಹೊಣೆಗಾರಿಕೆಯಾಗಿದೆ ಎಂದರು.

ಎಸ್‌ಬಿಎಂ ಪೆನ್ಷನರ್ ಕಮ್ಯೂನ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಜಿತ್ ಕುಮಾರ್ ನ್ಯಾಮತಿ ಮಾತನಾಡಿ, ಶೈಕ್ಷಣಿಕ ಸಾಧನೆಗೆ ಸಹಕಾರ, ಪ್ರೋತ್ಸಾಹ ನೀಡುವ ಇಂತಹ ಸಮಾಜಮುಖಿ ಕಾರ್ಯಗಳಿಂದ ಸಮಾಜದ ಮೇಲಿನ ಋಣಭಾರ ಕಡಿಕೊಳ್ಳಬಹುದು ಎಂದು ಹೇಳಿದರು.

ಉತ್ತಮ ಕಾರ್ಯಚಟುವಟಿಕೆಗಳಿಗೆ ಆರ್ಥಿಕ ನೆರವು ನೀಡಲು ವಿದೇಶಗಳಲ್ಲಿರುವ ದಾನಿಗಳು ಸಹ ಮುಂದೆ ಬಂದಿದ್ದು, ಹಣದ ಸದ್ವಿನಿಯೋಗವಾಗುವಂತೆ ನೋಡಿಕೊಳ್ಳುವುದು ನಮ್ಮ ಜವಾಬ್ದಾರಿಯಾಗಿದೆ ಎಂದರು.

ಆಲ್ ಇಂಡಿಯಾ ಸಿಂಡಿಕೇಟ್ ಬ್ಯಾಂಕ್ ನಿವೃತ್ತರ ಸಂಘದ ಸಂಘಟನಾ ಕಾರ್ಯದರ್ಶಿ ಕೆ. ಶ್ರೀನಿವಾಸ್ ಮಾತನಾಡಿ, ಗ್ರಾಮೀಣ ವಿದ್ಯಾರ್ಥಿಗಳ ಪ್ರತಿಭೆ ಪ್ರೋತ್ಸಾಹಿಸುವ ಇಂತಹ ಕಾರ್ಯಕ್ರಮ ಮಾದರಿಯಾದುದು. ವಿದ್ಯಾರ್ಥಿಗಳು ಧನ ಸಹಾಯವನ್ನು ಶೈಕ್ಷಣಿಕ ಪ್ರಗತಿಗಾಗಿ ಬಳಕೆ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ದಾವಣಗೆರೆ - ಚಿತ್ರದುರ್ಗ ಜಿಲ್ಲಾ ಬ್ಯಾಂಕ್ ನಿವೃತ್ತರ ಒಕ್ಕೂಟದ ಅಧ್ಯಕ್ಷ ಎಸ್.ಟಿ. ಶಾಂತಗಂಗಾಧರ್ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಎಸ್‌ಬಿಎಂ ಪೆನ್ಷನರ್ ಕಮ್ಯೂನ್ ಸದಸ್ಯ ಸೂರ್ಯನಾರಾಯಣ, ಪ್ರಧಾನ ಕಾರ್ಯದರ್ಶಿ ಜಿ.ಬಿ. ಶಿವಕುಮಾರ್, ಹೆಚ್.ಕೆ. ಸತ್ಯಭಾಮ ಮಂಜುನಾಥ್, ಸುಗೀರಪ್ಪ, ಗುರುಬಸವರಾಜ್, ಪರಮೇಶ್ವರಪ್ಪ ಕೊಪ್ಪದ್, ಮಹೇಶ್ವರಪ್ಪ, ಮಧುಕರ್ ಮತ್ತಿತರರು ಭಾಗವಹಿಸಿದ್ದರು.

ಇದೇ ವೇಳೆ 75 ಕ್ಕೂ ಅಧಿಕ ವಯೋಮಾನದ ವಿವಿಧ ಬ್ಯಾಂಕುಗಳ ನಿವೃತ್ತರನ್ನು ಗೌರವಿಸಲಾಯಿತು. 37 ಗ್ರಾಮೀಣ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ತಲಾ ಐದು ಸಾವಿರ ರೂ. ನಗದು, ಉಡುಪು ಹಾಗೂ ಪ್ರಶಸ್ತಿ ಪತ್ರ ನೀಡಿ ಸನ್ಮಾನಿಸಲಾಯಿತು.

# ಇಂದು ಭದ್ರಾ ಜಲಾಶಯ ವೀಕ್ಷಣೆ, ಪ್ರತಿಭಟನೆ

ದಾವಣಗೆರೆ, ಜು.7 - ಭದ್ರಾ ಜಲಾಶಯದ ನೀರು ಸೋರಿಕೆ ಖಂಡಿಸಿ ಹಕ್ಕೊತ್ತಾಯ ಮಂಡಿಸಲು ನಾಳೆ ದಿನಾಂಕ 8ರ ಸೋಮವಾರ ಬೆಳಗ್ಗೆ 11ಕ್ಕೆ ಜಲಾಶಯಕ್ಕೆ ಭೇಟಿ ನೀಡಿ ಶಾಶ್ವತ ಪರಿಹಾರಕ್ಕಾಗಿ ಪ್ರತಿಭಟನೆ ಮಾಡಲಿದ್ದೇವೆ ಎಂದು ಮಾಜಿ ಶಾಸಕ ಎಂ.ಪಿ. ರೇಣುಕಾಚಾರ್ಯ ಕರೆ ನೀಡಿದರು.

ಭಾನುವಾರ ನಗರದ ಪ್ರವಾಸಿ ಮಂದಿರಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಲಾಶಯದ ನೀರು ಸೋರಿಕೆ ಕುರಿತು ಅಧಿಕಾರಿಗಳು ಉತ್ತರಿಸದಿದ್ದರೆ ಅಲ್ಲೇ ಧರಣಿ ಕೂರುತ್ತೇವೆ ಎಂದು ಹೇಳಿದರು.

ಕಳೆದ ವರ್ಷಕ್ಕೆ ಹೋಲಿಸಿದರೆ ಈ ವರ್ಷ ಜಲಾಶಯದಲ್ಲಿ ನೀರು ಸಂಗ್ರಹ ಕಡಿಮೆ ಇದ್ದು ಇದಕ್ಕೆ ಸರ್ಕಾರ ಮತ್ತು ಅಧಿಕಾರಿಗಳ ನಿರ್ಲಕ್ಷ್ಯವೇ ಕಾರಣ ಎಂದು ಹೇಳಿದರು.

ಡ್ಯಾಂ ದುರಸ್ತಿಗೆ ಬೇಸಿಗೆಯಲ್ಲಿ ಕ್ರಮ ಕೈಗೊಳ್ಳದೇ ಮಳೆಗಾಲದಲ್ಲಿ ಕೈಗೆತ್ತಿಕೊಂಡಿರುವುದು ಸಮಸ್ಯೆಗೆ ಮೂಲ ಕಾರಣ ಎಂದು ದೂರಿದರು.

ಇದು ರೈತರಿಗೆ ಸಂಬಂಧಿಸಿದ ಕಾಮಗಾರಿ ಆದ್ದರಿಂದ ತುರ್ತಾಗಿ ದುರಸ್ತಿ ಮಾಡಿಸುವುದನ್ನು ಬಿಟ್ಟು ಸರ್ಕಾರ ಮತ್ತು ಸಂಬಂಧಿಸಿದ ಅಧಿಕಾರಿಗಳು ರೈತರ ವಿಚಾರದಲ್ಲಿ ನಿರ್ಲಕ್ಷ್ಯ ತೋರುವುದು ಸರಿಯಲ್ಲ ಎಂದು ಎಚ್ಚರಿಸಿದರು.

ಡ್ಯಾಮ್ ದುರಸ್ತಿಗೆ ಸರ್ಕಾರದ ಬಳಿ ಹಣ ಇಲ್ಲದ ಕಾರಣ ಗೇಟಿಗೆ ಕಾಂಕ್ರೀಟ್ ಹಾಕಿಸಲು ಟೆಂಡರ್ ಕರೆದಿದ್ದೇವೆ ಎಂದು ಸುಳ್ಳು ಹೇಳುತ್ತಿದ್ದಾರೆಯೇ ಹೊರತು, ದುರಸ್ತಿ ಮಾಡುತ್ತಿಲ್ಲ ಎಂದು ಟೀಕಿಸಿದರು.

ಡ್ಯಾಮಿನ ಗೇಟ್ ಸರಿಯಾಗಿ ನಿರ್ವಹಣೆ ಮಾಡದ ಕಾರಣ ದಿನಕ್ಕೆ 4ರಿಂದ 5 ಸಾವಿರ ಕ್ಯೂಸೆಕ್ ನೀರು ನದಿಗೆ ಹರಿದು ಹೋಗುತ್ತಿದೆ ಎಂಬ ಮಾಹಿತಿ ಬಂದಿದೆ ಎಂದು ಹೇಳಿದರು.

ಮಳೆಗಾಲದಲ್ಲಿ ಡ್ಯಾಂನಲ್ಲಿ ಸಂಗ್ರಹ ಆಗಬೇಕಿದ್ದ ನೀರು ಅಧಿಕಾರಿಗಳ ಯಡವಟ್ಟಿನಿಂದ ಹೊರ ಹೋದರೆ ಯಾರು ಹೊಣೆ ಎಂಬುದು ರೈತ ಮುಖಂಡರ ಪ್ರಶ್ನೆ ಆಗಿದೆ ಎಂದರು.

ಬಿಜೆಪಿ ಮುಖಂಡ ಮಾಡಾಳ್ ಮಲ್ಲಿಕಾರ್ಜುನ್ ಮಾತನಾಡಿ, ಜನ ಪ್ರತಿನಿಧಿಗಳು ಮತ್ತು ಅಧಿಕಾರಿಗಳ ನಿರ್ಲಕ್ಷ್ಯದಿಂದ ಡ್ಯಾಂನಿಂದ ಪ್ರತಿ ದಿನ 5 ಸಾವಿರ ಕ್ಯೂಸೆಕ್ ನೀರು ನದಿಗೆ ಹರಿದು ಹೋಗುತ್ತಿದೆ ಎಂದರು. ಗೇಟ್ ದುರಸ್ತಿಗೆ ಕಾಂಕ್ರಿಟ್ ಹಾಕಲು ಟೆಂಡರ್ ಕರೆದಿದ್ದರೂ ಸಹ ಸರ್ಕಾರದ ಬೇಜವಾಬ್ದಾರಿಯಿಂದ ಜಲಾಶಯದ ದುರಸ್ತಿ ಕಾಮಗಾರಿ ದೂರ ಸರಿದಿದೆ ಎಂದು ಗುಡುಗಿದರು.

ಈ ವೇಳೆ ರೈತ ಮೋರ್ಚಾ ಜಿಲ್ಲಾಧ್ಯಕ್ಷ ಲೋಕಿಕೆರೆ ನಾಗರಾಜ್, ಬಿ.ಕೆ. ಶಿವಕುಮಾರ್, ಚಂದ್ರಶೇಖರ್ ಪೂಜಾರ್, 6ನೇ ಕಲ್ಲು ವಿಜಯ್ ಕುಮಾರ್, ಪ್ರವೀಣ್ ಜಾಧವ್, ರಾಜು ಮತ್ತು ಸತೀಶ್ ಕೊಳೇನಹಳ್ಳಿ ಸುದ್ದಿಗೋಷ್ಠಿಯಲ್ಲಿದ್ದರು.

## ಶಾಲಾ ಮಕ್ಕಳಿಗೆ ಸಾಮಗ್ರಿ ವಿತರಣೆ



ಹರಿಹರ, ಜು. 7- ಹರಪನಹಳ್ಳಿಯ ಉಜ್ಜಯಿನಿ ಕಾಲೇಜು ಉಪನ್ಯಾಸಕ ಮಲ್ಲಿಕಾರ್ಜುನ ಅವರು ಅರಸೀಕೆರೆ ಗ್ರಾಮದ ತಿಮ್ಮಲಾಪುರ ಶಾಲೆಯ ಮಕ್ಕಳಿಗೆ ಅಗತ್ಯವಿರುವ ಕಲಿಕಾ ಸಾಮಗ್ರಿಗಳನ್ನು ಕೊಡಿಸಿದ್ದಾರೆ.

ವಿದ್ಯಾರ್ಥಿಗಳಿಗೆ ಬ್ಯಾಗ್, ಪುಸ್ತಕ ವಿತರಣೆ ಮಾಡಿ ಮಾತನಾಡಿದ ಉಪನ್ಯಾಸಕ ಮಲ್ಲಿಕಾರ್ಜುನ್ ಅವರು, ನಾವು ಚಿಕ್ಕವರಿದ್ದಾಗ ಸಾಕಷ್ಟು ಬಡತನ. ಆ ಸಮಯದಲ್ಲಿ ವಿದ್ಯಾಭ್ಯಾಸ ಮಾಡುವುದು ಬಹಳ ಕಷ್ಟವಾಗಿತ್ತು. ಆ ದಿನಗಳು ಈಗಿನ ವಿದ್ಯಾರ್ಥಿಗಳಿಗೆ ಬರಬಾರದು ಎಂಬ ದೃಷ್ಟಿಯಿಂದ ನನ್ನ ದುಡಿಮೆಯ ಹಣದಲ್ಲಿ ಸ್ವಲ್ಪ ಭಾಗವನ್ನು ಬಡ ವಿದ್ಯಾರ್ಥಿಗಳ ಏಳಿಗೆಗಾಗಿ ಸಮರ್ಪಣೆ ಮಾಡುತ್ತಿದ್ದೇನೆ ಎಂದರು.

ವಿದ್ಯಾರ್ಥಿಗಳು ಮುಂದೆ ದೊಡ್ಡ ಹುದ್ದೆಗೆ ಹೋದಾಗ ಬಡವರಿಗೆ ಸಹಾಯ, ಸಹಕಾರ ಮಾಡುವಂತಹ ಮನಸ್ಥಿತಿ ಬೆಳೆಸಿಕೊಂಡರೆ ನಾನು ಇವತ್ತು ಅವರಿಗೆ ಮಾಡಿದ ಅಲ್ಪ ಸೇವೆ ಸಾರ್ಥಕ ವಾಗುತ್ತದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ವೆಂಕಟೇಶ್, ಸದಸ್ಯರಾದ ನರಸಿಂಹ, ಮುಖ್ಯ ಗುರುಗಳಾದ ಶಿವಮೂರ್ತಯ್ಯ, ಶಿಕ್ಷಕ ವೀರೇಶ್ ಅರಸೀಕೆರೆ ಹಾಜರಿದ್ದರು.

## ನಗರದ ಬಿ.ಎಸ್.ಸಿ. ಕಾಲೇಜಿನಲ್ಲಿ ಇಂದು ಸಮಾರೋಪ

ಶ್ರೀ ವಿನಾಯಕ ಎಜ್ಯುಕೇಶನ್ ಟ್ರಸ್ಟ್ ಬಿ.ಎಸ್. ಚನ್ನಬಸಪ್ಪ ಪ್ರಥಮ ದರ್ಜೆ ಕಾಲೇಜು ವಿದ್ಯಾರ್ಥಿ ಸಂಘ ಹಾಗೂ ಸಾಂಸ್ಕೃತಿಕ ಚಟುವಟಿಕೆ, ಕ್ರೀಡಾ ಚಟುವಟಿಕೆ, ಎನ್.ಎಸ್.ಎಸ್. ಯುವ ರೆಡ್ ಕ್ರಾಸ್ ಘಟಕದ ಸಮಾರೋಪ ಸಮಾರಂಭವನ್ನು ಬಾಪೂಜಿ ಸಮುದಾಯ ಭವನದಲ್ಲಿ ಇಂದು ಬೆಳಿಗ್ಗೆ 10.30ಕ್ಕೆ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಅಧ್ಯಕ್ಷ ಬಿ.ಸಿ. ಶಿವಕುಮಾರ್, ಮುಖ್ಯ ಅತಿಥಿಗಳಾಗಿ ವೀರೇಂದ್ರ ಎಂ.ಕೆ., ಆರ್.ವೆಂಕಟರೆಡ್ಡಿ, ಡಾ. ಹೆಚ್.ಬಿ. ಮೋಹನ್ ಮತ್ತು ಪ್ರಾಂಶುಪಾಲ ಪ್ರೊ. ಎಂ.ಸಿ. ಗುರು ಉಪಸ್ಥಿತರಿರುವರು.

# ಅನುದಾನಿತ ಶಿಕ್ಷಣ ಸಂಸ್ಥೆ ನೌಕರರ ಬೇಡಿಕೆಗಳ ಈಡೇರಿಕೆಗೆ ಆಗ್ರಹ



ರಾಣೇಬೆನ್ನೂರು, ಜು. 7 - ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಒಪಿಎಸ್ ಜಾರಿಗೊಳಿಸುವ ಮತ್ತು ಜ್ಯೋತಿ ಸಂಜೀವಿನಿ ಯೋಜನೆ ಸೇರಿದಂತೆ ವಿವಿಧ ಬೇಡಿಕೆಗಳನ್ನು ಕೂಡಲೇ ಈಡೇರಿಸುವಂತೆ ಒತ್ತಾಯಿಸಿ ಅನುದಾನಿತ ಶಾಲಾ- ಕಾಲೇಜುಗಳ ಪಿಂಚಣಿ ವಂಚಿತ ನೌಕರರ ಸಂಘ, ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ, ಪ್ರೌಢ ಶಾಲಾ ಶಿಕ್ಷಕರ ಸಂಘದ ರಾಣೇಬೆನ್ನೂರು ತಾಲ್ಲೂಕು ಮಟ್ಟದ ಪದಾಧಿಕಾರಿಗಳು ತಹಶೀಲ್ದಾರ್ ಕೆ. ಗುರು ಬಸವರಾಜ್ ಅವರ ಮೂಲಕ ರಾಜ್ಯ ಸರ್ಕಾರಕ್ಕೆ ಹಾಗೂ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು,

ಈ ಸಂದರ್ಭದಲ್ಲಿ ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ರಾಜ್ಯ ಪ್ರತಿನಿಧಿ ಮಲ್ಲಿಕಾರ್ಜುನ ಬಾವಿಕಟ್ಟಿ ಮಾತನಾಡಿ ಈಗಾಗಲೇ ರಾಜ್ಯದಲ್ಲಿ ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರು ನಮ್ಮಗಳ ಬೇಡಿಕೆಗಾಗಿ ಮನವಿ ಸಲ್ಲಿಸಿದ್ದೇವೆ, ಕೆಲವು ದಿನಗಳ ಹಿಂದೆ ತುಮಕೂರಿನಿಂದ ಬೆಂಗಳೂರುವರೆಗೆ ಪಾದಯಾತ್ರೆ ಮಾಡಿ 143 ದಿನ ಫ್ರೀಡಂ ಪಾರ್ಕ್‌ನಲ್ಲಿ ನಿರಂತರ ಹೋರಾಟ ಮಾಡಿದರೂ ಸಹ ಸರ್ಕಾರ ನಮ್ಮ ಸಮಸ್ಯೆಯನ್ನು ಪರಿಹರಿಸಲು ಮುಂದಾಗಿಲ್ಲ ಎಂದು ಬೇಸರ ವ್ಯಕ್ತ ಪಡಿಸಿದರು.

ಮುಖ್ಯೋಪಾಧ್ಯಾಯ ಪ್ರಕಾಶ ಜೆ. ಸೋಮನಗೌಡ್ರು, ಅನುದಾನಿತ ಪ್ರಾ.ಶಾ. ಶಿಕ್ಷಕರ ಸಂಘದ ಕಿತ್ತೂರು ಕರ್ನಾಟಕದ ವಿಭಾಗಿಯ ಸಂಚಾಲಕರಾದ ನಾಗರಾಜ ನಲವಾಗಲ, ಜಿಲ್ಲಾ ಕಾರ್ಯದರ್ಶಿಗಳಾದ ಮಾರುತಿ ಲಮಾಣಿ, ತಾಲ್ಲೂಕು ಅಧ್ಯಕ್ಷ ಎಸ್.ಹೆಚ್ ಪಾಟೀಲ್, ಕಾರ್ಯದರ್ಶಿಗಳಾದ ಬಸವರಾಜ ನಾಯಕ್, ಬಸವರಾಜ ಶಾಮನೂರು, ಬಸವರಾಜಯ್ಯ ತಾವರಗೇರಿಮಠ, ಎಂ. ಹೆಚ್. ಪಾಟೀಲ್, ಚಂದ್ರುಗ್ಯಾನಗೌಡ್ರು, ಮಾಲತೇಶ್ ಹಿರೇಮಠ, ಎಫ್.ಜೆ. ಪಿಂಜಾರ್, ರೇವಣಸಿದ್ದಯ್ಯ ಹಿರೇಮಠ ಇತರರು ಇದ್ದರು.

## ಕರ್ನಾಟಕ ಯುವ ರಕ್ಷಣಾ ವೇದಿಕೆ ಜಿಲ್ಲಾ ಘಟಕ ಪದಾಧಿಕಾರಿಗಳ ಆಯ್ಕೆ

ದಾವಣಗೆರೆ, ಜು. 7- ಕರ್ನಾಟಕ ಯುವ ರಕ್ಷಣಾ ವೇದಿಕೆ ದಾವಣಗೆರೆ ಜಿಲ್ಲಾ ಘಟಕದ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ ಎಂದು ರಾಜ್ಯಾಧ್ಯಕ್ಷ ಸುನೀಲ್ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು. ರಾಜ್ಯದ 24 ಜಿಲ್ಲೆಗಳಲ್ಲಿ ನಮ್ಮ ಸಂಘಟನೆ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದೆ. ದಾವಣಗೆರೆ ಜಿಲ್ಲೆಯ ನೂತನ ಪದಾಧಿಕಾರಿಗಳ ಆಯ್ಕೆ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ವಿವಿಧ ತಾಲ್ಲೂಕು ಘಟಕಗಳ ಪದಾಧಿಕಾರಿಗಳನ್ನು ಸಹ ಆಯ್ಕೆ ಮಾಡಲಾಗುವುದು ಎಂದರು.

ಜಿಲ್ಲಾ ಪದಾಧಿಕಾರಿಗಳು: ಎಸ್.ಆರ್. ಶ್ಯಾಮ್ ಪ್ರಸಾದ್ (ಜಿಲ್ಲಾಧ್ಯಕ್ಷರು), ನಾಗರತ್ನಮ್ಮ (ಮಹಿಳಾ ಘಟಕದ ಅಧ್ಯಕ್ಷರು), ಅರುಣ್ ಜಿ. ರೇವಣಕರ್, ಗೌತಮ್ ಎಸ್. ಕದಂ (ಉಪಾಧ್ಯಕ್ಷರು), ಸುಧೀರ್ ಜಿ. ಶೇಟ್ (ಕಾರ್ಯಾಧ್ಯಕ್ಷರು),ಕೆ.ಎಸ್. ಈಶ್ವರಪ್ಪ, ರುದ್ರಾಚಾರ್, ಕಿರಣ್ ವಿಠಲ್‌ಭಟ್, ವೀರೇಶ ನಾಗಪ್ಪ ಹಾವನೂರು, ಗಿರೀಶ್ ಪಿ. ಶೇಟ್ (ಕಾರ್ಯದರ್ಶಿಗಳು) ಇವರನ್ನು ನೇಮಕ ಮಾಡಲಾಗಿದೆ ಎಂದು ಮಾಹಿತಿ ನೀಡಿದರು. ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ಯುವ ರಕ್ಷಣಾ ವೇದಿಕೆ ಜಿಲ್ಲಾ ಘಟಕದ ನೂತನ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಜ್ಞಾನ ಸಂಪಾದನೆಯನ್ನು ಮಾಡಿದವ ಜಗತ್ತಿಗೇ ರಾಜನಾಗಬಲ್ಲ



### ಕರ್ನಾಟಕ ಮುಕ್ತ ವಿವಿ ಪರೀಕ್ಷಾಂಗ ಕುಲಸಚಿವ ಡಾ. ಹೆಚ್.ವಿಶ್ವನಾಥ್ ಅವರ ಕೃತಿಗಳ ಬಿಡುಗಡೆ ಸಮಾರಂಭದಲ್ಲಿ ಶ್ರೀ ಬಸವ ಪ್ರಭು ಸ್ವಾಮೀಜಿ ಅಭಿಮತ

ದಾವಣಗೆರೆ, ಜು. 7 - ಶಿಕ್ಷಣ ಕ್ಷೇತ್ರಕ್ಕೆ ತಮ್ಮದೇ ಆದ ಕೊಡುಗೆ ನೀಡುತ್ತಾ ಬಂದಿರುವ ಕರ್ನಾಟಕ ಮುಕ್ತ ವಿವಿ ಪರೀಕ್ಷಾಂಗ ಕುಲಸಚಿವ ಡಾ. ಹೆಚ್.ವಿಶ್ವನಾಥ್ ಅವರು ಎಲ್ಲರ ಆಶಯದಂತೆ ರಾಜಕೀಯ ರಂಗ ಪ್ರವೇಶ ಮಾಡುವ ಮೂಲಕ ರಾಜ್ಯಪಾಲರು, ರಾಷ್ಟ್ರಪತಿಗಳಂತಹ ಅತ್ಯುನ್ನತ ಹುದ್ದೆಗಳನ್ನು ಅಲಂಕರಿಸುವಂತಾಗಲಿ ಎಂದು ಚಿತ್ರದುರ್ಗ ಬೃಹನ್ಮಠದ ಉಸ್ತುವಾರಿ ಶ್ರೀ ಬಸವಪ್ರಭು ಸ್ವಾಮೀಜಿ ಶುಭ ಹಾರೈಸಿದರು.

ನಗರದ ಆರ್.ಹೆಚ್. ಧರ್ಮಶಾಲೆಯ ಸುನಂದ ರಂಗಮಂಟಪದಲ್ಲಿ ಮಾಜಿ ಸಚಿವ ಹೆಚ್.ಆಂಜನೇಯ ಹಾಗೂ ಡಾ.ಹೆಚ್. ವಿಶ್ವನಾಥ ಅಭಿಮಾನಿಗಳು ಏರ್ಪಡಿಸಿದ್ದ ಕರ್ನಾಟಕ ರಾಜ್ಯ ಮುಕ್ತ ವಿವಿ ಪರೀಕ್ಷಾಂಗ ಕುಲಸಚಿವರೂ, ಚಿಂತಕರೂ ಆದ ಡಾ. ಹೆಚ್. ವಿಶ್ವನಾಥ ಅವರ ಜನ್ಮ ದಿನಾಚರಣೆ ಹಾಗೂ ಪುಸ್ತಕ ಬಿಡುಗಡೆ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಕೇವಲ ಹಣ, ಆಸ್ತಿ ಗಳಿಸಿದವ ರಾಜನಾಗಲಾರ, ಬದಲಾಗಿ ಜ್ಞಾನ ಸಂಪಾದನೆ ಮಾಡಿದವ ಜಗತ್ತಿಗೆ ರಾಜನಾಗಬಲ್ಲ. ಬದುಕಿಗೆ ಜ್ಞಾನ ಸಂಪಾದನೆ ಬಹುಮುಖ್ಯ ಎಂದರು.

ಡಾ. ವಿಶ್ವನಾಥ್ ಅವರು ಒಂಭತ್ತು ಪದವಿಗಳನ್ನು ಪಡೆದಿರುವುದಲ್ಲದೇ, ಎಲ್ಲರ ವಿಶ್ವಾಸ ಗಳಿಸುವ ಪ್ರಯತ್ನ ಮಾಡಿದ್ದಾರೆ. ಅವರಲ್ಲೂ ಒಬ್ಬ ಅಂಬೇಡ್ಕರ್ ಅವರನ್ನು ಕಾಣಬಹುದು. ಶೋಷಿತರ, ದಮನಿತರ ಧ್ವನಿಯಾಗಿದ್ದಾರೆ ಎಂದು ಶ್ರೀಗಳು ಶ್ಲಾಘಿಸಿದರು.

ಶಾಸಕ ಕೆ.ಎಸ್. ಬಸವಂತಪ್ಪ ಮಾತನಾಡಿ, ಮನುಷ್ಯನಿಗೆ ಪ್ರಾಮಾಣಿಕ ಪ್ರಯತ್ನ, ನಿರ್ದಿಷ್ಟ ಗುರಿ, ಛಲ ಇದ್ದರೆ ಜೀವನದಲ್ಲಿ ಏನನ್ನಾದರೂ ಸಾಧಿಸಲು ಸಾಧ್ಯವಿದೆ. ಜನರ ಭಾವನೆಗಳನ್ನು ಅರ್ಥ ಮಾಡಿಕೊಂಡು ಅವರ ಆಶೋತ್ತರಗಳಿಗೆ ಸ್ಪಂದಿಸಿದರೆ ಜನ ನಾಯಕನಾಗಿ ಬೆಳೆಯಲು ಸಾಧ್ಯ ಎಂದರು.

ವ್ಯಕ್ತಿಗೆ ಹೃದಯವಂತಿಕೆ ಮುಖ್ಯ. ನಾನೂ ಸಹ ಸಾಮಾಜಿಕ ಮತ್ತು ರಾಜಕೀಯ ಜೀವನದಲ್ಲಿ ಮುಂದೆ ಬರಲು ಗಾಂಧಿನಗರದ ಜನತೆಯೇ ಕಾರಣ. ಗಾಂಧಿನಗರದ ಜನ ಜೀವ ಕೊಟ್ಟರೆ, ಮಾಯಕೊಂಡ ಕ್ಷೇತ್ರದ ಜನತೆ ಸಂಸ್ಕಾರ ಮತ್ತು ಅಧಿಕಾರ ನೀಡಿ ನನ್ನನ್ನು ಕೈ ಹಿಡಿದಿದ್ದಾರೆ ಎಂದು ಅಭಿಮಾನಪೂರ್ವಕವಾಗಿ ನುಡಿದರು.

ಗಾಂಧಿನಗರದ ಯುವಜನತೆ ಓದಿನ ಕಡೆ ಹೆಚ್ಚು ಗಮನಹರಿಸಬೇಕು. ವಿದ್ಯಾವಂತರಾದರೆ ಮಾತ್ರ ಜೀವನದಲ್ಲಿ ಯಶಸ್ಸು ಕಾಣಲು ಸಾಧ್ಯವಿದೆ. ಕೇವಲ ಕೆಲಸ ಬೇಕೆಂದು ಓದುವುದು ಬೇಡ, ವಿಚಾರವಂತರಾಗಲು ಓದು, ಬಹು ಮುಖ್ಯ. ದುಗ್ಗಪ್ಪ, ಹೆಚ್.ಆಂಜನೇಯ, ಡಾ. ವಿಶ್ವನಾಥ್ ಮತ್ತು ನಾನು ಸೇರಿದಂತೆ ಅನೇಕರು ಸಮಾಜ ಸೇವೆ, ರಾಜಕೀಯ ರಂಗ, ಶಿಕ್ಷಣ ಕ್ಷೇತ್ರದಲ್ಲಿ ಹೆಸರು ಮಾಡಿರುವುದನ್ನು ಮತ್ತು ಮಾಡುತ್ತಿರುವುದನ್ನು ಸ್ಮರಿಸಿಕೊಂಡರು.

ಯಾವಾಗಲೂ ತುಳಿದು ಬದುಕುವುದನ್ನು ಬಿಟ್ಟು ತಿಳಿದು ಬದುಕಬೇಕು. ವ್ಯಕ್ತಿತ್ವಕ್ಕೆ ಬೆಲೆ ಕೊಟ್ಟು ಮೇಲೆತ್ತುವ ಕೆಲಸ ಮಾಡಬೇಕೇ ಹೊರತು, ಕಾಲೆಳೆಯುವ ಕೆಲಸವನ್ನು ಯಾರೂ ಮಾಡಬಾರದು. ಓದನ್ನು ಅಳವಡಿಸಿಕೊಂಡರೆ ಜೀವನ ಸಾರ್ಥಕವಾಗುತ್ತದೆ. ವಿಶ್ವನಾಥ್ ಅವರ ಶಿಕ್ಷಣ ಕ್ಷೇತ್ರದ ಸಾಧನೆ ಎಲ್ಲರಿಗೂ ಮಾದರಿಯಾಗಿದೆ. ಇನ್ನೂ ನೂರಾರು ವಿಶ್ವನಾಥ್ ಹುಟ್ಟಿ ಬರಲಿ ಎಂದು ಶುಭ ಹಾರೈಸಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಇ.ಎಂ. ಮಂಜುನಾಥ ಮಾತನಾಡಿ, ನಾವು ಪಡೆದಿರುವ ವಿದ್ಯೆಯೇ ನಮ್ಮನ್ನು ಗೌರವಕ್ಕೆ ಪಾತ್ರರಾಗುವಂತೆ ಮಾಡುತ್ತದೆ. ವಿಶ್ವನಾಥ್ ಅವರು ನಿರಂತರ ಅಧ್ಯಯನ ಶೀಲರು, ಇನ್ನೂ ಓದಿ ಸಾಧನೆ ಮಾಡಬೇಕೆಂಬ ತುಡಿತ, ಹಂಬಲ ಇರುವುದರಿಂದಲೇ ಕರ್ನಾಟಕ ಮುಕ್ತ ವಿವಿ ಪರೀಕ್ಷಾಂಗ ಕುಲಸಚಿವರಾಗಲು ಸಾಧ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಬಿ. ವಾಮದೇವಪ್ಪ ಮಾತನಾಡಿ, ವಿಶ್ವನಾಥ ಅವರು ಅನೇಕ ಸಾಹಿತ್ಯ ಕೃತಿಗಳನ್ನು ರಚಿಸುವ ಮೂಲಕ ಕನ್ನಡ ಸಾಹಿತ್ಯ ಲೋಕಕ್ಕೆ ಅಪ್ರತಿಮ ಕೊಡುಗೆ ನೀಡಿದ್ದಾರೆ. ಜನಮುಖಿ, ಜನಪರ ಕಾರ್ಯಗಳನ್ನು ಮಾಡುತ್ತಾ ಬಂದಿರುವ ಅವರಿಗೆ ಶಿಕ್ಷಣ ಕ್ಷೇತ್ರದಲ್ಲಿ ಉನ್ನತ ಹುದ್ದೆಗಳು ಲಭಿಸಲಿ ಎಂದ ಅವರು, ಉಪಕುಲಪತಿಯಾಗುವ ಯೋಗ ಕೂಡ ಒಲಿದು ಬರಲಿ ಎಂದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ದಿನೇಶ್ ಕೆ.ಶೆಟ್ಟಿ ಮಾತನಾಡಿ, ಕಷ್ಟಪಟ್ಟು ಜೀವನದಲ್ಲಿ ಮುಂದೆ ಬಂದಿರುವ ವಿಶ್ವನಾಥ ಯುವ ಜನಾಂಗಕ್ಕೆ ಮಾದರಿ. ಯುವಕರು ಅವರ ಮಾರ್ಗ ದರ್ಶನದಲ್ಲಿ ಮುನ್ನಡೆಯುವಂತಾಗಲಿ ಎಂದು ಹೇಳಿದರು.

ಹಿರಿಯ ಸಾಹಿತಿ ಹಳೇಬೀಡು ರಾಮಪ್ರಸಾದ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ. ಹೆಚ್. ವಿಶ್ವನಾಥ್ ಬಾಬೂ ಜಗಜೀವನರಾಂ ಅವರ ಕುರಿತು ಮಾತನಾಡಿದರು. ಶ್ರೀಮತಿ ಶೈಲಜಾ ವಿಶ್ವನಾಥ್, ಪಾಲಿಕೆ ಮಾಜಿ ಸದಸ್ಯ ಎಸ್.ಮಲ್ಲಿಕಾರ್ಜುನ್, ಗುರುನಾಥ್ ಮತ್ತಿತರರು ಉಪಸ್ಥಿತರಿದ್ದರು.


ಇದೇ ವೇಳೆ ಡಾ. ವಿಶ್ವನಾಥ್ ರಚಿಸಿರುವ 'ನವಭಾರತ ನಿರ್ಮಾಪಕ ಡಾ.ಬಾಬು ಜಗಜೀವನರಾಂ' ಹಾಗೂ 'ಸಾಹಿತ್ಯಾನುಭವ' ಕೃತಿಗಳು ಲೋಕಾರ್ಪಣೆ ಗೊಂಡವು. ಬಸವ ಕಲಾ ಲೋಕದ ಕಲಾವಿದರು ಪ್ರಾರ್ಥಿಸಿದರು. ಪಿ. ಕೆ. ಖಾದರ್ ನಿರೂಪಿಸಿದರು. ಎಸ್. ಮಲ್ಲಿಕಾರ್ಜುನ್ ಸ್ವಾಗತಿಸಿದರು. ಅಭಿಮಾನಿ ಬಳಗದ ಜೆ. ಈಶ್ವರ್ ಸಿಂಗ್ ಕವಿತಾಳ ಮತ್ತು ಇತರರು ಉಪಸ್ಥಿತರಿದ್ದರು.

ಹುಟ್ಟುಹಬ್ಬದ ಶುಭಾಶಯಗಳು



ಜಿಲ್ಲಾ ವಾಲ್ಮೀಕಿ ನಾಯಕ ಯುವ ಘಟಕದ ಗೌರವಾಧ್ಯಕ್ಷರೂ,
ನಮ್ಮ ಆತ್ಮೀಯರೂ ಆದ
ಶ್ರೀ ಪ್ರಶಾಂತ್ ಹೆಚ್.ವಿ (ಪಚ್ಚಿ)
ಅವರಿಗೆ ಹುಟ್ಟುಹಬ್ಬದ ಹಾರ್ದಿಕ ಶುಭಾಶಯಗಳು.
ಶ್ರೀಯುತರಿಗೆ ಭಗವಂತನು ಆಯುರಾರೋಗ್ಯ ಭಾಗ್ಯ ಕರುಣಿಸಲೆಂದು ಪ್ರಾರ್ಥಿಸುತ್ತೇವೆ.

✦ ಶ್ರೀನಿವಾಸ ದಾಸಕರಿಯಪ್ಪ ಗೆಳೆಯರ ಬಳಗ
✦ ಹ್ಯಾಪಿ ಫ್ರೆಂಡ್ಸ್ ಗ್ರೂಪ್, ವಿನೋಬನಗರ
✦ ಇಂಡಿಯನ್ ಕಾಫಿ ಬಾರ್ ಗೆಳೆಯರ ಬಳಗ, ಹಳೇ ಬಸ್ ನಿಲ್ದಾಣ
✦ ಟೀ ಲಾಂಜ್ ಗೆಳೆಯರ ಬಳಗ, ದಾವಣಗೆರೆ



## ತಾಂಡಾ ಅಭಿವೃದ್ಧಿ ನಿಗಮದ ಅಧ್ಯಕ್ಷರಿಗೆ ಶ್ರೀಗಳ ಆಶೀರ್ವಾದ

ದಾವಣಗೆರೆ,ಜು.7 - ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಎನ್. ಜಯದೇವ ನಾಯಕ ಅವರು ಸಾಣೇಹಳ್ಳಿ ತರಳಬಾಳು ಶಾಖಾ ಮಠಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಆಶೀರ್ವಾದ ಮಾಡಿದರು.

## ಇಂದು ಪುರಿ ಶ್ರೀ ಜಗನ್ನಾಥ ಯಾತ್ರೆ



ಅಂತರರಾಷ್ಟ್ರೀಯ ಕೃಷ್ಣ ಭಾವನಾಮೃತ ಸಂಘ (ಇಸ್ಕಾನ್) ವತಿಯಿಂದ 3ನೇ ವರ್ಷದ ಪುರಿ ಶ್ರೀ ಜಗನ್ನಾಥ ರಥಯಾತ್ರೆಯು ದಾವಣಗೆರಯಲ್ಲಿ ಇಂದು ನಡೆಯಲಿದೆ ಎಂದು ಇಸ್ಕಾನ್ ಜಿಲ್ಲಾ ಮುಖ್ಯಸ್ಥರಾದ ಅವಧೂತ ಚಂದ್ರ ದಾಸರು ತಿಳಿಸಿದ್ದಾರೆ.

ಮಧ್ಯಾಹ್ನ 1.30ಕ್ಕೆ ಮಂಡಿಪೇಟೆಯ ಕೋದಂಡ ರಾಮ ದೇವಸ್ಥಾನದಿಂದ ನೂತನ ರಥದಲ್ಲಿ, ಜಗನ್ನಾಥನ ರಥಯಾತ್ರೆ ಜರುಗಲಿದೆ.

ಸಂಸದರಾದ ಡಾ. ಪ್ರಭಾ ಮಲ್ಲಿಕಾರ್ಜುನ್ ರಥಯಾತ್ರೆ ಉದ್ಘಾಟಿಸಲಿದ್ದಾರೆ. ಸಂಜೆ 5ಕ್ಕೆ ಜಗನ್ನಾಥನ ಮಹಾ ಮಂಗಳಾರತಿ ಆದ ನಂತರ ಗುಂಡಿ ಮಹಾದೇವಪ್ಪ ಕಲ್ಯಾಣ ಮಂಟಪದಲ್ಲಿ ಸಮಾರೋಪ ನಡೆಯಲಿದ್ದು, ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಸಮಾರೋಪ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಾರೆ.


ಸಮಾರೋಪ ಕಾರ್ಯಕ್ರಮದಲ್ಲಿ ನೃತ್ಯ, ನಾಟಕ ಮತ್ತು ಗುರುಗಳಿಂದ ಆಶೀರ್ವಚನ ಹಾಗೂ ಪ್ರಸಾದ ವ್ಯವಸ್ಥೆ ಆಯೋಜಿಸಿದೆ ಎಂದರು.

## ಕಾಶ್ಮೀರ : ಕಾರ್ಯಾಚರಣೆಗಳಲ್ಲಿ ಆರು ಉಗ್ರರು ಹತ : ಇಬ್ಬರು ಸೈನಿಕರು ಹುತಾತ್ಮ

ಶ್ರೀನಗರ, ಜು. 7 - ಜಮ್ಮು ಮತ್ತು ಕಾಶ್ಮೀರದ ಕುಲ್ಗಾಂ ಜಿಲ್ಲೆಯಲ್ಲಿ ನಡೆದ ಅವಳಿ ಕಾರ್ಯಾಚರಣೆಗಳಲ್ಲಿ ಆರು ಉಗ್ರರು ಹತರಾಗಿದ್ದಾರೆ.ಕಾರ್ಯಾಚರಣೆಗಳಲ್ಲಿ ಇಬ್ಬರು ಸೈನಿಕರು ಹುತಾತ್ಮರಾಗಿದ್ದಾರೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಮೊಡೆರ್ಗಾಂ ಎಂಬಲ್ಲಿ ನಡೆಸಲಾದ ಕಾರ್ಯಾಚರಣೆಯಲ್ಲಿ ಉಗ್ರರ ಎರಡು ಮೃತದೇಹಗಳನ್ನು ವಶಪಡಿಸಿಕೊಳ್ಳಲಾಗಿದೆ.

ಚಿನ್ನಿಗಂ ಎಂಬಲ್ಲಿ ಉಗ್ರರ ನಾಲ್ಕು ಮೃತ ದೇಹಗಳು ಪತ್ತೆಯಾಗಿವೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಶನಿವಾರದಿಂದ ಈ ಎರಡು ಕಡೆ ಕಾರ್ಯಾಚರಣೆ ಆರಂಭಿಸಲಾಗಿತ್ತು.

## ಐರಣಿ : ಇಂದು ಮುಪ್ಪಿನಾರ್ಯ, ನಿಂಗಜ್ಜ ಶ್ರೀಗಳ ಪುಣ್ಯಾರಾಧನೆ



ರಾಣೇಬೆನ್ನೂರು ಸಮೀಪದ ಐರಣಿ ಹೊಳೆಮಠದ ಮಹಾ ತಪಸ್ವಿ ಶ್ರೀ ಗುರು ಮುಪ್ಪಿನಾರ್ಯ ಮಹಾತ್ಮಾಜಿಯವರ 41ನೇ ವರ್ಷದ ಪುಣ್ಯಾರಾಧನೆ ಹಾಗೂ ಶ್ರೀ ನಿಂಗಜ್ಜ ಸ್ವಾಮಿಯವರ 10ನೇ ವರ್ಷದ ಪುಣ್ಯಾರಾಧನೆ ಕಾರ್ಯಕ್ರಮವು ಐರಣಿ ಗ್ರಾಮದ ಶ್ರೀ ಗುರುಕುಲ ಕ್ಷೇತ್ರ ಮನೆ ಮಠದಲ್ಲಿ ಇಂದು ನಡೆಯಲಿದೆ.

ಅಂದು ಪ್ರಾತಃಕಾಲ 9 ಗಂಟೆಗೆ ಚಳಗೇರಿಯ ಶ್ರೀ ಚನ್ನಯ್ಯ ಶಾಸ್ತ್ರಿಗಳವರಿಂದ ಸಾಮೂಹಿಕ ಶ್ರೀ ಪಂಚಾಕ್ಷರಿ ಮಹಾ ಮಂತ್ರ ಜಪದೊಂದಿಗೆ ಶ್ರೀಗಳವರ ಪಾದುಕಾಭಿಷೇಕ, ಬಿಲ್ವಾರ್ಚನೆ ಪೂಜೆ ಜರುಗಲಿದೆ. ನಂತರ ಮಹಾಮಂಗಳಾರತಿ, ಪ್ರಸಾದ ವಿತರಣೆ ಏರ್ಪಾಡಾಗಿದೆ.

ಈ ಎಲ್ಲಾ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಶ್ರೀ ಗಜದಂಡ ಮಹಾಸ್ವಾಮೀಜಿ ವಹಿಸುವರು.




## ಭಾರತ್ ಅಕ್ಕಿ ಬಂದ್ ಖಂಡಿಸಿ ನಗರದಲ್ಲಿ ಇಂದು ಕಾಂಗ್ರೆಸ್ ಪ್ರತಿಭಟನೆ

ಕೇಂದ್ರ ಸರ್ಕಾರ ಕಳೆದ 3 ತಿಂಗಳ ಹಿಂದೆಯಷ್ಟೇ ಜಾರಿಗೆ ತಂದ ಭಾರತ್ ಅಕ್ಕಿ ಯೋಜನೆಯನ್ನು ರದ್ದುಗೊಳಿಸಿರುವುದನ್ನು ಖಂಡಿಸಿ ಜಿಲ್ಲಾ ಕಾಂಗ್ರೆಸ್‌ನಿಂದ ಇಂದು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಬೆಳಿಗ್ಗೆ 11.30ಕ್ಕೆ ಮಹಾನಗರ ಪಾಲಿಕೆಯ ಮಹಾತ್ಮ ಗಾಂಧೀಜಿ ಪ್ರತಿಮೆ ಮುಂಭಾಗದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಹೆಚ್.ಬಿ.ಮಂಜಪ್ಪ ಅಧ್ಯಕ್ಷತೆಯಲ್ಲಿ ಈ ಪ್ರತಿಭಟನೆ ನಡೆಯಲಿದೆ ಎಂದು ಜಿಲ್ಲಾ ಪ್ರಧಾನ ಕಾರ್ಯದರ್ಶಿ ದಿನೇಶ್ ಕೆ.ಶೆಟ್ಟಿ ತಿಳಿಸಿದ್ದಾರೆ.

ACCOUNTANT CUM ADMIN
WANTED
For Females only
Time 10 AM to 7 PM
Attractive Salary Offered
Whatsapp your resume
88844 19931
88844 19930




## ಸಾಹಿತಿ ಡಾ. ರೂಪಶ್ರೀ ಶಶಿಕಾಂತ್ ಅವರ ಶ್ರೀಕೃಷ್ಣಧ್ಯಾನಾಮೃತ ಕೃತಿಗೆ ಪ್ರಶಂಸಾ ಪತ್ರ



ದಾವಣಗೆರೆ, ಜು.7- ಬೆಂಗಳೂರಿನ ಲೇಖಿಕಾ ಸಾಹಿತ್ಯ ವೇದಿಕೆ ವತಿಯಿಂದ ಕೊಡ ಮಾಡುವ 'ಜಲಜಾ ಗಂಗೂರ್ ಹರಿದಾಸ ಸಾಹಿತ್ಯ ಪ್ರಶಸ್ತಿ'ಯನ್ನು ಬೆಂಗಳೂರಿನ ಜಯನಗರದ ವಿಜಯ ಪಿಯು ಕಾಲೇಜಿನಲ್ಲಿ ಮೊನ್ನೆ ನಡೆದ ಸಮಾರಂಭದಲ್ಲಿ ಶ್ರೀಮತಿ ಲೀಲಾವತಿ ಕೆ.ಕುಲ್ಕರ್ಣಿ ಅವರಿಗೆ ನೀಡಿ ಗೌರವಿಸಲಾಯಿತು. ಇದೇ ಸಂದರ್ಭದಲ್ಲಿ ದಾವಣಗೆರೆಯ ದಂತ ವೈದ್ಯರೂ, ಹಿರಿಯ ಸಾಹಿತಿಯೂ ಆಗಿರುವ ಡಾ. ರೂಪಶ್ರೀ ಶಶಿಕಾಂತ್ ಅವರ 'ಶ್ರೀಕೃಷ್ಣಧ್ಯಾನಾಮೃತ' ಪುಸ್ತಕಕ್ಕೆ ಪ್ರಶಂಸಾ ಪತ್ರ ಮತ್ತು ಪುಸ್ತಕ ಬಹುಮಾನ ನೀಡಿ ಗೌರವಿಸಲಾಯಿತು.

ssims SPARSH
CENTRE FOR ACCIDENTS BONE & JOINT CARE
ಸ್ಪರ್ಶ್ ಆಸ್ಪತ್ರೆ - ಬೆಂಗಳೂರು,
ಇಲ್ಲಿನ ಪ್ರಮುಖ ಮೂಳೆ ಹಾಗೂ ಕೀಲು ಮರುಜೋಡಣಾ ಶಸ್ತ್ರಚಿಕಿತ್ಸಾ ತಜ್ಞರು
ಪ್ರತೀ ಹದಿನೈದು ದಿನಗಳಿಗೊಮ್ಮೆ
ನಿಮ್ಮ ದಾವಣಗೆರೆಗೆ ಭೇಟಿ ನೀಡುತ್ತಾರೆ
ಡಾ. ರವಿಕುಮಾರ್ ಮುಕಾರ್ತಿಹಾಳ್
D'Ortho, DNB (Ortho), Fellowship in Arthroplasty (Depuy, SPARSH India), Fellowship in Septic & Aseptic Revision Joint Replacement surgery (EndoKlinik, Germany)
ಮೂಳೆ ಮತ್ತು ಕೀಲು ಮರುಜೋಡಣಾ ಶಸ್ತ್ರಚಿಕಿತ್ಸಕರು
• ಕೀಲು ನೋವು • ಕೀಲು ಮರುಜೋಡಣೆ
• ಮೊಣಕಾಲು ನೋವು • ಹಿಪ್ ಮರುಜೋಡಣೆ
• ಭುಜದ ನೋವು • ರಿವಿಷನ್ ಶಸ್ತ್ರಚಿಕಿತ್ಸೆ
• ಸ್ಪೋರ್ಟ್ಸ್ ಇಂಜುರೀಸ್ • ಡಿಫಾರ್ಮಿಟಿ ಸರಿಪಡಿಸುವಿಕೆ
ಇತರೇ ಮೂಳೆ ಮತ್ತು ಕೀಲು ಸಮಸ್ಯೆಗೆ ಸಂಪರ್ಕಿಸಿ
ದಿನಾಂಕ: ಗುರುವಾರ, 11ನೇ ಜುಲೈ 2024 । ಸಮಯ: ಬೆಳಿಗ್ಗೆ 11 ರಿಂದ ಸಂಜೆ 4 ರವರೆಗೆ
ಹೊರ ರೋಗಿಗಳ ಕ್ಲಿನಿಕ್ ವಿಳಾಸ : ಎಸ್. ಎಸ್. ಸ್ಪೆಷಾಲಿಟಿ ಕ್ಲಿನಿಕ್, ಮೋದಿ ಕಾಂಪೌಂಡ್, ಎಂ.ಸಿ.ಸಿ. 'ಎ' ಬ್ಲಾಕ್, ಮೋತಿ ವೀರಪ್ಪ ಕಾಲೇಜು ಹತ್ತಿರ, ದಾವಣಗೆರೆ - 577 002
ನೋಂದಣಿಗಾಗಿ ಕರೆಮಾಡಿ: 96869 29090 / 99800 33277
ಸ್ಪರ್ಶ್ ಆಸ್ಪತ್ರೆ ಎಲ್ಲಾ ಆರೋಗ್ಯ ವಿಮಾ (TPA) ಯೋಜನೆಯಡಿಯಲ್ಲಿ ಅಂಗೀಕೃತವಾಗಿದೆ







KA/SK/DVG-028/2024-2026. O/P @ B.V. Nagar P.O. JANATHAVANI - Published, Owned and Printed by M.S. Vikas, at Jayadhara Offset Printers, # 605, Hadadi Road, Davangere - 5, Published from # 605, Hadadi Road, Davangere - 5. Editor: M.S. Vikas